ಸಂಪುಟ : 14 Volume ಸಂಚಿಕೆ : 55 Issue ಪುಟಗಳು : 08 Pages ಮಂಗಳವಾರ 02 ಜೂನ್ 2026 ₹4 PRGINO.120927 (RNINO:KARKAN/2011/48371) BDR/054/2026-2027 www.mallammanudi.in mallammanudi@gmail.com 9448604450, 9845028349

ಬೀದರ । ಕಲ್ಬುರ್ಗಿ । ಯಾದರ್ಗಿ । ರಾಯಚೂರು । ಕೊಪ್ಪಳ । ಬಳ್ಳಾರಿ । ಬಾಗಲಕೋಟಬಜಜಜಬಬಜಜಟೆ । ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲೆ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

**ಬೆಳಗು**

ಧರ್ಮ ಎನ್ನುವುದು ಲೋಕದ ಹಿತಕ್ಕಾಗಿಯೇ ಹೊರತು ; ಲೋಕ ಧರ್ಮದ ಹಿತಕ್ಕಾಗಿ ಅಲ್ಲ.
--ಡಿ.ವಿ.ಜಿ.

ಸಂಪಾದಕರು: ರಮೇಶ ರೆಡ್ಡಿ

# ದೇಶದ ಕಾಳಜಿ ಇಲ್ಲದ ಮಾತಿನ ಮಲ್ಲ ಮೋದಿ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



ಪ್ರಧಾನಿ ನರೇಂದ್ರ ಮೋದಿ ಅವರು ಬರೀ ಮಾತಿನ ಮಲ್ಲ. ಅವರಿಗೆ ದೇಶದ ಸಾಮಾನ್ಯ ಜನರ ಬಗ್ಗೆ ಯಾವುದೇ ಕಾಳಜಿ ಇಲ್ಲ. ಪ್ರಸ್ತುತ ಕೇಂದ್ರ ಸರ್ಕಾರವು ದೇಶದ ಎಲ್ಲ ಪ್ರಮುಖ ಕ್ಷೇತ್ರಗಳಲ್ಲೂ ಸಂಪೂರ್ಣವಾಗಿ ವಿಫಲವಾಗಿದೆ ಎಂದು ಎಐಸಿಸಿ ಅಧ್ಯಕ್ಷ ಹಾಗೂ ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಡಾ. ಮಲ್ಲಿಕಾರ್ಜುನ್ ಖರ್ಗೆ ಅವರು ಆರೋಪಿಸಿದರು.

ಸೋಮವಾರ ಬೆಳಿಗ್ಗೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರದಲ್ಲಿರುವ ಬಿಜೆಪಿ ಸರ್ಕಾರದ ಜನವಿರೋಧಿ ನೀತಿಗಳು ಹಾಗೂ ದೇಶದಲ್ಲಿ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿರುವ ಆರ್ಥಿಕ ಬಿಕ್ಕಟ್ಟಿನ ಕುರಿತು ಅಂಕಿ–ಅಂಶಗಳ ಸಮೇತ ವಾಗ್ದಾಳಿ ನಡೆಸಿದರು.

ದೇಶದಲ್ಲಿ ಪೆಟ್ರೋಲ್, ಡೀಸೆಲ್ ಹಾಗೂ ಅಡುಗೆ ಅನಿಲದ ದರಗಳನ್ನು ದಿನದಿಂದ ದಿನಕ್ಕೆ ಯದ್ವಾತದ್ವಾ ಜಾಸ್ತಿ ಮಾಡಲಾಗುತ್ತಿದೆ ಎಂದು ಖರ್ಗೆ ಆಕ್ರೋಶ ಹೊರಹಾಕಿದರು. ಈ ದೇಶದ ಜನ ನರೇಂದ್ರ ಮೋದಿ ಅವರ ಮೇಲೆ ನಂಬಿಕೆ ಇಟ್ಟು ಭಾರಿ ಆಶೀರ್ವಾದ ಮಾಡಿದ್ದಾರೆ. ಆದರೆ, ದೇಶದ ಬಡವರ ಬದುಕಿನ ಬಗ್ಗೆ ಅವರಿಗೆ ಕನಿಷ್ಠ ಕಾಳಜಿಯೂ ಇಲ್ಲ. ಸತತ ದರ ಏರಿಕೆಯಿಂದಾಗಿ ಇವತ್ತು ಸಾಮಾನ್ಯ ಜನರ ಮೇಲೆ ಅತಿಯಾದ ಆರ್ಥಿಕ ಹೊರೆ ಬೀಳುತ್ತಿದೆ. ಪ್ರಸ್ತುತ ಬಿಜೆಪಿ ಸರ್ಕಾರವು ದೇಶದ ಜನರ ವಿಶ್ವಾಸವನ್ನು ಸಂಪೂರ್ಣವಾಗಿ ಕಳೆದುಕೊಂಡಿದೆ. ಜನರ ದಿನನಿತ್ಯದ ನೈಜ ಸಮಸ್ಯೆಗಳಿಗೆ ಸೂಕ್ತ ಪರಿಹಾರ ಹುಡುಕುವ ಬದಲು, ಪ್ರಧಾನಿಯವರು ಕೇವಲ ತಮ್ಮ ಆಕರ್ಷಕ ಮಾತಿನಲ್ಲೇ ಪ್ರತಿಯೊಬ್ಬರಿಗೂ ಮನವರಿಕೆ ಮಾಡಿಕೊಡುವ ಮಾತಿನ ಮಲ್ಲನ ಕೆಲಸ ಮಾಡುತ್ತಿದ್ದಾರೆ ಎಂದು ಅವರು ಲೇವಡಿ ಮಾಡಿದರು.

ಕೇಂದ್ರದ ಮೋದಿ ಸರ್ಕಾರವು ತನ್ನ ವೈಫಲ್ಯಗಳನ್ನು ಮುಚ್ಚಿಕೊಳ್ಳಲು ನಿರಂತರವಾಗಿ ವಿರೋಧ ಪಕ್ಷಗಳನ್ನೇ ಗುರಿಯಾಗಿಸಿಕೊಂಡು ರಾಜಕೀಯ ಮಾಡುತ್ತಿದೆ ಎಂದು ಎಐಸಿಸಿ ಅಧ್ಯಕ್ಷರು ದೂರಿದರು. ಬಿಜೆಪಿ ಸರ್ಕಾರವು ಪ್ರತಿಯೊಂದು ಸಣ್ಣ ವಿಷಯಕ್ಕೂ ವಿರೋಧ ಪಕ್ಷಗಳನ್ನು ಬೈಯುವುದನ್ನೇ ತನ್ನ ಪ್ರಮುಖ ಕಾಯಕ ಮಾಡಿಕೊಂಡಿದೆ. ವಿರೋಧ ಪಕ್ಷಗಳು ದೇಶದ ಅಭಿವೃದ್ಧಿಗೆ ಸಹಕರಿಸುತ್ತಿಲ್ಲ ಎಂದು ಸುಳ್ಳು ದೂರುಗಳನ್ನು ಹೇಳುತ್ತಾ ಜನರ ಹಾದಿ ತಪ್ಪಿಸುತ್ತಿದೆ. ಆದರೆ, ವಿರೋಧ ಪಕ್ಷಗಳು ಯಾವಾಗಲೂ ದೇಶದ ಪರವಾಗಿಯೇ ಇವೆ ಮತ್ತು ದೇಶದ ಜನರ ಕಲ್ಯಾಣದ ಬಗೆಗೆ ನಿರಂತರವಾಗಿ ಚಿಂತನೆ ಮಾಡುತ್ತಿವೆ ಎಂದು ಅವರು ಸ್ಪಷ್ಟಪಡಿಸಿದರು.

ಚುನಾವಣಾ ಸಂದರ್ಭದಲ್ಲಿ ಬಿಜೆಪಿ ಜನರಿಗೆ ಏನೆಲ್ಲಾ ಆಕರ್ಷಕ ಭರವಸೆಗಳನ್ನು ಕೊಟ್ಟಿತ್ತೋ, ಆ ಪೈಕಿ ಒಂದನ್ನೂ ಸಹ ಅಧಿಕಾರಕ್ಕೆ ಬಂದ ಮೇಲೆ ಈಡೇರಿಸುತ್ತಿಲ್ಲ ಎಂದು ಖರ್ಗೆ ಟೀಕಿಸಿದರು. ದೇಶದಲ್ಲಿ ಪ್ರಸ್ತುತ ಹಣದುಬ್ಬರ ನಿಯಂತ್ರಣಕ್ಕೆ ಸಿಗದೆ ಏರುತ್ತಲೇ ಇದೆ, ಯುವಕರಲ್ಲಿ ನಿರುದ್ಯೋಗದ ಸಮಸ್ಯೆ ಹೆಚ್ಚುತ್ತಿದೆ. ಇದರ ಜೊತೆಗೆ ಬಡವರ ಬದುಕಿಗೆ ಆಸರೆಯಾಗಿದ್ದ ನರೇಗಾ (ಉದ್ಯೋಗ ಖಾತರಿ) ಯೋಜನೆಯನ್ನು ಸಹ ಕೇಂದ್ರ ಸರ್ಕಾರವು ವ್ಯವಸ್ಥಿತವಾಗಿ ಅನುದಾನ ಕಡಿತಗೊಳಿಸಿ ದುರ್ಬಲಗೊಳಿಸಿದೆ. ಈ ದೇಶವನ್ನು ಆಳುತ್ತಿರುವ ಮೋದಿ ಸರ್ಕಾರವು ಇವತ್ತು ಆರ್ಥಿಕ, ಸಾಮಾಜಿಕ ಹಾಗೂ ಉದ್ಯೋಗ ಸೃಷ್ಟಿ ಸೇರಿದಂತೆ ಎಲ್ಲ ರಂಗಗಳಲ್ಲೂ ಸಂಪೂರ್ಣವಾಗಿ ದಿವಾಳಿಯಾಗಿದೆ ಎಂದು ಅವರು ಕೇಂದ್ರದ ವಿರುದ್ಧ ಆಕ್ರೋಶ ಹೊರಹಾಕಿದರು.

## ಪಾಟೀಲ ಪರಿವಾರದ ಸೇವೆ ಪರಿಗಣಿಸಿ ಸಚಿವ ಸ್ಥಾನ ನೀಡಲಿ

• ಮಲ್ಲಮ್ಮ ನುಡಿ ವಾರ್ತೆ ಬೀದರ



ರಾಜ್ಯ ರಾಜಕಾರಣದಲ್ಲಿ ಹಲವು ದಶಕಗಳಿಂದ ಜನಸೇವೆ, ಪಕ್ಷಸಂಘಟನೆ ಮತ್ತು ಅಭಿವೃದ್ಧಿ ಕಾರ್ಯಗಳ ಮೂಲಕ ಗುರುತಿಸಿಕೊಂಡಿರುವ ಹುಮನಾಬಾದ್ ಪಾಟೀಲ ಪರಿವಾರದ ಕೊಡುಗೆಯನ್ನು ಸರ್ಕಾರ ಮತ್ತು ಪಕ್ಷದ ನಾಯಕತ್ವ ಗಂಭೀರವಾಗಿ ಪರಿಗಣಿಸಬೇಕಾಗಿದೆ. ಬೀದರ್ ಜಿಲ್ಲೆ ಸೇರಿದಂತೆ ಇತರೆ ಕಡೆ ಕಾಂಗ್ರೆಸ್ ಪಕ್ಷದ ಬೆಳವಣಿಗೆಗಾಗಿ ನಿರಂತರವಾಗಿ ದುಡಿದಿರುವ ಈ ಕುಟುಂಬವು ಜನರೊಂದಿಗೆ ನಿಕಟ ಸಂಪರ್ಕ ಹೊಂದಿದ್ದು, ಪಕ್ಷದ ಬಲವರ್ಧನೆಗೆ ಮಹತ್ವದ ಪಾತ್ರ ವಹಿಸಿದೆ.

ಗ್ರಾಮೀಣ ಭಾಗದ ರೈತರು, ಕಾರ್ಮಿಕರು, ಯುವಕರು ಹಾಗೂ ಬಡವರ ಸಮಸ್ಯೆಗಳಿಗೆ ಸ್ಪಂದಿಸುತ್ತಾ ಬಂದಿರುವ ಪಾಟೀಲ ಪರಿವಾರವು ಜನಸೇವೆಯ ಮೂಲಕ ಜನರ ವಿಶ್ವಾಸವನ್ನು ಗಳಿಸಿದೆ. ಚುನಾವಣಾ ಸಂದರ್ಭಗಳಲ್ಲಿ ಮಾತ್ರವಲ್ಲದೆ, ಸಾಮಾನ್ಯ ದಿನಗಳಲ್ಲಿಯೂ ಜನರ ಕಷ್ಟಗಳಿಗೆ ಸ್ಪಂದಿಸುವ ಮೂಲಕ ಉತ್ತಮ ರಾಜಕೀಯ ಸಂಸ್ಕೃತಿಗೆ ಮಾದರಿಯಾಗಿದೆ.

ಹೀಗಾಗಿ ಪಕ್ಷ ನಿಷ್ಠೆ, ಜನಪರ ಸೇವೆ ಹಾಗೂ ಸಂಘಟನೆಗೆ ನೀಡಿರುವ ಕೊಡುಗೆಯನ್ನು ಗಮನದಲ್ಲಿಟ್ಟುಕೊಂಡು ಪಾಟೀಲ ಪರಿವಾದ ಎಂಎಲ್ ಸಿ ಡಾ. ಚಂದ್ರಶೇಖರ ಪಾಟೀಲ ರವರಿಗೆ ಸಚಿವ ಸಂಪುಟದಲ್ಲಿ ಸೂಕ್ತ ಸ್ಥಾನಮಾನ ನೀಡಬೇಕೆಂಬ ಬೇಡಿ–ಕೆ ಕಾರ್ಯಕರ್ತರು ಹಾಗೂ ಅಭಿಮಾನಿಗಳ ವಲಯದಿಂದ ಕೇಳಿಬರುತ್ತಿದೆ. ಇದರಿಂದ ಪಕ್ಷದ ಕಾರ್ಯಕರ್ತರಲ್ಲಿ ಹೊಸ ಉತ್ಸಾಹ ಮೂಡುವುದರ ಜೊತೆಗೆ ಜನರ ಆಶೋತ್ತರಗಳಿಗೆ ಇನ್ನಷ್ಟು ಪರಿಣಾಮಕಾರಿಯಾಗಿ ಸ್ಪಂದಿಸಲು ಅವಕಾಶ ಸಿಗಲಿದೆ.

ಸರ್ಕಾರ ಮತ್ತು ಪಕ್ಷದ ಹೈಕಮಾಂಡ್ ಪಾಟೀಲ ಪರಿವಾರದ ದೀರ್ಘಕಾಲದ ಸೇವೆಯನ್ನು ಪರಿಗಣಿಸಿ ಸೂಕ್ತ ಗೌರವ ಹಾಗೂ ಜವಾಬ್ದಾರಿ ನೀಡಬೇಕು ಎಂಬುದು ಸಾರ್ವಜನಿಕರ ಒತ್ತಾಯವಾಗಿದೆ. ಮಾಜಿ ಸಚಿವ ರಾಜಶೇಖರ ಪಾಟೀಲ, ವಿಧಾನ ಪರಿಷತ್ ಸದಸ್ಯ ಭೀಮರಾವ ಪಾಟೀಲ ಹಾಗೂ ಏರೆಡು ಬಾರಿ ವಿಧಾನ ಪರಿಷತ್ ಸದಸ್ಯರಾಗಿ ಆಯ್ಕೆಯಾದ. ಡಾ.ಚಂದ್ರಶೇಖರ ಪಾಟೀಲ ರವರು ಪಕ್ಷದ ನಿಷ್ಠೆಗಾಗಿ ದುಡಿಯುತ್ತಾ ಬರುತ್ತಿದ್ದಾರೆ. ಈ ಕುಟುಂಬಕ್ಕೆ ಮಂತ್ರಿ ಸ್ಥಾನ ನೀಡಬೇಕಾಗಿ ಕಲ್ಯಾಣ ಕರ್ನಾಟಕ. ಜನರ ಬೇಡಿಕೆಯಾಗಿದೆ.

## ಆರು ಮಂದಿ ಹತ್ಯೆ 12 ಹಂತಕರ ಸೆರೆ



ವಿಜಯಪುರ: ಜಿಲ್ಲೆಯನ್ನು ಬೆಚ್ಚಿ ಬೀಳಿಸಿದ್ದ ಒಂದೇ ಕುಟುಂಬದ ಐದು ಮಂದಿ ಸೇರಿ ಆರು ಮಂದಿಯನ್ನು ಭೀಕರವಾಗಿ ಕೊಲೆ ಮಾಡಿ ಪರಾರಿಯಾಗಿದ್ದ 12 ಮಂದಿ ಆರೋಪಿಗಳನ್ನು ಚಡಚಣ ಪೊಲೀಸರು ಬಂಧಿಸಿದ್ದಾರೆ.

ಬಂಧಿತ 12 ಮಂದಿ ಆರೋಪಿಗಳನ್ನು ಇಂಡಿ ನ್ಯಾಯಾಲಯಕ್ಕೆ ಹಾಜರುಪಡಿಸಿ ಮತ್ತೆ ಕಸ್ಟಡಿಗೆ ತೆ–ಗೆದುಕೊಂಡು ಪೋಲಿಸರು ವಿಚಾರಣೆ ಕೈಗೊಂಡಿದ್ದಾರೆ. ವಿಜಯಪುರ ಜಿಲ್ಲೆ ಚಡಚಣ ತಾಲ್ಲೂಕಿನ ಗೋವಿಂದ ಪುರದಲ್ಲಿ ಕಳೆದ ಮೇ.29ರಂದು ಸಂಜೆ ನಡೆದ ಭೀಕರ ಆರು ಮಂದಿಯ ಹತ್ಯಾಕಾಂಡ ನಡೆದಿತ್ತು.ಮಹರಾಷ್ಟ್ರದ ಸೊಲ್ಲಾಪುರ ಜಿಲ್ಲೆಯ ಅಕ್ಕಲಕೋಟ್ ತಾಲ್ಲೂಕಿನ ಕೂಡ್ಲಾ ಗ್ರಾಮದಲ್ಲಿ ಮುಂಜಾನೆ ಕಾರ್ಯಾಚರಣೆ ಕೈಗೊಂಡು ಆರೋಪಿಗಳನ್ನು ಬಂಧಿಸಲಾಗಿದೆ. ಈ ಪ್ರಕರಣದಲ್ಲಿ ಭಾಗಿಯಾಗಿ ತಲೆಮರೆಸಿಕೊಂಡಿರುವ ಉಳಿದ ಆರೋಪಿಗಳಿಗಾಗಿ ಶೋಧ ನಡೆಸುತ್ತಿದ್ದೇವೆ ಎಂದು ಐಜಿಪಿ ಸಂದೀಪ್ ಪಾಟೀಲ್ ಹೇಳಿದರು.

ಘಟನೆಯಲ್ಲಿ ಹಂತಕರಿಂದ ಇಬ್ಬರು ತಪ್ಪಿಸಿಕೊಂಡು ಪ್ರಾಣಾಪಾಯದಿಂದ ಪಾರಾಗಿದ್ದವರಿಗೆ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ ಎಂದು ತಿಳಿಸಿದರು.

ಪ್ರಕರಣ ದಾಖಲಿಸಿದ್ದ ಚಡಚಣ ಠಾಣೆ ಪೊಲೀಸರು ಆರೋಪಿಗಳನ್ನು ಬಂಧಿಸಿದ್ದು, ಗ್ರಾಮದಲ್ಲಿ ವಾತಾವರಣ ತಹಬದಿಗೆ ಬಂದಿರುವುದರಿಂದ ಬಿಗಿ ಪೊಲೀಸ್ ಬಂದೋಬಸ್ತ್ ವಾಪಸು ತೆಗೆದುಕೊಳ್ಳಲಾಗಿದೆ ಎಂದು ತಿಳಿಸಿದರು

## 1.40 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ.1–ಅಪರಿಚಿತ ವ್ಯಕ್ತಿಯೊಬ್ಬ ಮನೆ ಬೀಗ ತೆರೆದು 1.40 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು ಮಾಡಿರುವ ಘಟನೆ ಇಲ್ಲಿನ ಮಹಾದೇವ ನಗರದಲ್ಲಿ ನಡೆದಿದೆ.ಜಿಲ್ಲಾ ಗೃಹ ರಕ್ಷ ದಳ ಅಧಿಕಾರಿ ಚಂದ್ರಕಾಂತ ಹಾವನೂರ ಅವರ ಮನೆ ಬೀಗ ತೆರೆದು ಕಳ್ಳ ಅಲಮಾರಿಯಲ್ಲಿದ್ದ 1 ಲಕ್ಷ ರೂ.ಮೌಲ್ಯದ ಬಂಗಾರದ ಎರಡು ಸುತ್ತುಂಗುರ ಮತ್ತು 40 ಸಾವಿರ ರೂ.ಭಾಗ್ಯವಂತಿ ದೇವಿಯ ಹುಂಡಿಯ ಹಣ ಕಳವು ಮಾಡಿಕೊಂಡು ಹೋಗಿದ್ದಾನೆ.ಇವರು ಸ್ವಗ್ರಾಮ ಹಾವನೂರ ಗ್ರಾಮದ ಹಯ್ಯಾಳ್ ಸಿದ್ದೇಶ್ವರ ಜಾತ್ರೆ ನಿಮಿತ್ಯ ಮೊದಲನೇ ಅಂತಸ್ತಿನಲ್ಲಿರುವ ಮನೆಗೆ ಬೀಗ ಹಾಕಿಕೊಂಡು ಗ್ರೌಂಡ್ ಫ್ಲೋನಲ್ಲಿರುವ ಪತ್ರಿಕೆಯ ಕಾರ್ಯಾಲಯದಲ್ಲಿ ಮನೆಯ ಬೀಗ ಇಟ್ಟು ಬೀಗ ಹಾಕದೆ ಕೊಂಡಿ ಹಾಕಿಕೊಂಡು ಹಾವನೂರ ಗ್ರಾಮಕ್ಕೆ ಹೋಗಿದ್ದರು ಎಂದು ತಿಳಿದುಬಂದಿದೆ.

## ಮೋದಿ ವಿರುದ್ಧ ಪ್ರಿಯಾಂಕ್ ಖರ್ಗೆ ಕಿಡಿ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ.1– ಒಂದು ಕಡೆ ಇಡೀ ದೇಶ ಗ್ಯಾಸ್ ಸಿಲಿಂಡರ್, ಪೆಟ್ರೋಲ್ ಹಾಗೂ ಡಿಸೇಲ್ ಕೊರತೆ ಎದುರಿಸುತ್ತಿದ್ದಾಗ, ಮತ್ತೊಂದು ಕಡೆ ಭಾರತದ ಸಾಮಾಜಿಕ ಜಾಲತಾಣದ ಪ್ರಭಾವಿ ಇನಫ್ಲೂಯೆನ್ಸರ್ ಹಾಗೂ ವಿಷಯ ರಚನಾಕಾರ ಮಹಾಮಾನವ ಮೋದಿ ಒಂದು ಜಾಗದಿಂದ ಮತ್ತೊಂದು ಜಾಗಕ್ಕೆ ಓಡಾಡುತ್ತಿದ್ದರು ಎಂದು ಚಿತ್ತಾಪುರ ಶಾಸಕ ಪ್ರಿಯಾಂಕ್ ಖರ್ಗೆ ಮೋದಿ ಅವರ ನಡೆಯನ್ನು ತೀವ್ರವಾಗಿ ಟೀಕಿಸಿದ್ದಾರೆ.ದಿ ವೈರ್ ವೆಬ್ ಸೈಟ್ ನ್ಯೂಸ್ ಪೋರ್ಟಲ್‌ನಲ್ಲಿ ಪ್ರಕಟವಾದ ಸುದ್ದಿಯ ಲಿಂಕ್ ನ್ನು ಎಕ್ಸ್ ನಲ್ಲಿ ಹಂಚಿಕೊಂಡು ಬರೆದುಕೊಂಡಿರುವ ಖರ್ಗೆ, ಇಂಧನ ಉಳಿಸುವಂತೆ ಮೇ 10 ರಂದು ಸಾರ್ವಜನಿಕರಿಗೆ ಕರೆ ನೀಡಿದ್ದ ಮೋದಿ ಪ್ರತಿಯೊಬ್ಬರು ಕಾರ್‌ಬಳಸುವ ಬದಲು ಸಾರ್ವಜನಿಕ ಸಾರಿಗೆ ಬಳಸುವ ಮೂಲಕ ಇಂಧನ ಉಳಿಸುವಂತೆ ಹೇಳಿದ್ದರು. ಆದರೆ, ಯುದ್ದ ಪ್ರಾರಂಭವಾದ70 ದಿನಗಳ ನಂತರವೂ, ಮೋದಿ ದೇಶದ 12 ರಾಜ್ಯಗಳ 53 ನಗರಗಳಿಗೆಭೇಟಿ ನೀಡಿ 25 ರೋಡ್ ಶೋಗಳು ಸೇರಿದಂತೆ 81 ಸಾರ್ವಜನಿಕ ಸಮಾರಂಭಗಳಲ್ಲಿ ಭಾಗವಹಿಸಿದ್ದಾರೆ. ಈ 81ರಲ್ಲಿಕೇವಲ 13 ಸಮಾರಂಭಗಳು ಮಾತ್ರ ಸರ್ಕಾರಿ ಕಾರ್ಯಕ್ರಮಗಳಾಗಿವೆ ಎಂದು ಅವರು ಹೇಳಿಕೆಯಲ್ಲಿ ಆಕ್ರೋಶ ಹೊರಹಾಕಿದ್ದಾರೆ.ಏರುತ್ತಿರುವ ಪೆಟ್ರೋಲಿಯಂ ಉತ್ಪನ್ನಗಳ ಬೆಲೆಯಿಂದಾಗಿ ವ್ಯಾಪಾರ ವ್ಯವಹಾರಗಳು ನಿಂತುಹೋಗಿ, ಭಾರತದ ಜನಸಾಮಾನ್ಯರು ಅಡುಗೆ ಅನಿಲ ಪಡೆದುಕೊಳ್ಳಲು ಉದ್ದನೆಯ ಪಾಳಿಯಲ್ಲಿ ನಿಂತಿರುವಾಗ, ಮೋದಿ ಅವರು ತಮ್ಮ ಸಾರ್ವಜನಿಕ ಕಾರ್ಯಕ್ರಮಕ್ಕಾಗಿ ಆಯೋಜಿಸಲಾದ ಭಾರತೀಯ ವಾಯುಪಡೆಯ ಏರೋಬ್ಯಾಟಿಕ್ ಪ್ರದರ್ಶನ ಮತ್ತು ಹೆಲಿಕಾಪ್ಟರ್ ಪುಷ್ಪ ವೃಷ್ಟಿಯನ್ನು ನೋಡಿ ಆನಂದಿಸುತ್ತಿದ್ದರು ಎಂದು ಅವರು ಕುಟುಕಿದ್ದಾರೆ.ಚುನಾವಣೆ ಫಲಿತಾಂಶ ಘೋಷಣೆಯಾದ ನಂತರದ10 ದಿನಗಳಲ್ಲಿ ಪೆಟ್ರೋಲ್ ಹಾಗೂ ಡಿಸೇಲ್ ದರಗಳನ್ನು ನಾಲ್ಕು ಸಲ ಏರಿಸಲಾಯಿತು. ಪೆಟ್ರೋಲಿಯಂ ಉತ್ಪನ್ನಗಳ ಬೆಲೆಯಲ್ಲಿ ಪದೇ ಪದೇ ಮಾಡುತ್ತಿರುವ ಹೆಚ್ಚಳ ಸಾಮಾನ್ಯ ಜನರ ಮೇಲೆ ಬಿಜೆಪಿ ನಡೆಸುತ್ತಿರುವ ವಂಚನೆ ಹಾಗೂ ಕ್ರೌರ್ಯಕ್ಕೆ ಭಾರೀ ಬೆಲೆ ತೆರಬೇಕಾಗುತ್ತದೆ ಎಂದು ಪ್ರಿಯಾಂಕ್ ಖರ್ಗೆ ಅವರು ಆಕ್ರೋಶ ಹೊರಹಾಕಿದ್ದಾರೆ.

## 4 ರಾಜ್ಯಸಭೆ, 7 ಪರಿಷತ್ ಸ್ಥಾನಗಳ ಚುನಾವಣೆಗೆ ನಾಮಪತ್ರ ಸಲ್ಲಿಕೆ ಆರಂಭ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

4 ರಾಜ್ಯಸಭೆ, 7 ಪರಿಷತ್ ಸ್ಥಾನಗಳ ಚುನಾವಣೆಗೆ ನಾಮಪತ್ರ ಸಲ್ಲಿಕೆ ಆರಂಭವಾಗಿದೆ. ಇಂದು ಎರಡೂ ಚುನಾವಣೆಗಳ ಅಧಿಸೂಚನೆ ಪ್ರಕಟವಾಗಿದೆ.ಸಿಎಂ ಆಯ್ಕೆ, ಸಂಪುಟ ರಚನೆ ಒತ್ತಡದಲ್ಲಿ ಅಭ್ಯರ್ಥಿಗಳ ಆಯ್ಕೆ ಕಾಂಗ್ರೆಸ್‌ನಲ್ಲಿ ಈಗಾಗಲೇ ವಿಳಂಬವಾಗಿದೆ. ಜೂ.8ರಂದು ನಾಮಪತ್ರಗಳ ಸಲ್ಲಿಕೆಗೆ ಕೊನೆಯ ದಿನವಾಗಿದ್ದು, ಜೂ.11ರಂದು ನಾಮಪತ್ರಗಳ ವಾಪಸಾತಿಗೆ ಕೊನೇ ದಿನವಾಗಿದೆ. ಇನ್ನು ಜೂ.18ರಂದು ಮತದಾನ ನಡೆದು ಅಂದೇ ಫಲಿತಾಂಶ ಪ್ರಕಟವಾಗಲಿದೆ. ಇನ್ನೂ ಅಭ್ಯರ್ಥಿಗಳ ಆಯ್ಕೆಯನ್ನು ಕಾಂಗ್ರೆಸ್ ಮತ್ತು ಬಿಜೆಪಿ ಫೈನಲ್ ಮಾಡಿಲ್ಲ. ಇನ್ನು 2, 3 ದಿನಗಳಲ್ಲಿ ಎರಡೂ ಪಕ್ಷಗಳಿಂದ ಅಭ್ಯರ್ಥಿಗಳ ಹೆಸರು ಫೈನಲ್ ಆಗುವ ಸಾಧ್ಯತೆ ಇದೆ. ರಾಜ್ಯಸಭೆಯ 4 ಸ್ಥಾನಗಳ ಪೈಕಿ ಕಾಂಗ್ರೆಸ್ 3, ಬಿಜೆಪಿ 1 ಗೆಲ್ಲಲು ಅವಕಾಶ ಇದೆ. ಪರಿಷತ್ ಸ್ಥಾನಗಳ ಪೈಕಿ ಕಾಂಗ್ರೆಸ್ 4, ಬಿಜೆಪಿ 2 ಸ್ಥಾನ ಸುಲಭ ಗೆಲುವು ಹಾಗೂ ಮತ್ತೊಂದು ಸ್ಥಾನಕ್ಕೂ ಕಾಂಗ್ರೆಸ್‌ನಿಂದಲೇ ಅಭ್ಯರ್ಥಿ ಕಣಕ್ಕೆ ಇಳಿಸಿ ಗೆಲ್ಲಿಸಿಕೊಳ್ಳಲು ಮುಂದಾಗಿದೆ.ಜೆಡಿಎಸ್ ವರಿಷ್ಠ ಹೆಚ್.ಡಿ. ದೇವೇಗೌಡ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಬೆಳಗಾವಿ ಬಿಜೆಪಿ ಮುಖಂಡ ಈರಣ್ಣ ಕಡಾಡಿ, ದಕ್ಷಿಣ ಕನ್ನಡ ಬಿಜೆಪಿ ಮುಖಂಡ ಕೆ.ನಾರಾಯಣ ಅವರ ಅವಧಿ ಜೂನ್ 25ರಂದು ಕೊನೆಗೊಳ್ಳಲಿದೆ. ವಿಧಾನಸಭೆಯಿಂದ ವಿಧಾನ ಪರಿಷತ್ತಿಗೆ ಚುನಾಯಿತರಾಗಿರುವ ಜೆಡಿಎಸ್‌ನ ಗೋವಿಂದ ರಾಜು, ಕಾಂಗ್ರೆಸ್‌ನ ನಸೀರ್ ಅಹಮದ್, ತಿಪ್ಪಣ್ಣಪ್ಪ ಕಮಕನೂರ ಹಾಗೂ ಬಿಕೆ ಹರಿಪ್ರಸಾದ್, ಬಿಜೆಪಿಯ ಎಂ.ಟಿ.ಬಿ ನಾಗರಾಜು, ಪ್ರತಾಪ್ ಸಿಂಹ ನಾಯಕ್, ಸುನಿಲ್ ವಲ್ಯಾಪುರೆ ಅವರ ಅವಧಿಯು ಜೂನ್ 30ರಂದು ಕೊನೆಗೊಳ್ಳಲಿದೆ.

## ಎಮ್ಮೆ ಕರೆತರಲು ಹೋಗಿದ್ದ ತಂದೆ ನೀರಿನಲ್ಲಿ ಮುಳುಗಿ ಸಾವು

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಎಮ್ಮೆಯನ್ನು ವಾಪಸ್ ಕರೆತರುವ ಸಲುವಾಗಿ ಭೀಮಾ ನದಿಗೆ ಇಳಿದಿದ್ದ ತಂದೆ ಮಗನ ಕಣ್ಣೆದುರೇ ನದಿಯಲ್ಲಿ ಮುಳುಗಿ ಸಾವನ್ನಪ್ಪಿರುವ ಮನಕಲಕುವ ಘಟನೆ ಕಲಬುರಗಿಯ ಜೇವರ್ಗಿ ತಾಲೂಕಿನ ಕಟ್ಟಿ ಸಂಗಾವಿ ಗ್ರಾಮದಲ್ಲಿ ನಡೆದಿದೆ.

ಈಜು ಬಾರದಿದ್ದರೂ ವಿಜಯ್ ರಾಜು ಎಂಬುವವರು ನದಿಗೆ ಇಳಿದಿದ್ದರು. ನದಿಯಲ್ಲಿ ನಡೆದುಕೊಂಡು ಹೋಗುತ್ತಿದ್ದಾಗ ನೀರು ಸೊಂಟದ ಮೇಲಕ್ಕೆ ಬಂದಿದೆ. ಈ ವೇಳೆ ಈಜಲು ಪ್ರಯತ್ನಿಸಿದ್ದಾರೆ. ಆದರೆ ನೀರಿನ ಸೆಳೆತಕ್ಕೆ ಸಿಲುಕಿ ಮುಳುಗಲು ಪ್ರಾರಂಭಿಸಿದರು. ಈ ವೇಳೆ ಕಾಪಾಡಿ, ಕಾಪಾಡಿ ಎಂದು ಕೂಗಿದ್ದಾರೆ.

## ಸಚಿವ ಸ್ಥಾನಕ್ಕಾಗಿ ನಾನು ದೆಹಲಿಗೆ ಹೋಗಲ್ಲ: ಯು.ಟಿ ಖಾದರ್

ಚಿಕ್ಕಬಳ್ಳಾಪುರ: ನನಗೆ ಸಚಿವ ಸ್ಥಾನ ಕೊಡುವುದು ಬಿಡುವುದು ಪಕ್ಷಕ್ಕೆ ಬಿಟ್ಟ ವಿಚಾರ ನಾನು ಸಚಿವ ಸ್ಥಾನಕ್ಕಾಗಿ ಲಾಬಿ ನಡೆಸಲು ದೆಹಲಿಗೆ ಹೋಗುತ್ತಿಲ್ಲ. ನನ್ನ ಕ್ಷೇತ್ರದಲ್ಲಿನ ಜನರ ಸಮಸ್ಯೆಗಳನ್ನು ಆಲಿಸಿ ಪರಿಹರಿಸಲು ಮಂಗಳೂರಿಗೆ ತೆರಳುತ್ತಿದ್ದೇನೆ ಎಂದು ಸ್ಪೀಕರ್ ಯು.ಟಿ ಖಾದರ್ ಹೇಳಿದರು.ಬೆಂಗಳೂರು ವಿಮಾನ ನಿಲ್ದಾಣದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ನನಗೆ ಸಚಿವ ಸ್ಥಾನ ಕೊಡೋದು ಬಿಡೋದು ಪಕ್ಷಕ್ಕೆ ಬಿಟ್ಟ ವಿಚಾರ. ಹಿಂದೆ ಕೊಟ್ಟಾಗ ಒಳ್ಳೆಯ ಕೆಲಸ ಮಾಡಿದ್ದೇನೆ. ನಾನು ಶಾಸಕನಾಗಿ ಸದನ ವೀರ ಪ್ರಶಸ್ತಿ ಪಡೆದುಕೊಂಡಿದ್ದೆ. ಸಚಿವನಾಗಿದ್ದಾಗ ಒಳ್ಳೆಯ ಕೆಲಸ ಮಾಡಿ ರಾಷ್ಟ ಪ್ರಶಸ್ತಿಯೂ ಪಡೆದುಕೊಂಡಿದ್ದೇನೆ.

## ಶಾಲಾ ಪ್ರಾರಂಭೋತ್ಸವ ಸಂಭ್ರಮ: ವಿದ್ಯಾರ್ಥಿನಿಯರಿಗೆ ಸಿಹಿ ಹಂಚಿ ಸ್ವಾಗತ

• ಮಲ್ಲಮ್ಮ ನುಡಿ ವಾರ್ತೆ ಹುಣಸಗಿ



ಪಟ್ಟಣದ ಸರಕಾರಿ ಬಾಲಕಿಯರ ಪ್ರೌಢಶಾಲೆಯಲ್ಲಿ ನೂತನ ಶೈಕ್ಷಣಿಕ ವರ್ಷದ ಅಂಗವಾಗಿ ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮ ಸಂಭ್ರಮದಿಂದ ನಡೆಯಿತು.

ಕಾರ್ಯಕ್ರಮವನ್ನು ಎಸ್‌ಡಿಎಂಸಿ ಅಧ್ಯಕ್ಷ ಸಿದ್ದರಾಮಪ್ಪ ಮುದುಗಲ್ ಸಾಹುಕಾರ ಉದ್ಘಾಟಿಸಿ, ವಿದ್ಯಾರ್ಥಿನಿಯರಿಗೆ ಸಿಹಿ ಹಂಚುವ ಮೂಲಕ ಶಾಲೆಗೆ ಸ್ವಾಗತ ಕೋರಿದರು. ಈ ಸಂದರ್ಭದಲ್ಲಿ ಪಟ್ಟಣ ಪಂಚಾಯಿತಿ ಅಧ್ಯಕ್ಷ ಮಲ್ಲಿಂಗಪ್ಪ ನಾಟೇಕಾರ, ಮುಖ್ಯೋಪಾಧ್ಯಾಯ ವಿಠ್ಠಲ್ ಬಿ. ಚೌಹಾಣ್, ಎಸ್‌ಡಿಎಂಸಿ ಉಪಾಧ್ಯಕ್ಷ ರಮೇಶ್ ವಾಲಿ, ಸದಸ್ಯರಾದ ಶರಣಮ್ಮ ಬಂಡೋಳಿ, ಗೋಪಾಲ್ ಕಟ್ಟಿಮನಿ, ಬಸವರಾಜ ಬೂದಿಹಾಳ, ಸದ್ದಾಮ್ ಬಿದರಿ ಹಾಗೂ ರುದ್ರೇಶ್ ಕುಂಬಾರ ಉಪಸ್ಥಿತರಿದ್ದರು.ಪಾಲಕರ ಸಭೆಯಲ್ಲಿ ಶಿಕ್ಷಕ ಬಸವರಾಜ ತೆಗ್ಗಳ್ಳಿ ಪ್ರಾಸ್ತಾವಿಕವಾಗಿ ಮಾತನಾಡಿ ಶಾಲೆಯ ಶೈಕ್ಷಣಿಕ ಚಟುವಟಿಕೆಗಳ ಕುರಿತು ಮಾಹಿತಿ ನೀಡಿದರು. ಇದೇ ಸಂದರ್ಭದಲ್ಲಿ ವಿದ್ಯಾರ್ಥಿನಿಯರಿಗೆ ಸಮವಸ್ತ್ರ ವಿತರಣೆ ಮಾಡಲಾಯಿತು. ಶಿಕ್ಷಕ ಮಶಾಕ್ ಬಿ. ಯಾಳಗಿ ಸಮವಸ್ತ್ರ ವಿತರಣೆಯ ಮಹತ್ವವನ್ನು ವಿವರಿಸಿದರು.

ಎಸ್‌ಡಿಎಂಸಿ ಸದಸ್ಯೆ ಶರಣಮ್ಮ ಬಂಡೋಳಿ ಮಾತನಾಡಿ, ಕಳೆದ ಸಾಲಿನ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳು ಉತ್ತಮ ಫಲಿತಾಂಶ ಸಾಧಿಸಿ ಶಾಲೆ ಹಾಗೂ ಊರಿಗೆ ಕೀರ್ತಿ ತಂದಿರುವುದು ಹೆಮ್ಮೆಯ ಸಂಗತಿ ಎಂದು ಅಭಿನಂದಿಸಿದರು.

ಕಾರ್ಯಕ್ರಮದಲ್ಲಿ ಸುಮಾರು 100ಕ್ಕೂ ಹೆಚ್ಚು ವಿದ್ಯಾರ್ಥಿನಿಯರು ಹಾಗೂ ಅನೇಕ ಪಾಲಕರು ಭಾಗವಹಿಸಿದ್ದರು. ವಿದ್ಯಾರ್ಥಿನಿಯರಿಗೆ ಸಿಹಿ ಊಟದ ವ್ಯವಸ್ಥೆ ಮಾಡಲಾಗಿತ್ತು. ಇದೇ ದಿನದಿಂದ ಶಾಲೆಯಲ್ಲಿ ಹೊಸ ಪ್ರವೇಶ ಪ್ರಕ್ರಿಯೆಯೂ ಆರಂಭಗೊಂಡಿತು.

ಕಾರ್ಯಕ್ರಮದಲ್ಲಿ ಶಿಕ್ಷಕರಾದ ಭೀಮಣ್ಣ ವಾಲ್ಮೀಕಿ, ವಿಜಯಲಕ್ಷ್ಮಿ ಕುಂಬಾರ, ಲಾಲ್ ಬಿ.ಎಂ. ಕಾಜಿ, ಲಲಿತಾಬಾಯಿ ಮಠ, ಮಶಾಕ್ ಬಿ. ಯಾಳಗಿ, ಯೂನುಸ್ ಕೊತ್ವಾಲ್, ತಮ್ಮಣ್ಣ ಗುಡಿಹಾಳ, ಸೋಮನಗೌಡ ಬಳವಾಟ್ ಹಾಗೂ ಗುರುರಾಜ ಜೋಶಿ ಸೇರಿದಂತೆ ಶಾಲೆಯ ಎಲ್ಲಾ ಶಿಕ್ಷಕರು ಉಪಸ್ಥಿತರಿದ್ದರು.

ದೈಹಿಕ ಶಿಕ್ಷಣ ಶಿಕ್ಷಕ ನಾಗನಗೌಡ ಪಾಟೀಲ್ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

**ಲಾಡ್ಲೆ ಮಶಾಕ್ ದರ್ಗಾ ಘರ್ಷಣೆ ಪ್ರಕರಣಗಳ ಹಿಂತೆಗೆತ ವಿರೋಧಿಸಿ ರಾಜ್ಯಾದ್ಯಂತ ಬಿಜೆಪಿ ಪ್ರತಿಭಟನೆ**

## ರೈತರು, ಕೃಷಿಕರು, ಕೂಲಿ ಕಾರ್ಮಿಕರ ನೆರವಿಗೆ ಸರ್ಕಾರ ಮುಂದೆ ಬರಬೇಕು

ರಾಜ್ಯದ ಆರ್ಥಿಕತೆಯ ಬೆನ್ನೆಲುಬಾಗಿರುವ ರೈತರು, ಕೃಷಿಕರು ಹಾಗೂ ಕೂಲಿ ಕಾರ್ಮಿಕರ ಜೀವನ ಇಂದು ಹಲವು ಸವಾಲುಗಳನ್ನು ಎದುರಿಸುತ್ತಿದೆ. ಅನಿಶ್ಚಿತ ಮಳೆ, ಬೆಳೆ ನಷ್ಟ, ಕೃಷಿ ಉತ್ಪನ್ನಗಳಿಗೆ ಸಮರ್ಪಕ ಬೆಲೆ ಸಿಗದಿರುವುದು ಹಾಗೂ ಉದ್ಯೋಗದ ಕೊರತೆಯಿಂದ ಗ್ರಾಮೀಣ ಜನತೆ ಸಂಕಷ್ಟದಲ್ಲಿದ್ದಾರೆ. ಇಂತಹ ಸಂದರ್ಭದಲ್ಲಿ ಸರ್ಕಾರ ಅವರ ನೆರವಿಗೆ ತುರ್ತಾಗಿ ಮುಂದಾಗುವುದು ಅತ್ಯವಶ್ಯಕವಾಗಿದೆ.

# ಸಂಪಾದಕೀಯ



**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**

ರೈತರಿಗೆ ಗುಣಮಟ್ಟದ ಬೀಜ, ರಸಗೊಬ್ಬರ ಹಾಗೂ ಕೃಷಿ ಸಲಕರಣೆಗಳನ್ನು ಸಬ್ಸಿಡಿ ದರದಲ್ಲಿ ಒದಗಿಸಬೇಕು. ಬೆಳೆ ಹಾನಿಯಾದಾಗ ಪರಿಹಾರವನ್ನು ತ್ವರಿತವಾಗಿ ನೀಡಬೇಕು. ಕೃಷಿ ಉತ್ಪನ್ನಗಳಿಗೆ ನ್ಯಾಯಯುತ ಬೆಂಬಲ ಬೆಲೆ ಘೋಷಿಸಿ, ರೈತರ ಆದಾಯ ಹೆಚ್ಚಿಸುವ ನಿಟ್ಟಿನಲ್ಲಿ ಪರಿಣಾಮಕಾರಿ ಕ್ರಮಗಳನ್ನು ಕೈಗೊಳ್ಳಬೇಕು.

ಕೂಲಿ ಕಾರ್ಮಿಕರಿಗೆ ವರ್ಷಪೂರ್ತಿ ಉದ್ಯೋಗ ದೊರೆಯುವಂತೆ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಗಳನ್ನು ಇನ್ನಷ್ಟು ಬಲಪಡಿಸಬೇಕು. ಕಾರ್ಮಿಕರ ಆರೋಗ್ಯ, ಶಿಕ್ಷಣ ಹಾಗೂ ವಸತಿ ಸೌಲಭ್ಯಗಳಿಗೆ ವಿಶೇಷ ಯೋಜನೆಗಳನ್ನು ಜಾರಿಗೊಳಿಸಬೇಕು. ಮಹಿಳಾ ಕಾರ್ಮಿಕರ ಸುರಕ್ಷತೆ ಮತ್ತು ಕಲ್ಯಾಣಕ್ಕೂ ಆದ್ಯತೆ ನೀಡಬೇಕು.

ದೇಶಕ್ಕೆ ಅನ್ನ ನೀಡುವ ರೈತರು ಹಾಗೂ ರಾಜ್ಯದ ಅಭಿವೃದ್ಧಿಗೆ ಶ್ರಮಿಸುತ್ತಿರುವ ಕಾರ್ಮಿಕರ ಬದುಕು ಸುಧಾರಿಸಿದಾಗ ಮಾತ್ರ ಸಮಾಜದ ಸಮಗ್ರ ಅಭಿವೃದ್ಧಿ ಸಾಧ್ಯ. ಆದ್ದರಿಂದ ಸರ್ಕಾರ ರೈತರು, ಕೃಷಿಕರು ಹಾಗೂ ಕೂಲಿ ಕಾರ್ಮಿಕರ ಸಮಸ್ಯೆಗಳಿಗೆ ಸ್ಪಂದಿಸಿ, ಅವರ ಕಲ್ಯಾಣಕ್ಕಾಗಿ ಹೆಚ್ಚಿನ ಯೋಜನೆಗಳನ್ನು ರೂಪಿಸಿ ಜಾರಿಗೊಳಿಸಬೇಕಾಗಿದೆ.

## ಆರೋಗ್ಯವಂತರಾಗಲು ಪರಿಸರ ಸಂರಕ್ಷಣೆ ಉಳಿಸಿ : ಶರಣಬಸಪ್ಪ ದಾನಕ್ಕೆ





• **ಮಲ್ಲಮ್ಮ ನುಡಿ ವಾರ್ತೆಯಲಬುರ್ಗಾ**

ಸಮಾಜದಲ್ಲಿರುವ ಜನತೆ ಉತ್ತಮ ಆರೋಗ್ಯವಂತರಾಗಲು ನಾವು ಪರಿಸರ ಸಂರಕ್ಷಣೆಯಲ್ಲಿ ನಿರಂತರವಾಗಿ ಗಿಡ ಮರಗಳನ್ನು ನೆಡುವದರ ಜೋತೆಗೆ ಸಂಪೂರ್ಣವಾಗಿ ಬೆಳೆಸಲು ಮುಂದಾಗಬೇಕು ಅಂದಾಗ ಪರಿಸರ ಉಳಿಯಲು ಸಾದ್ಯ ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗು ಹಸಿರು ಸೇನೆ ( ವಾಸುದೇವ ಮೇಟಿ ಬಣ) ಯಲಬುರ್ಗಾ ತಾಲೂಕಾ ಅದ್ಯಕ್ಷ ಶರಬಸಪ್ಪ ದಾನಕ್ಕೆ ಅವರು ತಮ್ಮ 56 ನೆ ವರ್ಷದ ಹುಟ್ಟು ಹಬ್ಬವನ್ನು ಕೆಕ್ ಕಟ್ಟ ಮಾಡಲಾರದೆ, ಗಿಡ ಮರಗಳನ್ನು ಬೆಳೆಸಬೇಕು ಎಂಬ ಸಂದೇಶದ ಮೂಲಕ ಜೂ.1 ರಂದು ಸರಳವಾಗಿ ಹೊಲದ ಬದುವಿನಲ್ಲಿ ದಾನಕ್ಕೆ ಕುಟುಂಬದವರು ಸೇರಿ ಗಿಡ ಮರಗಳನ್ನು ಹಚ್ಚುವ ಮೂಲಕ ತಮ್ಮ ಹುಟ್ಟುಹಬ್ಬವನ್ನು ಪರಿಸರ ದಿನಾಚರಣೆ ಎಂದು ಭಾವಿಸಿ ಗಿಡ ಮರಗಳನ್ನು ನೆಡುವ ಮೂಲಕ ಆಚರಿಸಿದರು.ಕೇವಲ ಪರಿಸರ ದಿನಾಚರಣೆ ಅಂಗವಾಗಿ ಗಿಡ ಮರಗಳನ್ನು ನೆಡುವ ಬದಲು ತಮ್ಮ ಮನೆಯಲ್ಲಿರುವ ಕುಟುಂಬದವರ ಹುಟ್ಟು ಹಬ್ಬ,ಮದುವೆ ಇನ್ನಿತರ ಯಾವದೇ ಕಾರ್ಯಕ್ರಮವಿರಲಿ ಅಂದು ಎರಡು ಗಿಡಗಳನ್ನಾದರು ನೆಡುವ ಸಂಪ್ರದಾಯವನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಂಡರೆ ಸುಂದರ ಪರಿಸರವಾಗಲು ಸಾದ್ಯ ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗು ಹಸಿರು ಸೇನೆ ಯಲಬುರ್ಗಾ ತಾಲೂಕು ಅದ್ಯಕ್ಷ ಶರಣಬಸಪ್ಪ ದಾನಕ್ಕೆ ಅವರು ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿದ್ದಾರೆ.

## ಸಿದ್ಧಾರೂಢರ ಸನ್ನಿಧಿಯಲ್ಲಿ ಈಶ್ವರ ಖಂಡ್ರೆಗೆ ಡಿಸಿಎಂ ಸ್ಥಾನಕ್ಕಾಗಿ ವಿಶೇಷ ಪ್ರಾರ್ಥನೆ

• **ಮಲ್ಲಮ್ಮ ನುಡಿ ವಾರ್ತೆ ಬೀದರ**

ಭಾಲ್ಕಿ ತಾಲೂಕಿನ ಚಳಕಾಪುರ ಗ್ರಾಮದ ಐತಿಹಾಸಿಕ ಶ್ರೀ ಸಿದ್ಧಾರೂಢ ಮಠದಲ್ಲಿ ಭಕ್ತಿಭಾವದಿಂದ ಶ್ರೀ ಸಿದ್ಧಾರೂಢರ ಮಹಾಭಿಷೇಕ ಪೂಜೆ ಹಾಗೂ ವಿಶೇಷ ಧಾರ್ಮಿಕ ಕಾರ್ಯಕ್ರಮ ನಡೆಯಿತು. ಈ ಸಂದರ್ಭದಲ್ಲಿ ಶ್ರೀ ದೇವಮಲ್ಲಮ್ಮ ಮಹಿಳಾ ಮಂಡಲ ಹಾಗೂ ಕನ್ನಡ ಸೇನೆ ಕರ್ನಾಟಕ ಸಂಘಟನೆಗಳ ವತಿಯಿಂದ ರಾಜ್ಯದ ಅರಣ್ಯ, ಪರಿಸರ ಮತ್ತು ಬೀದರ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ.ಖಂಡ್ರೆ ಅವರಿಗೆ ಉಪಮುಖ್ಯಮಂತ್ರಿ ಸ್ಥಾನ ನೀಡುವಂತೆ ವಿಶೇಷ ಪ್ರಾರ್ಥನೆ ಸಲ್ಲಿಸಲಾಯಿತು.

ಮಠದಲ್ಲಿ ನಡೆದ ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಮುಖಂಡರು ಮತ್ತು ಮಹಿಳಾ ಮಂಡಲದ ಸದಸ್ಯರು ರಾಜ್ಯದ ಸಮಗ್ರ ಅಭಿವೃದ್ಧಿ, ಜನರ ಸುಖ-ಶಾಂತಿ ಹಾಗೂ ಕಲ್ಯಾಣ ಕರ್ನಾಟಕ ಭಾಗದ ಪ್ರಗತಿಗಾಗಿ ದೇವರಲ್ಲಿ ಪ್ರಾರ್ಥಿಸಿದರು. ಇದೇ ವೇಳೆ ಕಾಂಗ್ರೆಸ್ ಹೈಕಮಾಂಡ್ ಮತ್ತು ರಾಜ್ಯ ಸರ್ಕಾರ ಈಶ್ವರ ಖಂಡ್ರೆ ಅವರ ಆಡಳಿತ ಅನುಭವ, ಪಕ್ಷ ಸಂಘಟನೆಯಲ್ಲಿ ಸಲ್ಲಿಸಿರುವ



ಸೇವೆ ಹಾಗೂ ಕಲ್ಯಾಣ ಕರ್ನಾಟಕ ಭಾಗಕ್ಕೆ ನೀಡಿರುವ ಕೊಡುಗೆಯನ್ನು ಪರಿಗಣಿಸಿ ಅವರಿಗೆ ಉಪಮುಖ್ಯಮಂತ್ರಿ ಹುದ್ದೆ ನೀಡಬೇಕು ಎಂದು ಆಗ್ರಹಿಸಿದರು.ಕಾರ್ಯಕ್ರಮದಲ್ಲಿ ಮುಖಂಡರಾದ ಕಾಶಿನಾಥ್ ಬೆಟ್ಟದ, ವಿಜಯಕುಮಾರ್ ಸ್ವಾಮಿ, ಶ್ರೀ ದೇವಮಲ್ಲಮ್ಮ ಮಹಿಳಾ ಮಂಡಲದ ಅಧ್ಯಕ್ಷೆ ಶಿವಮಂಗಲಾ ಭೀಮ್ ಶೆಟ್ಟಿ, ಕಾರ್ಯಾಧ್ಯಕ್ಷೆ ರೇಣುಕಾ ಸಿತ್ತಾಳಗೇರಿ, ಉಪಾಧ್ಯಕ್ಷೆ ವಿಮಲಾಬಾಯ್ ಗೌಡಗಾವೆ, ಸುಜಾತಾ ರೆಡ್ಡಿ, ಪ್ರೇಮಲಾ ಮಠಪತಿ, ಗೌರಮ್ಮ ಸಿತ್ತಾಳಗೇರಿ, ಭಾಗಮ್ಮ ಬಾಬುಗೊಂಡ, ವಿಮಲಾಬಾಯ್ ರೊಟ್ಟೆ, ನಾಗಮ್ಮ ಕುಂಬಾರ್, ಶ್ರೀದೇವಿ ಕಾಡುವದ, ಕಲಾವತಿ ಗೌಡಗಾಂವ್, ಜ್ಞಾನದೇವಿ ಬಸಲಾಪುರ ಹಾಗೂ ಶಾಂತಮ್ಮ ಮಠಪತಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು

ಈಶ್ವರ ಖಂಡ್ರೆ ಅವರು ಹಲವು ದಶಕಗಳಿಂದ ಕಾಂಗ್ರೆಸ್ ಪಕ್ಷದ ನಿಷ್ಠಾವಂತ ನಾಯಕರಾಗಿ ಸೇವೆ ಸಲ್ಲಿಸಿದ್ದು, ರಾಜ್ಯ ರಾಜಕೀಯದಲ್ಲಿ ವಿಶಿಷ್ಟ ಸ್ಥಾನ ಪಡೆದಿದ್ದಾರೆ. ಅವರ ಅನುಭವ ಮತ್ತು ಆಡಳಿತ ಕೌಶಲ್ಯ ರಾಜ್ಯದ ಅಭಿವೃದ್ಧಿಗೆ ಸಹಕಾರಿಯಾಗಲಿದ್ದು, ಉಪಮುಖ್ಯಮಂತ್ರಿ ಸ್ಥಾನ ನೀಡುವುದರಿಂದ ಕಲ್ಯಾಣ ಕರ್ನಾಟಕ ಭಾಗದ ಜನರ ಆಶಯಗಳು ಈಡೇರುತ್ತವೆ ಎಂದು ಹೇಳಿದರು.

ಸುಭಾಷ್ ಕೆನಾಡೆ
ಕನ್ನಡ ಸೇನೆ ಜಿಲ್ಲಾ ಅಧ್ಯಕ್ಷರು

## ವಿವಿಧಡೆ ಅದ್ದೂರಿ ಶಾಲಾ ಪ್ರಾರಂಭೋತ್ಸವ



• **ಮಲ್ಲಮ್ಮ ನುಡಿ ವಾರ್ತೆಮುದಗಲ್**

ಪಟ್ಟಣ ಸೇರಿದಂತೆ ವಿವಿಧ ಗ್ರಾಮೀಣ ಭಾಗಗಳಲ್ಲಿ ಸೋಮವಾರ ಸರಕಾರಿ ಮತ್ತು ಅನುದಾನಸಹಿತ ಶಾಲೆಗಳಲ್ಲಿ 2026 ರ ಶೈಕ್ಷಣಿಕ ವರ್ಷದ ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮ ಅದ್ದೂರಿಯಾಗಿ ಜರುಗಿತು.

ಶಾಲೆಗಳಲ್ಲಿ ಮಕ್ಕಳಿಗೆ ಗುಲಾಬಿ ಹೂಗಳನ್ನು ನೀಡಿ ಸ್ವಾಗತಿಸಿದರು. ಗ್ರಾಮದ ಪ್ರಮುಖ ಬೀದಿಗಳಲ್ಲಿ ಮಕ್ಕಳು ಶಿಕ್ಷಣದ ವಿವಿಧ ಘೋಷಣೆಯೊಂದಿಗೆ, ಸ್ವರಸ್ವತಿ ಭಾವಚಿತ್ರ ಮೆರವಣಿಗೆ ಮಾಡಿದರು. ಶಾಲಾ ಆರಂಭ ಮತ್ತು ಶಾಲಾ ದಾಖಲಾತಿಗೆ ಪ್ರಭಾತ್ ಪೇರಿ ನಡೆಸಲಾಯಿತು. ಶಾಲೆಯಲ್ಲಿ ತಳಿರುತೋರಣ ಕಟ್ಟಿ ವಿಷೇಶ ಅಲಂಕಾರ ಮಾಡಿ, ಸರಸ್ವತಿ ದೇವಿಗೆ ಪೂಜೆ ನೆರವೇರಿಸಿದರು, ಮಕ್ಕಳಿಗೆ ಸರಕಾರದಿಂದ ಉಚಿತವ ಪಠ್ಯ ಪುಸ್ತಕ ಮತ್ತು ಸಮವಸ್ತ್ರಗಳನ್ನು ವಿತರಿಸಿದರು. ಮಕ್ಕಳಿಗೆ ಮಧ್ಯಾಹ್ನ ದ ಬಿಸಿ ಊಟದಲ್ಲಿ ಸಿಹಿ ಯೊಂದಿಗೆ ಫಲಾವ್ ಬೇಯಿಸಿದ ಮೊಟ್ಟೆ ನೀಡಲಾಯಿತು. ಇದರಿಂದ ಮಕ್ಕಳು ಅತ್ಯಂತ ಸಂತಸದಿಂದ ಮೊದಲನೇ ದಿನದ ಕಲಿಕೆಯಲ್ಲಿ ಪಾಲ್ಗೊಂಡರು.

## ಸಂತೋಷ್ ಲಾಡ್ ಅವರಿಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡಬೇಕು : ನಗರಕರ್

• **ಮಲ್ಲಮ್ಮ ನುಡಿ ವಾರ್ತೆ ಬೀದರ**

ಜೂ 01: ಮರಾಠಾ ಸಮುದಾಯದ ಆಶಾಕಿರಣ, ಅನುಭವಿ ನಾಯಕರಾದ ಸಂತೋಷ್ ಲಾಡ್ ಅವರನ್ನು ನೂತನ ಸರ್ಕಾರದಲ್ಲಿ ಉಪ ಮುಖ್ಯಮಂತ್ರಿ ಸ್ಥಾನ ನೀಡಬೇಕು ಎಂದು ಮರಾಠಾ ಸಮುದಾಯದ ಗುರು ದಾದಾ ಮಹಾರಾಜ್ ನಗರಕರ್ ಒತ್ತಾಯಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸೋಮವಾರ ಮರಾಠಾ ಸಮಾಜದ ವತಿಯಿಂದ ಕರೆದ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಸಂತೋಷ್ ಲಾಡ್ ಅವರಿಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡಬೇಕು ಎನ್ನುವುದು ಎಲ್ಲಾ ಮರಾಠಾ ಮತ್ತು ಒಬಿಸಿ ಸಮುದಾಯದ ಬೇಡಿಕೆಯಾಗಿದೆ ಎಂದರು.

ಸಂತೋಷ್ ಲಾಡ್ ಅವರು ಎಲ್ಲ ಸಮುದಾಯದವರನ್ನು ಜೊತೆಗೂಡಿ ಕರೆದುಕೊಂಡು ಹೋಗುವಂತಹ ವ್ಯಕ್ತಿಯಾಗಿದ್ದಾರೆ. ಸರ್ವಧರ್ಮ ಸಮಬಾಳು ಎನ್ನುವುದು ಅವರ ಭಾವನೆಯಾಗಿದೆ. ಬುದ್ಧ, ಬಸವಣ್ಣ ಹಾಗೂ ಅಂಬೇಡ್ಕರ್ ಅವರ ವಿಚಾರದಿಂದ ಸಂತೋಷ್ ಲಾಡ್ ಅವರ ಕೆಲಸ ನಡೆಯುತ್ತದೆ. ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರಲು ಸಂತೋಷ್ ಲಾಡ್ ಅವರ ಯೋಗದಾನ ತುಂಬಾ ಇದೆ. ಅವರು ನಾಲ್ಕು ಬಾರಿ ಶಾಸಕ ಹಾಗೂ ಮೂರು ಬಾರಿ ಸಚಿವರಾಗಿದ್ದಾರೆ ಎಂದು ಹೇಳಿದರು.ಸಂತೋಷ್ ಲಾಡ್ ಫೌಂಡೇಶನ್ ವತಿಯಿಂದ ಕರ್ನಾಟಕದ ತುಂಬೆಲ್ಲ ಅವರು ಒಳ್ಳೆ ಕೆಲಸ ಮಾಡಿದ್ದಾರೆ. ಅಂಗವಿಕಲರಿಗೆ ತಮ್ಮ ಫೌಂಡೇಶನ್ ವತಿಯಿಂದ ಬಹಳಷ್ಟು ಒಳ್ಳೆ ಕೆಲಸ ಮಾಡಿದ್ದಾರೆ. ಭಾರತದಲ್ಲಿ ಆಪತ್ತು ಬಂದಾಗ ಅವರು ದೌಡಾಯಿಸುತ್ತಾರೆ. ಜಮ್ಮು ಕಾಶ್ಮೀರದಲ್ಲಿ ದಾಳಿಯಾದಾಗ ತುಂಬಾ ಭಯದ ವಾತಾವರಣ ನಿರ್ಮಾಣವಾಗಿತ್ತು. ಅಂಥದರಲ್ಲಿ ಸಂತೋಷ್ ಲಾಡ್ ಅವರು ತಮ್ಮ ಸ್ವಂತ ಖರ್ಚಿನಲ್ಲಿ ಎಲ್ಲಕ್ಕಿಂತ ಮೊದಲಿಗೆ ಅಲ್ಲಿಗೆ ಹೋಗಿ, ತಮ್ಮ ಜೀವದ ಹಂಗು ತೊರೆದು ಕರ್ನಾಟಕದ ಜನರನ್ನು ಸಂರಕ್ಷಣೆ ಮಾಡಿ ವಾಪಸ್ಸು ಕರೆತಂದಿದ್ದರು ಎಂದು ಅವರು ತಿಳಿಸಿದರು.






ಕೋವಿಡ್ ಸಮಯದಲ್ಲಿಯೂ ಕೂಡ ಅವರು ತುಂಬಾ ಕೆಲಸ ಮಾಡಿದ್ದಾರೆ. ಆದ್ದರಿಂದ ಸಂತೋಷ್ ಲಾಡ್ ಅವರಿಗೆ ಉಪಮುಖ್ಯಮಂತ್ರಿ ಸ್ಥಾನ ನೀಡಬೇಕೆನ್ನುವುದು ಬೀದರ್ ಜಿಲ್ಲೆ ಸೇರಿದಂತೆ ಇಡೀ ಕರ್ನಾಟಕದ ಮರಾಠಾ ಸಮುದಾಯ ಹಾಗೂ ಒಬಿಸಿ ಸಮುದಾಯದವರ ಬೇಡಿಕೆಯಾಗಿದೆ. ಹಾಗಾಗಿ ಅವರನ್ನು ಉಪಮುಖ್ಯಮಂತ್ರಿ ಸ್ಥಾನ ನೀಡಬೇಕು ಎಂದು ಆಗ್ರಹಿಸಿದರು.

ಮರಾಠಾ ಕ್ರಾಂತಿ ಮೋರ್ಚಾದ ಆಯೋಜಕ ವೆಂಕಟರಾವ್ ಮಾಯಿಂದೆ ಮಾತನಾಡಿ, ಕರ್ನಾಟಕ ರಾಜ್ಯದಲ್ಲಿ ಮಾರಾಠಾ ಸಮಾಜದ ಸುಮಾರು 50 ರಿಂದ 60 ಲಕ್ಷ ಜನಸಂಖ್ಯೆಯಿದೆ. ಇಂದು ನಮ್ಮ ಸಮಾಜದ ಎಲ್ಲಾ ಪಕ್ಷದವರು ಇಲ್ಲಿ ಬಂದಿದ್ದೇವೆ. ನಾವು ಪಕ್ಷಕ್ಕೋಸ್ಕರ ಬಂದಿಲ್ಲ, ನಾವು ಸಮಾಜಕ್ಕೋಸ್ಕರ ಬಂದಿದ್ದೇವೆ. ನಮ್ಮ ಸಮಾಜದ ಜನಸಂಖ್ಯೆಗೆ ಅನುಗುಣವಾಗಿ ಸಿದ್ದರಾಮಯ್ಯನವರ ಸರ್ಕಾರದಲ್ಲಿ ಸಂತೋಷ್ ಲಾಡ್ ಅವರಿಗೆ ಸಚಿವ ಸ್ಥಾನ ಸಿಕ್ಕಿತ್ತು. ಇವಾಗ ಹೊಸ ಸರ್ಕಾರ ರಚನೆಯಾಗುತ್ತಿದೆ. ಈ ಹೊಸ ಸರ್ಕಾರದಲ್ಲಿ ಸಂತೋಷ್ ಲಾಡ್ ಅವರಿಗೆ ಉಪಮುಖ್ಯಮಂತ್ರಿ ಸ್ಥಾನ ನೀಡಬೇಕು ಎಂದು ಒತ್ತಾಯಿಸಿದರು.ಸಂತೋಷ್ ಲಾಡ್ ಫೌಂಡೇಶನ್ ವತಿಯಿಂದ ಇಲ್ಲಿವರೆಗೆ 10 ಸಾವಿರ ಬಡವರಿಗೆ ಉಚಿತವಾಗಿ ಬೋರ್ವೆಲ್ ಕೊರೆಸಿ ಕೊಟ್ಟಿದ್ದಾರೆ. 4 ಸಾವಿರ ಅಂಗವಿಕಲರಿಗೆ ಉಚಿತವಾಗಿ ವಾಹನಗಳು ನೀಡಿದ್ದಾರೆ. ಮಹಿಳೆಯರಿಗೆ ಸಹಾಯ ಮಾಡಿದ್ದಾರೆ. ಕಾರ್ಮಿಕರು ಹೊಲದಲ್ಲಿ ಕೆಲಸ ಮಾಡುವಾಗ ಅನಾಹುತವಾದರೆ ಆಂಬುಲೆನ್ಸ್ ವ್ಯವಸ್ಥೆ ಮಾಡಿದ್ದಾರೆ. ಇಂತಹ ಅನೇಕ ಕೆಲಸಗಳನ್ನು ಅವರು ಮಾಡಿದ್ದಾರೆ. ಬುದ್ಧ, ಬಸವ, ಅಂಬೇಡ್ಕರ್ ಹಾಗೂ ಶಿವಾಜಿ ಸೇರಿದಂತೆ ಅನೇಕ ಮಹಾಪುರುಷರ ಸಿದ್ಧಾಂತದ ಮೇಲೆ ನಡೆಯುವ ಸಂತೋಷ್ ಲಾಡ್ ಅವರು ಎಲ್ಲ ಸಮುದಾಯದವರನ್ನು ತಮ್ಮ ಜೊತೆ ತೆಗೆದುಕೊಂಡು ಹೋಗುತ್ತಿದ್ದಾರೆ. ಆದ್ದರಿಂದ ಅವರಿಗೆ ಉಪಮುಖ್ಯಮಂತ್ರಿ ಸ್ಥಾನ ನೀಡಬೇಕು ಎಂದು ಒತ್ತಾಯಿಸಿದರು.ಈ ಸಂದರ್ಭದಲ್ಲಿ ಮರಾಠಾ ಸಮಾಜದ ಜಿಲ್ಲಾಧ್ಯಕ್ಷ ದಿಗಂಬರರಾವ್ ಮಾನಕಾರಿ, ಜಿಲ್ಲಾ ಪಂಚಾಯತ್ ಮಾಜಿ ಉಪಾಧ್ಯಕ್ಷ ರಘುನಾಥರಾವ್ ಜಾಧವ್, ಮಾಜಿ ಜಿಲ್ಲಾ ಪಂಚಾಯತ್ ಸದಸ್ಯ ಆನಂದ್ ಪಾಟೀಲ್, ಡಿಸಿಸಿ ಬ್ಯಾಂಕಿನ ಸದಸ್ಯ ಕಿಶನರಾವ್ ಪಾಟೀಲ್, ಸಕಲ ಮರಾಠಾ ಸಮಾಜದ ಆಯೋಜಕರು ಪ್ರದೀಪ್ ಬಿರಾದಾರ್, ಪ್ರತೀಕ್ ಪಾಟೀಲ್, ಡಾ. ಜನಾರ್ಧನ್ ಬಿರಾದಾರ್, ತಾತ್ಯಾರಾವ್ ಪಾಟೀಲ್, ಅಂಗದರಾವ್ ಜಗತಾಪ್, ಕಿಶನರಾವ್ ಪಾಟೀಲ್, ಡಾ. ಕನಸೆ, ರಾಮರಾವ್ ಬಿರಾದಾರ್, ರೋಹಿತ್ ಮೆಂದೆ, ಸತೀಶ್ ವಾಸರೆ, ಅಮರ್ ಜಾಧವ್, ಅನಿಲ್ ಕಾಳೆ, ಸತೀಶ್ ಪಾಟೀಲ್, ತೇಜರಾವ್ ಮೂಳೆ, ಅಶೋಕ್ ಪಾಟೀಲ್, ಸಂತೋಷ್ ಜಾಧವ್, ಸತೀಶ್ ಬಿರಾದಾರ್, ಜ್ಞಾನೇಶ್ವರ್ ಪಾಟೀಲ್, ಅನಿತಾ ಭೋಸಲೆ ಹಾಗೂ ಮೀನಾಕ್ಷಿ ಪಾಟೀಲ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಕಲಾವಿದರ ಪ್ರತಿಭೆಗೆ ಪ್ರೋತ್ಸಾಹವೇ ಯಶಸ್ಸಿನ ಮೆಟ್ಟಿಲು: ವಿಜಯಕುಮಾರ ಸೋನಾರೆ

• **ಮಲ್ಲಮ್ಮ ನುಡಿ ವಾರ್ತೆ ಬೀದರ**






ಜೂ. 01: ಜಿಲ್ಲೆಯಲ್ಲಿರುವ ಪ್ರತಿಭಾವಂತ ಕಲಾವಿದರನ್ನು ಒಂದೇವೇದಿಕೆಯಲ್ಲಿನೋಡುವುದು ಸಂತಸದ ವಿಷಯವಾಗಿದೆ. ಜಿಲ್ಲೆಯ ಕಲಾವಿದರಲ್ಲಿ ಅಪಾರ ಪ್ರತಿಭೆ ಅಡಗಿದ್ದು, ಅವರಿಗೆ ರಾಜ್ಯ ಹಾಗೂ ರಾಷ್ಟ್ರಮಟ್ಟದ ವೇದಿಕೆಗಳು ಇನ್ನಷ್ಟು ದೊರೆಯಬೇಕಾದ ಅಗತ್ಯವಿದೆ ಎಂದು ಕರ್ನಾಟಕ ಜಾನಪದ ಆಕಾಡೆಮಿ ಸದಸ್ಯ ವಿಜಯಕುಮಾರ ಸೋನಾರೆ ಹೇಳಿದರು.

ರವಿವಾರ ಬೆಳಿಗ್ಗೆ ನಗರದ ಪೂಜ್ಯ ಚನ್ನಬಸವ ಪಟ್ಟದೇವರು ಜಿಲ್ಲಾ ರಂಗಮಂದಿರದಲ್ಲಿ ಪ್ರಗತಿ ಸಂಗೀತ ಕಲಾ ಸಂಸ್ಥೆ (ರಿ), ಬೀದರ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೀದರ ಇವರ ಸಹಯೋಗದಲ್ಲಿ 2025-26ನೇ ಸಾಲಿನ ವಿಶೇಷ ಘಟಕ ಯೋಜನೆಯಡಿ ಸಂಘ-ಸಂಸ್ಥೆಗಳಿಗೆ ನೀಡಲಾಗುವ ಧನಸಹಾಯ ಯೋಜನೆ ಅಡಿಯಲ್ಲಿ "ಸಂಗೀತ ಸೌರಭ ಸಾಂಸ್ಕೃತಿಕ ಕಾರ್ಯಕ್ರಮವು" ನಡೆದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಗ್ರಾಮೀಣ ಭಾಗಗಳಲ್ಲಿಯೂ ಅನೇಕ ಕಲಾವಿದರು ತಮ್ಮ ವಿಶಿಷ್ಟ ಪ್ರತಿಭೆಯ ಮೂಲಕ ಜನಮನ ಗೆಲ್ಲುತ್ತಿದ್ದಾರೆ. ಆದರೆ ಅವರಿಗೆ ಸೂಕ್ತ ಅವಕಾಶಗಳು ಮತ್ತು ಪ್ರೋತ್ಸಾಹದ ಕೊರತೆಯಿಂದಾಗಿ ಅವರ ಪ್ರತಿಭೆ ವ್ಯಾಪಕವಾಗಿ ಹೊರಹೊಮ್ಮಲು ಸಾಧ್ಯವಾಗುತ್ತಿಲ್ಲ. ಸರ್ಕಾರ ಹಾಗೂ ಸಾಂಸ್ಕೃತಿಕ ಸಂಸ್ಥೆಗಳು ಇಂತಹ ಕಲಾವಿದರಿಗೆ ಹೆಚ್ಚಿನ ಅವಕಾಶಗಳನ್ನು ಕಲ್ಪಿಸಬೇಕು ಎಂದು ಆಗ್ರಹಿಸಿದರು.

ಕಾರ್ಯಕ್ರಮದ ದಿವ್ಯಸಾನಿಧ್ಯವಹಿಸಿ ಆಶೀರ್ವಚನ ನೀಡಿದ ರಾಜಶೇಖರ ಶಿವಾಚಾರ್ಯ ಸ್ವಾಮಿ ಅವರು ಮಾತನಾಡಿ, ಬೀದರ ಜಿಲ್ಲೆಯಲ್ಲಿ ಈಗಾಗಲೇ ವಿಶ್ವವಿದ್ಯಾನಿಲಯ ಸ್ಥಾಪನೆಯಾಗಿರುವುದು ಸಂತಸದ ಸಂಗತಿಯಾಗಿದೆ. ಆದರೆ ಆ ವಿಶ್ವವಿದ್ಯಾನಿಲಯದಲ್ಲಿ ಪ್ರತ್ಯೇಕ ಸಂಗೀತ ವಿಭಾಗ ಆರಂಭವಾದರೆ ಜಿಲ್ಲೆಯ ಕಲಾವಿದರ ಬಹುಕಾಲದ ಕನಸು ನನಸಾಗಲಿದೆ ಎಂದು ಹೇಳಿದರು.

ಸಂಗೀತ ಶಿಕ್ಷಣಕ್ಕೆ ಹೆಚ್ಚಿನ ಉತ್ತೇಜನ ನೀಡಬೇಕಾದ ಅಗತ್ಯವಿದ್ದು, ಈ ನಿಟ್ಟಿನಲ್ಲಿ ಜಿಲ್ಲೆಯ ಜನಪ್ರತಿನಿಧಿಗಳು ಹಾಗೂ ರಾಜಕೀಯ ನಾಯಕರ ಇಚ್ಛಾಶಕ್ತಿ ಮತ್ತು ಬದ್ಧತೆ ಅತ್ಯಂತ ಪ್ರಮುಖವಾಗಿದೆ ಎಂದು ಅಭಿಪ್ರಾಯಪಟ್ಟರು. ಸಂಗೀತವು ಕೇವಲ ಕಲೆಯಲ್ಲ, ಅದು ವ್ಯಕ್ತಿಯ ಮನಸ್ಸಿಗೆ ನೆಮ್ಮದಿ, ಶಾಂತಿ ಮತ್ತು ಸಂಸ್ಕಾರವನ್ನು ನೀಡುವ ಶಕ್ತಿಯಾಗಿದೆ. ಸಂಗೀತದ ಮೂಲಕ ಸಮಾಜದಲ್ಲಿ ಸೌಹಾರ್ದತೆ, ಮಾನವೀಯ ಮೌಲ್ಯಗಳು ಹಾಗೂ ಆಧ್ಯಾತ್ಮಿಕ ಚಿಂತನೆಗಳು ಬೆಳೆಯುತ್ತವೆ ಎಂದು ತಿಳಿಸಿದರು.

ಪಂಚಾಯತ್ ಕ್ಷೇಮಾಭಿವೃದ್ಧಿ ಸಂಘದ ರಾಜ್ಯ ಖಜಾಂಚಿಯಾದ ಶರತಕುಮಾರ ಅಭಿಮಾನ್ ಅವರು ಮಾತನಾಡಿ, ಇಂದಿನ ಮಕ್ಕಳಿಗೆ ಕೇವಲ ಪಠ್ಯಾಧಾರಿತ ಶಿಕ್ಷಣ ನೀಡುವುದಷ್ಟೇ ಸಾಕಾಗುವುದಿಲ್ಲ. ಅವರಲ್ಲಿರುವ ಪ್ರತಿಭೆ, ಆಸಕ್ತಿ ಹಾಗೂ ಸಾಮರ್ಥ್ಯವನ್ನು ಗುರುತಿಸಿ ಕೌಶಲ್ಯ ಆಧಾರಿತ ಶಿಕ್ಷಣ ನೀಡುವುದು ಇಂದಿನ ಅಗತ್ಯವಾಗಿದೆ ಎಂದು ಹೇಳಿದರು.

ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕದ ಜ್ಞಾನದ ಜೊತೆಗೆ ಸಂಗೀತ, ನೃತ್ಯ, ಕಲೆ, ಕ್ರೀಡೆ ಹಾಗೂ ಇತರ ಸಹಪಠ್ಯ ಚಟುವಟಿಕೆಗಳಲ್ಲಿ ಭಾಗವಹಿಸಲು ಅವಕಾಶ ಕಲ್ಪಿಸಿದರೆ ಅವರ ವ್ಯಕ್ತಿತ್ವ ವಿಕಸನಕ್ಕೆ ಸಹಕಾರಿಯಾಗುತ್ತದೆ. ಇಂತಹ ಚಟುವಟಿಕೆಗಳು ಮಕ್ಕಳಲ್ಲಿ ಆತ್ಮವಿಶ್ವಾಸ, ನಾಯಕತ್ವಗುಣ ಹಾಗೂ ಸೃಜನಶೀಲತೆಯನ್ನು ಬೆಳೆಸುತ್ತವೆ ಎಂದು ಅಭಿಪ್ರಾಯಪಟ್ಟರು.

ಕರ್ನಾಟಕ ಗಡಿ ಅಭಿವೃದ್ಧಿ ಪ್ರಾಧಿಕಾರ ಸದಸ್ಯ ಡಾ. ಸಂಜೀವಕುಮಾರ ಅತಿವಾಳೆ ಮಾತನಾಡಿದರು. ಪ್ರಗತಿ ಸಂಗೀತ ಕಲಾ ಸಂಸ್ಥೆಯ ಅಧ್ಯಕ್ಷರಾದ ರಮೇಶ ಕೋಳಾರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಿದ್ರಾಮ ಸಿಂಧೆ, ಹಿರಿಯ ಕಲಾವಿದರಾದ, ವೈಕುಂಠ ದತ್ತ ಮಹಾರಾಜ, ರಾಜೇಂದ್ರಸಿಂಗ್ ಪವಾರ, ಶಂಭುಲಿಂಗ್ ವಾಲ್ದೊಡ್ಡಿ, ಖ್ಯಾತ ವೈದ್ಯ ಡಾ.ಲೋಕೇಶ ಹೊಸಮನಿ, ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಪ್ರಾಂಶುಪಾಲರಾದ ಡಾ.ರಂಜನಾ ಪಾಟೀಲ್, ಡಾ. ಲೋಕೇಶ ಹೊಸಮನಿ, ಶ್ರೀಮತಿ ರೇಖಾ ಅಪ್ಪಾರಾವ್ ಸೌದಿ, ಇತರರು ವೇದಿಕೆ ಮೇಲಿದ್ದರು.

ಅದೇ ಸಂದರ್ಭದಲ್ಲಿ ಖ್ಯಾತ ಸಂಗೀತ, ಹಾಗೂ ತಬಲಾ ವಾದನದಲ್ಲಿ ಹೆಸರು ಗಳಿಸಿರುವ ಕಲಾವಿದರಾದ ಪಾಂಡು ಮಹಾರಾಜ, ವಾಮಾನರಾವ್ ಕುಲಕುರ್ಣಿ, ಮಾಣಿಕ ರೆಡ್ಡಿ, ಅಜಯ ಸಾಗಾಂವಕರ್, ಇವರುಗಳನ್ನು ಸನ್ಮಾನಿಸಿ ಗೌರವಿಸಲಾಯಿತು.

ಪ್ರಾರಂಭದಲ್ಲಿ ಶ್ರೀಮತಿ ತ್ರಿವೇಣಿ ರಮೇಶ ಕೋಳಾರ್ ಪ್ರಾಸ್ತಾವಿಕ ಮಾತನಾಡಿದರು. ಡಾ. ಸುಜಾತಾ ಹೊಸಮನಿ ಸ್ವಾಗತಿಸಿದರು, ದೇವಿದಾಸ ಜೋಶಿ ನಿರೂಪಿಸಿ, ಶ್ರೀಮತಿ ಶೇಶಿಕಲಾ ಎಖೇಳ್ಳಿ ವಂದಿಸಿದರು.

ನೃತ್ಯ-ಸಂಗೀತ ಪ್ರದರ್ಶನಗಳು ಮನಸೂರೆಗೊಂಡವು

ಕಾರ್ಯಕ್ರಮದ ಅಂಗವಾಗಿ ನಡೆದ ನೃತ್ಯೋತ್ಸವ ಮತ್ತು ಸಂಗೀತ ಪ್ರದರ್ಶನಗಳು ಪ್ರೇಕ್ಷಕರ ಮೆಚ್ಚುಗೆಗೆ ಪಾತ್ರವಾದವು. ಕು. ಶೃದ್ಧಾ ರವೀಂದ್ರ ಹಾಗೂ ತಂಡ ಅವರಿಂದ ಪ್ರಸ್ತುತಗೊಂಡ ಭರತನಾಟ್ಯವು ಭಾರತೀಯ ಶಾಸ್ತ್ರೀಯ ನೃತ್ಯದ ಸೊಗಡನ್ನು ಅನಾವರಣಗೊಳಿಸಿ ನೋಡುಗರ ಗಮನ ಸೆಳೆಯಿತು. ಅದೇ ರೀತಿ ಕು.ಶ್ರೇಯಾ ಕೊಳಾರಕರ್ ಹಾಗೂ ತಂಡ ಅವರ ಕಥಕ್ ನೃತ್ಯ ಪ್ರದರ್ಶನವು ತನ್ನ ಲಯಬದ್ಧ ಹೆಜ್ಜೆಗಳು ಮತ್ತು ಮನಮೋಹಕ ಅಭಿನಯದ ಮೂಲಕ ಸಭಿಕರಿಂದ ಭಾರೀ ಚಪ್ಪಾಳೆ ಗಿಟ್ಟಿಸಿತು.

ಇದೇ ಸಂದರ್ಭದಲ್ಲಿ ಹಿರಿಯ ಜಾನಪದ ಕಲಾವಿದ ಶಂಭುಲಿಂಗ ವಾಲದೊಡ್ಡಿ ಅವರು ಪ್ರಸ್ತುತಪಡಿಸಿದ ಜಾನಪದ ಗೀತೆಗಳು ಗ್ರಾಮೀಣ ಸಂಸ್ಕೃತಿ ಮತ್ತು ಜನಪದ ಪರಂಪರೆಯ ಸೊಗಡನ್ನು ಪರಿಚಯಿಸಿದವು. ಅವರ ಗಾಯನವು ಪ್ರೇಕ್ಷಕರನ್ನು ಮಂತ್ರಮುಗ್ಧರನ್ನಾಗಿಸಿತು.

ಇದಲ್ಲದೆ ಐನೋದ್ದಿನ್ ವಾರ್ಸಿ, ಕು.ರೋಶನ್ ಕೋಳಾರಕರ್, ರಾಕೇಶ, ದರ್ಶನ, ಪ್ರದೀಪ, ವಿಜಯ, ಸೋಮನಾಥ, ನರೇಶ, ಸುರೇಶ, ನರಸಪ್ಪ ಹಾಗೂ ಸ್ವಾಮಿದಾಸ ಅವರು ನೀಡಿದ ಸಂಗೀತ ಮತ್ತು ಜಾನಪದ ಕಲಾ ಪ್ರದರ್ಶನಗಳು ಕಾರ್ಯಕ್ರಮಕ್ಕೆ ಮತ್ತಷ್ಟು ಮೆರುಗು ತಂದವು. ಕಲಾವಿದರ ಮನಮೋಹಕ ಪ್ರದರ್ಶನಗಳು ನೆರೆದಿದ್ದ ಕಲಾಭಿಮಾನಿಗಳ ಮನಗೆದ್ದು, ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾಗಿ ಮೂಡಿಬಂದವು.

ಸಂಗೀತ, ನೃತ್ಯ ಹಾಗೂ ಜಾನಪದ ಕಲೆಯ ಸಮನ್ವಯದಿಂದ ಕೂಡಿದ ಈ ಸಾಂಸ್ಕೃತಿಕ ಕಾರ್ಯಕ್ರಮವು ನೋಡುಗರ ಕಣ್ಮನ ಸೆಳೆದು, ಕಲೆಯ ವೈಭವವನ್ನು ಅನಾವರಣಗೊಳಿಸಿತು.

ಕಾರ್ಯಕ್ರಮದಲ್ಲಿ ಕಲಾವಿದರು, ಸಾಹಿತಿಗಳು, ಮಹಿಳೆಯರು, ಮಕ್ಕಳು ಅನೇಕರು ಉಪಸ್ಥಿತರಿದ್ದರು.

ಸುವರ್ಣ ಕರ್ನಾಟಕ
**ನಗರ ಸಭೆ ಕಾರ್ಯಾಲಯ, ಬಾಗಲಕೋಟ-587103**
Post Box No.19 STD: 08354 :235011 Website:www.bagalkotecity.gov.in
FAX No: 235732, Help Line: 235792 E-mailD: itstaff_ulb_bagalkote@yahoo.co.in.
ಜಿಲ್ಲಾ: ಬಾಗಲಕೋಟ) (ಕರ್ನಾಟಕ ರಾಜ್ಯ

ಕ್ರಸಂ: ನಸಬಾ/ಲೋ.ವಿ/CMIDP/TND/2026-27/146 ದಿನಾಂಕ: 01-06-2026.

**ಮರು ಟೆಂಡರ್ ಪ್ರಕಟಣೆ(ಎರಡನೇ ಕರೆ) Karnataka Public Procurement Portal ಮುಖಾಂತರ https://kppp.karnataka.gov.in**

ಕರ್ನಾಟಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಆದ್ಯಾದೇಶ 1999, ನಿಯಮಾವಳಿಗಳು 2000 ರಂತೆ ಬಾಗಲಕೋಟ ನಗರಸಭೆ ವ್ಯಾಪ್ತಿಯಲ್ಲಿ ಮಾನ್ಯ ಮುಖ್ಯಮಂತ್ರಿಯವರ ಮೂಲಸೌಕರ್ಯಅಭಿವೃದ್ಧಿ ಯೋಜನೆಯಡಿ(ಸಿ ಎಮ್ ಐ ಡಿ ಪಿ) ಈ ಕೆಳಗೆ ನಮೂದಿಸಿದ ಅಭಿವೃದ್ಧಿ ಕಾಮಗಾರಿಗಳಿಗೆ ಕರ್ನಾಟಕ ಸರ್ಕಾರ ಲೋಕೋಪಯೋಗಿ ಇಲಾಖೆಯಲ್ಲಿ ನೊಂದಾಯಿತ ಹಾಗೂ Karnataka Public Procurement Portal ನಲ್ಲಿ ನೋಂದಾಯಿತ ಅರ್ಹಅಧಿಕೃತ ಗುತ್ತಿಗೆದಾರರಿಂದ Standard Tender Documents Kw-1&2 ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕೆ (ತಿದ್ದುಪಡಿ) ಅಧಿನಿಯಮ 2016 ಗೆಜೆಟ್ಅಧಿಸೂಚನೆ ದಿನಾಂಕ:29.06.2017 ರನ್ವಯ ಟೆಂಡರನ್ನು ಆಹ್ವಾನಿಸಲಾಗಿದ್ದು, ವಿವರ ಕೆಳಗಿನಂತಿರುತ್ತದೆ.

| ಕ್ರಮ ಸಂಖ್ಯೆ | ಕಾಮಗಾರಿ ಹೆಸರು |
|---|---|
| 1 | DMA/2025-26/OW/WORK_INDENT55643 |
| 2 | 1DMA/2025-26/OW/WORK_INDENT55645 |
| 3 | DMA/2025-26/OW/WORK_INDENT55646 |
| 4 | DMA/2025-26/OW/WORK_INDENT55651 |
| 5 | DMA/2025-26/OW/WORK_INDENT55652 |

ಹೆಚ್ಚಿನ ಮಾಹಿತಿಗಾಗಿhttps://kppp.karnataka.gov.inದಲ್ಲಿಅಥವಾ ಈ ಕಛೇರಿಯತಾಂತ್ರಿಕ ವಿಭಾಗದಲ್ಲಿ ಸಂಪರ್ಕಿಸಬಹುದಾಗಿದೆ.

1)Last date for submission of bid through Karnataka Public Procurement Portal before : 10-06-2026At 16.30 hours. 2)Opening of Technical and Financial bids on or after : 12-06-2026 at 11.30 AM

ಸಹಿ/-ಸಹಾಯಕ ಕಾರ್ಯಪಾಲಕ ಅಭಿಯಂತರರು
ನಗರಸಭೆ, ಬಾಗಲಕೋಟ

ಸಹಿ/-ಪೌರಾಯುಕ್ತರು,
ನಗರಸಭೆ, ಬಾಗಲಕೋಟ

DIPR/BGK/RO-NO-71/KSMCA/2025-26

## ಹಿಂದುಳಿದ ವರ್ಗಗಳ 10 ಅಭ್ಯರ್ಥಿಗಳಿಗೆ ಸರಕಾರಿ ವಕೀಲರು, 20 ವರ್ಷಗಳಿಗಿಂತ ಹೆಚ್ಚಿನ ಅನುಭವವುಳ್ಳ ವಕೀಲರಿಂದ ತರಬೇತಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬೀದರ,ಜೂನ್.01(ಕರ್ನಾಟಕ ವಾರ್ತೆ):– 2026–27ನೇ ಸಾಲಿನ ಕಾನೂನು ಪದವಿ ಪಡೆದಿರುವ ಹಿಂದುಳಿದ ವರ್ಗಗಳ 10 ಅಭ್ಯರ್ಥಿಗಳಿಗೆ ಸರಕಾರಿ ವಕೀಲರು ಅಥವಾ 20 ವರ್ಷಗಳಿಗಿಂತ ಹೆಚ್ಚಿನ ಅನುಭವವುಳ್ಳ ವಕೀಲರಿಂದ ತರಬೇತಿಅರ್ಜಿ ಆಹ್ವಾನಿಸಲಾಗಿದೆ ಎಂದು ಬೀದರ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಮಟ್ಟದ ಹಿಂದುಳಿದ ವರ್ಗಗಳಕಾನೂನುಪದವೀಧರರ ಆಯ್ಕೆ ಸಮಿತಿ ಹಾಗೂ ಜಿಲ್ಲಾ ಅಧಿಕಾರಿ ಅವರು ತಿಳಿಸಿದ್ದಾರೆ.

ತರಬೇತಿಯ ಅವಧಿಯ 4 ವರ್ಷಗಳಿದ್ದು, ತರಬೇತಿ ಅವಧಿಯಲ್ಲಿ ಮಾಸಿಕ 4000 ರೂ.ಗಳ ತರಬೇತಿ ಭತ್ಯೆ ನೀಡಲಾಗುವುದು. ಅರ್ಜಿಗಳನ್ನು ಸಲ್ಲಿಸಲು ಬಯಸುವವರು ಷರತ್ತುಗಳು ಪೂರೈಸಿರಬೇಕು.

ಷರತ್ತುಗಳು : ಅಭ್ಯರ್ಥಿ ಹಿಂದುಳಿದ ವರ್ಗಗಳ ಪ್ರವರ್ಗ 1, 2ಎ, 3ಎ, 3ಬಿ ಸೇರಿದವರಾಗಿರಬೇಕು, ಬೀದರ ಜಿಲ್ಲೆಯ ನಿವಾಸಿಯಾಗಿರಬೇಕು, ಅಭ್ಯರ್ಥಿಯ ಕುಟುಂಬದ ವಾರ್ಷಿಕ ಆದಾಯ ಪ್ರವರ್ಗ–1, ರಡಿಯಲ್ಲಿ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ಆದಾಯ 3.50 ಲಕ್ಷ ರೂ.ಗಳ ಒಳಗಿರಬೇಕು, ಪ್ರವರ್ಗ–2ಎ, 3ಎ ಮತ್ತು 3ಬಿ ಪ್ರವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ ಆದಾಯ 2.50 ಲಕ್ಷ ರೂ.ಗಳ ಒಳಗಿರಬೇಕು.

ದಾಖಲಾತಿಗಳು: ಎಸ್.ಎಸ್.ಎಲ್.ಸಿ ದೃಢೀಕೃತ ಅಂಕಪಟ್ಟಿ, ಕಾನೂನು ಪದವಿ ಪರೀಕ್ಷೆಯ ಎಲ್ಲಾ ವರ್ಷಗಳ ದೃಢೀಕೃತ ಅಂಕ ಪಟ್ಟಿ, ತಹಸೀಲ್ದಾರರಿಂದ ನೀಡಲ್ಪಟ್ಟ ಜಾತಿ, ಆದಾಯ ಪ್ರಮಾಣ ಪತ್ರ, ವಾಸಸ್ಥಳ ಪ್ರಮಾಣ ಪತ್ರ, ಬಾರ್‌ಕೌನ್ಸಿಲ್‌ನಲ್ಲಿ ಹೆಸರನ್ನು ನೋಂದಾಯಿಸಿದ ಪ್ರಮಾಣ ಪತ್ರ ಲಗತ್ತಿಸಬೇಕು.

ಅಭ್ಯರ್ಥಿಯ ಬಾರ ಕೌನ್ಸಿಲ್‌ನಲ್ಲಿ ಹೆಸರನ್ನು ನೋಂದಾಯಿಸಿರಬೇಕು, ತರಬೇತಿಗೆ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕಕ್ಕೆ ಹಿಂದೆ 2 ವರ್ಷ ಒಳಗಿರಬೇಕು, ಕಾನೂನು ಪದವಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು, ಅರ್ಜಿ ಸಲ್ಲಿಸಲು ನಿಗದಿ ಪಡಿಸಿದ ಕಡೆಯ ದಿನಾಂಕಕ್ಕೆ ಪ್ರವರ್ಗ 2ಎ, 3ಎ, ಮತ್ತು 3ಬಿಯ ಅಭ್ಯರ್ಥಿಯ 38 ವರ್ಷ ಒಳಗಿರಬೇಕು, ಪ್ರವರ್ಗ–1ಕ್ಕೆ ಸೇರಿದ ಅಭ್ಯರ್ಥಿಗಳ 40 ವರ್ಷ ಒಳಗಿರಬೇಕು, ಅರ್ಜಿ ಸ್ವೀಕರಿಸಲು ನಿಗದಿಪಡಿಸಿರುವ ಕಡೆಯ ದಿನಾಂಕಕ್ಕೆ ಅಭ್ಯರ್ಥಿಯು 3 ವರ್ಷಗಳ ಅವಧಿ ಒಳಗೆ ಕಾನೂನು ಪದವಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು, ಅರ್ಹ ಅಭ್ಯರ್ಥಿಗಳು ಅರ್ಜಿ ನಮೂನೆಯಲ್ಲಿ ಕೆಳಗೆ ಸಹಿ ಮಾಡಿದವರ ಕಛೇರಿಯಿಂದ ಪಡೆದು ದಾಖಲಾತಿಗಳೊಂದಿಗೆ ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ನಾವದಗೇರಿ ಬೀದರ ಇವರಿಗೆ 2026ರ ಜೂನ್ 29ರ ಒಳಗೆ ಸಂಜೆ 5 ಗಂಟೆಯ ಒಳಗೆ ಅರ್ಜಿ ಸಲ್ಲಿಸಬೇಕು. ಅಪೂರ್ಣವಾದ ಹಾಗೂ ಅವಧಿ ಮೀರಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

****

# ಉಪಮುಖ್ಯಮಂತ್ರಿ ಹುದ್ದೆಗೆ ಪರಿಗಣಿಸುವಂತೆ ಆಗ್ರಹಿಸಿ ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ

ಹುಣಸೂರು.ಜೂ.1––ಕರ್ನಾಟಕ ರಾಜ್ಯ ಸರ್ಕಾರದ ನೂತನ ಸಚಿವ ಸಂಪುಟ ರಚನೆಯಲ್ಲಿ ಕರ್ನಾಟಕದ ಕಾಂಗ್ರೆಸ್ ಪಕ್ಷದ ಹಿರಿಯ ನಾಯಕ, ಹಿರಿಯ ದಲಿತ ರಾಜಕೀಯ ಮುತ್ಸದ್ದಿ ಡಾ. ಜಿ ಪರಮೇಶ್ವರ್ ಅವರನ್ನು ಉಪಮುಖ್ಯಮಂತ್ರಿ ಹುದ್ದೆಗೆ ಪರಿಗಣಿಸುವಂತೆ ಆಗ್ರಹಿಸಿ ಪ್ರತಿಭಟನೆ ನಡೆಸಲಾಯಿತು. ಹುಣಸೂರು ತಾಲೂಕಿನ ಡಾ. ಜಿ ಪರಮೇಶ್ವರ್ ಅಭಿಮಾನಿ ಬಳಗದ ವತಿಯಿಂದ ಇಂದು , ಡಾ ಜಿ ಪರಮೇಶ್ವರ್ ರವರ ಭಾವಚಿತ್ರ ಹಿಡಿದು ಪಟ್ಟಣದ ಸಂವಿಧಾನ ಸರ್ಕಲ್ ನಲ್ಲಿ ನಡೆಸಿದ ಪ್ರತಿಭಟನೆಯಲ್ಲಿ ಹಿರಿಯ ಕಾಂಗ್ರೆಸ್ ನಾಯಕ ಅಲ್ಲದೆ ದಲಿತರ ಏಕ ಮಾತ್ರ ಆಶಾಕಿರಣ ಎನಿಸಿರುವ ಡಾ ಜಿ ಪರಮೇಶ್ವರ್ ಅವರನ್ನು ಉಪಮುಖ್ಯ ಉಪ ಮುಖ್ಯಮಂತ್ರಿ ಆಗಿ ಆಯ್ಕೆ ಮಾಡುವಂತೆ ಘೋಷಣೆಗಳ ಮುಖಾಂತರ ಆಗ್ರಹಿಸಲಾಯಿತು. ನಂತರ ಪ್ರತಿಭಟನಾ ನಿರತರನ್ನು ಉದ್ದೇಶಿಸಿ ಡಾ. ಜಿ ಪರಮೇಶ್ವರ್ ಅಭಿಮಾನಿ ಬಳಗದ ಮುಖ್ಯಸ್ಥರಾದ ಬಿಳಿಕೆರೆ ರಾಜು ಮಾತನಾಡಿ, ಕರ್ನಾಟಕದಲ್ಲಾದ ಕ್ಷಿಪ್ರ ರಾಜಕೀಯ ಬೆಳವಣಿಗೆಗಳಲ್ಲಿ ನೂತನ ಮುಖ್ಯಮಂತ್ರಿ ಯಾಗಿ ಡಿಕೆ ಶಿವಕುಮಾರ್ ರವರು ಮುಖ್ಯಮಂತ್ರಿಯಾಗಿ ಆಯ್ಕೆ ಮಾಡಲಾಗುತ್ತಿದೆ, ಹಾಗಾಗಿ ನೂತನ ಮಂತ್ರಿಮಂಡಲದಲ್ಲಿ ಕಾಂಗ್ರೆಸ್ ನ ಹಿರಿಯ ನಾಯಕ ಹಾಗೂ ಈ ಹಿಂದೆ ಪ್ರದೇಶ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರು ಆಗಿ ಗೃಹ ಸಚಿವರು ಆಗಿ ಸಮರ್ಥವಾಗಿ ಕಾರ್ಯನಿರ್ವಹಿಸಿರುವ ದಲಿತರ ಏಕಮಾತ್ರ ಆಶಾಕಿರಣವೂ ಆಗಿರುವ ಡಾ. ಜಿ ಪರಮೇಶ್ವರ್ ರವರನ್ನು ಉಪಮುಖ್ಯಮಂತ್ರಿಯ ಹುದ್ದೆಗೆ ಪರಿಗಣಿಸುವ ಮೂಲಕ ಕಾಂಗ್ರೆಸ್ ಪಕ್ಷವು ದಲಿತರಿಗೆ ಸೂಕ್ತ ಪ್ರತಿನಿತ್ಯ ನೀಡುವಂತೆ ಒತ್ತಾಯಿಸಿದರು. ನಂತರ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ( ಡಾ ಡಿ ಜಿ ಸಾಗರ್ ಬಣ) ಜಿಲ್ಲಾ ಸಂಘಟನಾ ಸಂಚಾಲಕ ಕೊಳಗಟ್ಟ ಕೃಷ್ಣ ಮಾತನಾಡಿ, ಕಳೆದ 75 ವರ್ಷಗಳಿಂದಲೂ ದಲಿತರು ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಮತದಾರರಾಗಿ ಮುಂದುವರೆದುಕೊಂಡು ಬಂದಿದ್ದಾರೆ ಆದರೆ ಆ ಪಕ್ಷವು ದಲಿತರಿಗೆ ಉನ್ನತ ಮಟ್ಟದ ಸಾಂವಿಧಾನಿಕ ಹುದ್ದೆಯನ್ನು ಕಲ್ಪಿಸುವಲ್ಲಿ ವಿಫಲವಾಗಿರುವುದು ದುರಂತ, ಈಗ ಕರ್ನಾಟಕದಲ್ಲಿ ಘಟಿಸಿರುವ ರಾಜಕೀಯ ವಿದ್ಯಮಾನಗಳಲ್ಲಿ ಹಿಂದುಳಿದ ವರ್ಗಗಳ ನಾಯಕರದ ಸಿದ್ದರಾಮಯ್ಯನವರನ್ನು ನಿವೃತ್ತಗೊಳಿಸಿ ಮುಖ್ಯಮಂತ್ರಿಗಳನ್ನಾಗಿ ಡಿ ಕೆ ಶಿವಕುಮಾರ್ ಅವರನ್ನು ಆಯ್ಕೆ ಮಾಡಲಾಗುತ್ತಿದೆ. ಕಾಂಗ್ರೆಸ್ ಪಕ್ಷ ಮತ್ತದರ ಹೈಕಮಾಂಡ್ ಗೆ ಇದೊಂದು ನಿರ್ಣಾಯಕ ಸಂದರ್ಭ ಈ ಸಂದರ್ಭದಲ್ಲಿ ದಲಿತರನ್ನ ಉಪ ಮಂತ್ರಿಯನ್ನಾಗಿ ಮಾಡುವುದು ಕಾಂಗ್ರೆಸ್ ಪಕ್ಷದ ಕರ್ತವ್ಯವೇ ಆಗಿದೆ, ನಿರಂತರವಾಗಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸುತ್ತಾ ಬಂದವರಿಗೆ ಸೂಕ್ತ ಪ್ರಾತಿನಿಧ್ಯ ಕಲ್ಪಿಸಿದಂತಾಗುತ್ತದೆ ಹಾಗಾಗಿ ಕಾಂಗ್ರೆಸ್ ಪಕ್ಷವು ಕರ್ನಾಟಕದಲ್ಲಿ ನೂತನವಾಗಿ ರಚನೆಗೊಳ್ಳಲಿರುವ ಮಂತ್ರಿ ಮಂಡಲದಲ್ಲಿ ಕಾಂಗ್ರೆಸ್ಸಿನ ಹಿರಿಯ ರಾಜಕೀಯ ಮುತ್ಸದ್ದಿ ದಲಿತರ ಹಿತಚಿಂತಕರು ಆಗಿರುವ ಡಾಕ್ಟರ್ ಜಿ ಪರಮೇಶ್ವರ್ ರವರನ್ನು ಉಪಮುಖ್ಯಮಂತ್ರಿಗಳಾಗಿ ಆಯ್ಕೆ ಮಾಡಬೇಕು ಎಂದು ಒತ್ತಾಯಿಸಿದರು. ಇಲ್ಲದಿದ್ದಲ್ಲಿ ಕಾಂಗ್ರೆಸ್ ಪಕ್ಷ ಇದಕ್ಕೆ ತಕ್ಕ ಬೆಲೆತೆರಬೇಕಾಗುತ್ತದೆ ಎನ್ನುವ ಎಚ್ಚರಿಕೆಯನ್ನು ನೀಡಿದರು. ಇಂದಿನ ಪ್ರತಿಭಟನಾ ಕಾರ್ಯಕ್ರಮದಲ್ಲಿ ಡಾ. ಜಿ ಪರಮೇಶ್ವರ್ ಅಭಿಮಾನಿ ಬಳಗದ ಅಧ್ಯಕ್ಷ ಮಂಜುನಾಥ್, ಶಿವರಾಜ ಅಸ್ವಾಳ್, ಲೋಕೇಶ್, ಹೊನ್ನಪ್ಪ, ಗಂಗಣ್ಣ, ಬನ್ನಿ ಕುಪ್ಪೆ ಬಸವರಾಜ, ಧರ್ಮಾಪುರ ಕಾಳಪ್ಪ, ನಾಗರಾಜ ಮುಳ್ಳೂರು, ಕಲ್ಲಹಳ್ಳಿ ಮಲ್ಲೇಶ್ ಸೇರಿದಂತೆ ಹಲವು ದಲಿತ ಮುಖಂಡರು ಇಂದಿನ ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

# 5ರಂದು ಪ್ರತಿಭಾವಂತ ವಿದ್ಯಾರ್ಥಿಗಳ ಸನ್ಮಾನ: ಶಾಸಕ ಪ್ರಭು ಚವ್ಹಾಣ

ಮಲ್ಲಮ್ಮ ನುಡಿ ವಾರ್ತೆ

ಔರಾದ(ಬಿ) ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿ ಪರೀಕ್ಷೆಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳಿಗಾಗಿ ಜೂನ್ 5ರಂದು ಬೆಳಗ್ಗೆ 10 ಗಂಟೆಗೆ ಪಟ್ಟಣದ ಡಾ.ಗುರುಪಾದಪ್ಪ ನಾಗಮಾರಪಳ್ಳಿ ಕಲ್ಯಾಣಮಂಟಪದಲ್ಲಿ ಸನ್ಮಾನ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಮಾಜಿ ಸಚಿವರು ಹಾಗೂ ಶಾಸಕರಾದ ಪ್ರಭು ಬಿ.ಚವ್ಹಾಣ ತಿಳಿಸಿದ್ದಾರೆ.

ಕಾರ್ಯಕ್ರಮದಲ್ಲಿ ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿ ಪರೀಕ್ಷೆಗಳಲ್ಲಿ ಅತಿ ಹೆಚ್ಚು ಅಂಕಗಳನ್ನು ಗಳಿಸಿದ ತಾಲ್ಲೂಕಿನ 3 ಟಾಪರ್‌ಗಳಿಗೆ ನಗದು ಬಹುಮಾನವಿದ್ದು, ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿಗೆ 21,000, ದ್ವಿತೀಯ ಸ್ಥಾನ ಪಡೆದ ವಿದ್ಯಾರ್ಥಿಗೆ 11,000 ಹಾಗೂ ತೃತೀಯ ಸ್ಥಾನ ಪಡೆದ ವಿದ್ಯಾರ್ಥಿಗೆ 7,000 ನಗದು ಬಹುಮಾನ ನೀಡಿ ಸನ್ಮಾನಿಸಲಾಗುತ್ತದೆ. ಇದರೊಂದಿಗೆ ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿ ಪರೀಕ್ಷೆಗಳಲ್ಲಿ ಶೇ.80ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದ ಔರಾದ ಹಾಗೂ ಕಮಲನಗರ ತಾಲ್ಲೂಕುಗಳ ಎಲ್ಲ ವಿದ್ಯಾರ್ಥಿಗಳನ್ನು ಉಡುಗೊರೆಯೊಂದಿಗೆ ಸನ್ಮಾನಿಸಲಾಗುವುದು. ವಿದ್ಯಾರ್ಥಿಗಳ ಶೈಕ್ಷಣಿಕ ಸಾಧನೆಗೆ ಪ್ರೋತ್ಸಾಹ ನೀಡಿದ ಅವರ ತಂದೆ–ತಾಯಿ ಹಾಗೂ ಶಾಲೆಗಳ ಮುಖ್ಯಗುರುಗಳು, ಶೇ.100 ಫಲಿತಾಂಶ ಪಡೆದ ಶಾಲೆಗಳ ಮುಖ್ಯಗುರುಗಳು ಮತ್ತು ಶಿಕ್ಷಕರಿಗೂ ಸಹ ಇದೇ ಸಂದರ್ಭದಲ್ಲಿ ಗೌರವಿಸಲಾಗುವುದೆಂದು ಹೇಳಿದ್ದಾರೆ.




ಔರಾದ್ ವಿಧಾನಸಭಾ ಕ್ಷೇತ್ರವು ಸರ್ವತೋಮುಖವಾಗಿ ಅಭಿವೃದ್ಧಿಯಾಗಬೇಕೆಂಬ ಗುರಿಯೊಂದಿಗೆ ಕೆಲಸ ಮಾಡುತ್ತಿದ್ದು, ಅಭಿವೃದ್ಧಿಯ ಕೇಂದ್ರಬಿಂದುವಾಗಿರುವ ಶಿಕ್ಷಣ ಕ್ಷೇತ್ರದ ಏಳಿಗೆಗೆ ಮೊದಲ ಆದ್ಯತೆ ನೀಡಿದ್ದೇನೆ. ಪ್ರತಿ ವರ್ಷ ಗ್ರಾಮ ಸಂಚಾರ ನಡೆಸಿ ಎಲ್ಲ ಶಾಲೆ–ಕಾಲೇಜುಗಳಿಗೆ ಖುದ್ದಾಗಿ ಭೇಟಿ ನೀಡಿ ಪರಿಶೀಲಿಸುತ್ತೇನೆ. ಕುಂದು ಕೊರತೆಗಳು ಕಾಣಿಸಿದರೆ ಸರಿಪಡಿಸುವ ಕೆಲಸ ಮಾಡುತ್ತಿದ್ದೇನೆ. ಅವಶ್ಯಕತೆಗೆ ತಕ್ಕಂತೆ ಶಾಲಾ–ಕಾಲೇಜು, ವಸತಿ ಶಾಲೆ, ವಸತಿ ನಿಲಯಗಳು, ಅಂಗನವಾಡಿ ಕೇಂದ್ರಗಳನ್ನು ನಿರ್ಮಿಸುತ್ತಿದ್ದೇನೆ. ಕಂಪೌಂಡ್, ಕುಡಿಯುವ ನೀರು, ಶೌಚಾಲಯ, ಗ್ರಂಥಾಲಯ ಸೇರಿದಂತೆ ಎಲ್ಲ ರೀತಿಯ ಮೂಲಭೂತ ಸೌಕರ್ಯಗಳನ್ನು ಕಲ್ಪಸುತ್ತಿದ್ದೇನೆ.

ವಿದ್ಯಾರ್ಥಿಗಳಲ್ಲಿ ಆತ್ಮಸ್ಥೈರ್ಯ ಹೆಚ್ಚಿಸುವ ಹಾಗೂ ಶಿಕ್ಷಕರ ಕಾರ್ಯಕ್ಷಮತೆಯನ್ನು ಹೆಚ್ಚಿಸಿ ಶೈಕ್ಷಣಿಕ ಫಲಿತಾಂಶ ಸುಧಾರಿಸುವ ಉದ್ದೇಶದಿಂದ 2009ರಿಂದ ಪ್ರತಿಭಾವಂತ ವಿದ್ಯಾರ್ಥಿಗಳು ಮತ್ತು ಶಿಕ್ಷಕರನ್ನು ಸನ್ಮಾನಿಸುತ್ತಾ ಬರುತ್ತಿದ್ದೇನೆ. ಅದರಂತೆ ಈ ವರ್ಷವೂ ಕೂಡ ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿಯ 900 ವಿದ್ಯಾರ್ಥಿಗಳನ್ನು ಸನ್ಮಾನಿಸಲಾಗುತ್ತಿದೆ. ಶೈಕ್ಷಣಿಕ ಅಭಿವೃದ್ಧಿಗೆ ಶಿಕ್ಷಕರ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ಎಲ್ಲ ಶಿಕ್ಷಕರು ಹೆಚ್ಚಿನ ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕು.

ವಿದ್ಯಾರ್ಥಿಗಳ ಭವಿಷ್ಯ ರೂಪಿಸುವಲ್ಲಿ ಶಿಕ್ಷಕರ ಜವಾಬ್ದಾರಿ ದೊಡ್ಡದಾಗಿದ್ದು, ಪ್ರತಿಯೊಂದು ಶಾಲೆಯೂ ಶೇ.100ರಷ್ಟು ಫಲಿತಾಂಶ ದಾಖಲಿಸಲು ಮತ್ತು ಪರೀಕ್ಷೆ ಬರೆದ ಪ್ರತಿಯೊಬ್ಬ ವಿದ್ಯಾರ್ಥಿ ಉತ್ತೀರ್ಣವಾಗಬೇಕು ಎಂಬ ಸಂಕಲ್ಪದೊಂದಿಗೆ ಕೆಲಸ ಮಾಡಬೇಕು. ನಮ್ಮ ಕ್ಷೇತ್ರದ ಮಕ್ಕಳು ಕೂಡ ಐಎಎಸ್, ಐಪಿಎಸ್, ವೈದ್ಯರು, ಇಂಜಿನೀಯರ್‌ಗಳಂತಹ ಉನ್ನತ ಹುದ್ದೆಗಳನ್ನು ಅಲಂಕರಿಸಬೇಕೆಂಬ ಕನಸಿದೆ. ವಿದ್ಯಾರ್ಥಿಗಳಿಗೆ ಈ ದಿಸೆಯಲ್ಲಿ ಸೂಕ್ತ ಮಾರ್ಗದರ್ಶನ ನೀಡಬೇಕು. ಶೈಕ್ಷಣಿಕ ಏಳಿಗೆಗೆ ಇಲಾಖೆ ಅಧಿಕಾರಿಗಳು ಮೇಲುಸ್ತುವಾರಿಯನ್ನು ಇನ್ನಷ್ಟು ಸರಿಪಡಿಸಿಕೊಳ್ಳಬೇಕೆಂದು ತಿಳಿಸಿದ್ದಾರೆ.

ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರುತಿಸಿ ಪ್ರೋತ್ಸಾಹಿಸುವ ಮೂಲಕ ಶೈಕ್ಷಣಿಕ ಗುಣಮಟ್ಟ ಹೆಚ್ಚಿಸಲು ಈ ಕಾರ್ಯಕ್ರಮ ಸಹಕಾರಿಯಾಗಲಿದ್ದು, ವಿದ್ಯಾರ್ಥಿಗಳು, ಪೋಷಕರು ಹಾಗೂ ಶಾಲೆಗಳ ಮುಖ್ಯಗುರುಗಳು ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಶಾಸಕರು ಮನವಿ ಮಾಡಿದ್ದಾರೆ.

ಶಾಲಾ ಪ್ರಾರಂಭೋತ್ಸವ: ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಔರಾದ ಪಟ್ಟಣದ ಆದರ್ಶ ವಿದ್ಯಾಲಯದಲ್ಲಿ ಜೂನ್ 1ರಂದು ಸ್ವರಸ್ವತಿಯ ಪ್ರತಿಮೆಗೆ ಪೂಜೆ ನೆರವೇರಿಸಿ, ವಿದ್ಯಾರ್ಥಿಗಳಿಗೆ ಸಹಿ ತಿನ್ನಿಸಿ, ಹೂಮಳೆ ಸುರಿಸುವ ಮೂಲಕ 2026–27ನೇ ಸಾಲಿನ ಶಾಲಾ ಪ್ರಾರಂಭೋತ್ಸವವನ್ನು ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿ, ಔರಾದ(ಬಿ) ವಿಧಾನಸಭಾ ಕ್ಷೇತ್ರದಲ್ಲಿ ಶೈಕ್ಷಣಿಕ ಅಭಿವೃದ್ಧಿಗೆ ಹೆಚ್ಚಿನ ಒತ್ತು ಕೊಟ್ಟಿದ್ದೇನೆ. ಅದಕ್ಕೆ ಪೂರಕವಾಗಿ ಏನೇನು ಬೇಕೋ ಎಲ್ಲವನ್ನು ಮಾಡಿಕೊಡುತ್ತಿದ್ದೇನೆ. ಇದಕ್ಕೆ ಶಿಕ್ಷಕರು ಕೈ ಜೋಡಿಸಬೇಕು. ವಿದ್ಯಾರ್ಥಿಗಳನ್ನು ತಮ್ಮ ಮಕ್ಕಳಂತೆ ಭಾವಿಸಿ ಬೋಧನೆ ಮಾಡಬೇಕು. ಈ ವರ್ಷದ ಫಲಿತಾಂಶ ತೃಪ್ತಿ ತಂದಿದೆ. ಮುಂದಿನ ದಿನಗಳಲ್ಲಿ ಇನ್ನಷ್ಟು ಸುಧಾರಿಸಬೇಕು. ಔರಾದನ್ನು ರಾಜ್ಯದಲ್ಲಿಯೇ ಪ್ರಥಮ ಸ್ಥಾನಕ್ಕೆ ತರಲು ಯತ್ನಿಸಬಹುದು. ಶಿಕ್ಷಕರು ಪ್ರಯತ್ನಿಸಿದರೆ ಸಾಧ್ಯವಿದೆ ಎಂದು ಹೇಳಿದರು.

ಎಲ್ಲ ಸರ್ಕಾರಿ ಶಾಲೆಗಳಲ್ಲಿ ದಾಖಲಾತಿ ಹೆಚ್ಚಾಗಬೇಕು. ಉತ್ತಮ ಫಲಿತಾಂಶ ನೀಡುವ ಜೊತೆಗೆ ಎಲ್ಲರೂ ಸರಿಯಾಗಿ ಭೋಧನೆ ಮಾಡಬೇಕು. ಸಮಯ ಪಾಲನೆ ಮಾಡಬೇಕು. ಮಕ್ಕಳ ಮನೆಗೆ ಭೇಟಿ ನೀಡಿ ನಾವು ಚನ್ನಾಗಿ ಪಾಠ ಮಾಡುತ್ತೇವೆ ಎಂದು ಪಾಲಕರ ಮನವೊಲಿಸಬೇಕು. ಪಠ್ಯ ಚಟುವಟಿಕೆಗಳನ್ನು ಅಚ್ಚುಕಟ್ಟಾಗಿ ಮಾಡಬೇಕು. ಶಾಲೆಯ ಆವರಣವನ್ನು ಶುಚಿಯಾಗಿ ಇಟ್ಟುಕೊಳ್ಳಬೇಕು. ಕಡ್ಡಾಯವಾಗಿ ಕಂಪೌಂಡ್, ಶೌಚಾಲಯ, ಕುಡಿಯುವ ನೀರಿನ ವ್ಯವಸ್ಥೆ ಇರಲೇಬೇಕು. ಎಲ್ಲಿಯಾದರೂ ಕೊರತೆಯಿದ್ದಲ್ಲಿ ನನಗೆ ತಿಳಿಸಿ ಒದಗಿಸಲು ಕ್ರಮ ವಹಿಸುತ್ತೇನೆ ಎಂದರು.

ಈ ಸಂದರ್ಭದಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಚಂದ್ರಕಾಂತ ಶಹಾಬಾದಕರ್, ಕ್ಷೇತ್ರಶಿಕ್ಷಣಾಧಿಕಾರಿ ವಾಗಂಬರ ಗಾಯಕವಾಡ, ಕ್ಷೇತ್ರಸಮನ್ವಯಾಧಿಕಾರಿ ಪ್ರಕಾಶ ರಾಠೋಡ, ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಧೂಳಪ್ಪ ಮಳೆನೂರ, ಮುಖಂಡರಾದ ಶಿವಾಜಿರಾವ ಪಾಟೀಲ ಮುಂಗನಾಳ, ಶಿಕ್ಷಕರ ಸಂಘದ ಪಂಢರಿ ಆಡೆ, ಸೂರ್ಯಕಾಂತ ಬಿರಾದಾರ, ವಿಶ್ವನಾಥ ಬಿರಾದಾರ, ಪದವಿ ಪೂರ್ವ ಕಾಲೇಜು ಪ್ರಾಂಶುಪಾಲರಾದ ಓಂಪ್ರಕಾಶ ದಡ್ಡೆ, ಆದರ್ಶ ವಿದ್ಯಾಲಯ ಪ್ರಾಂಶುಪಾಲ ಇನಾಯತ ಅಲಿ ಸೌದಾಗರ್, ಎಸ್ಡಿಎಂಸಿ ಅಧ್ಯಕ್ಷರು ಸೇರಿದಂತೆ ಶಿಕ್ಷಣ ಇಲಾಖೆಯ ಅಧಿಕಾರಿಗಳು, ಮುಖ್ಯಗುರುಗಳು ಹಾಗೂ ಇತರರರು ಉಪಸ್ಥಿತರಿದ್ದರು. ಡಾ.ಶಾಲಿವಾನ್ ಉದಗೀರೆ ನಿರೂಪಿಸಿ ವಂದಿಸಿದರು.

## ಕೆಯುಡಬ್ಲ್ಯೂಜೆ ಪ್ರತಿಭಾ ಪುರಸ್ಕಾರ

## ರಾಜಕಾರಣಿಗಳ ಜೊತೆ ಪತ್ರಕರ್ತರಿಗೂ ಸಾಮಾಜಿಕ ಜವಾಬ್ದಾರಿ ಇದೆ: ಬೊಮ್ಮಾಯಿ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ರಾಜಕಾರಣಿ ಹಾಗೂ ಅಧಿಕಾರದಲ್ಲಿರುವವರಿಗೆ ಸಾರ್ವಜನಿಕವಾಗಿರುವ ಜವಾಬ್ದಾರಿ ಎಷ್ಟಿದೆಯೋ ಅಷ್ಟೇ ಜವಾಬ್ದಾರಿ ಪತ್ರಕರ್ತರಿಗೂ ಇದೆ. ನಾವು ತೆಗೆದುಕೊಳ್ಳುವ ತೀರ್ಮಾನ ಸಮಾಜದ ಮೇಲೆ ಪರಿಣಾಮ ಬೀರುತ್ತದೆ. ತಾವು ಬರೆಯುವ ವರದಿ ಸಮಾಜದ ಮೇಲೆ ಪರಿಣಾಮ ಬೀರುತ್ತದೆ. ನಮ್ಮ ಬುದ್ದಿವಂತಿಕೆ ಸಮಾಜದ ಒಳಿತಿಗೆ ಬಳಕೆ ಆಗಬೇಕು. ಸಮಾಜದಲ್ಲಿನ ದೃಷ್ಕೃತ್ಯ ಮುಚ್ಚುವುದಕ್ಕೆ ಬಳಕೆ ಆಗಬಾರದು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಚಿಕ್ಕಬಳ್ಳಾಪುರದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಏರ್ಪಡಿಸಿದ್ದ ಪತ್ರಕರ್ತರ ಮಕ್ಕಳ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಪಾಲ್ಗೊಂಡು ದಿಕ್ಸೂಚಿ ಭಾಷಣ ಮಾಡಿದರು. ಪತ್ರಕರ್ತರ ಮಕ್ಕಳ ಪ್ರತಿಭೆಯನ್ನು ಗುರುತಿಸಿ ಸನ್ಮಾನಿಸುವ ಮೂಲಕ ಪ್ರೋತ್ಸಾಹಿಸುವ ಸದುದ್ದೇಶಿತ ಕೆಲಸವನ್ನು ಮಾಡುತ್ತಿರುವುದು ಅಭಿನಂದನೀಯ. ಅದಕ್ಕಾಗಿ ಕೆಯುಡಬ್ಲ್ಯೂಜೆ ಪದಾಧಿಕಾರಿಗಳನ್ನು ಅಭಿನಂದಿಸುತ್ತೇನೆ. ನಾನು ಸಂತೋಷದಿಂದ ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದೇನೆ ಎಂದರು. ತಾವು ಸಿಎಂ ಆಗಿದ್ದ ಸಂದರ್ಭದಲ್ಲಿ ಜಾಹಿರಾತುಗಳು ಸೇರಿದಂತೆ ಹಲವು ರೀತಿಯಲ್ಲಿ ಸಹಕಾರ ನೀಡಿದ್ದನ್ನು ಸ್ಮರಿಸಿಕೊಂಡರು. ಒಬ್ಬ ರಾಜಕಾರಣಿ ಅಧಿಕಾರದಲ್ಲಿದ್ದಾಗ ಕರೆಯುವುದು ಬಹಳ ಸಹಜ. ಆದರೆ ಅಧಿಕಾರದಲ್ಲಿ ಇಲ್ಲದಿರುವಾಗ ನನ್ನನ್ನು ನೆನಪು ಮಾಡಿಕೊಂಡು ಕರೆದಿರುವುದು ನಿಮ್ಮ ದೊಡ್ಡಗುಣ. ಇದು ನಿಮ್ಮ ಕೃತಜ್ಞತಾ ಗುಣ. ಬೈಬಲ್‌ನಲ್ಲಿ ಹೇಳುತ್ತಾರೆ ಕೃತಜ್ಞತೆ ಇಲ್ಲದವರು ಮನುಷ್ಯರು ಅಲ್ಲವೇ ಅಲ್ಲ ಎಂದರು. ಜಾಗತೀಕರಣ, ಖಾಸಗೀಕರಣದ ನಡುವೆ ನಾವು ಅಂತಕರಣವನ್ನು ಮರೆಯುತ್ತಿದ್ದೇವೆ. ಅಂತಕರಣ ಇಲ್ಲದಿರುವ ಮನುಷ್ಯರ ಸಂಬಂಧವೇ ಇರುವುದಿಲ್ಲ. ಅಂತದರಲಿ ತಾವು ಅಂತಕರಣವನ್ನು ಪುನರ್ ಸ್ಥಾಪನೆ ಮಾಡಿದ್ದೀರಿ ಎಂದು ಹೇಳಿದರು.

*ಪ್ರಶ್ನಿಸುವ ಅಧಿಕಾರ*

ಯಾವುದಾದರೂ ಒಂದು ಶಕ್ತಿ ಬೆಳೆಯಬೇಕೆಂದರೆ ಅದನ್ನು ಪ್ರಶ್ನೆ ಮಾಡಲೇಬೇಕು. ನಂಬಿಕೆಗೆ ಯಾವುದೇ ಆಧಾರ ಇಲ್ಲ. ಆದರೆ, ವಿಜ್ಞಾನಕ್ಕೆ ಆಧಾರ ಬೇಕು. ವಿಜ್ಞಾನಕ್ಕೆ ತರ್ಕಬದ್ಧ ಚಿಂತನೆ ಬೇಕಾದರೆ ಹೊಸ ಚಿಂತನೆ ಹುಟ್ಟು ಹಾಕುತ್ತದೆ. ಪ್ರಜಾಪಭುತ್ವದಲ್ಲಿ ಪಶ್ನೆ ಕೇಳುವ ಅಧಿಕಾರ ಕೊಟ್ಟಿರುವುದು ಪತ್ರಕರ್ತರಿಗೆ ನೀವು ಎಷ್ಟು ಅರ್ಥಗರ್ಭವಾದ ಪ್ರಶ್ನೆಗಳನ್ನು ಕೇಳುತ್ತಿರೋ ಅಷ್ಟು ಒಳ್ಳೆಯ ವಿಚಾರಗಳು ಸಮಾಜಕಷ್ಟೇ ಅಲ್ಲದೇ ರಾಜಕಾರಣಕ್ಕೂ ಬರುತ್ತದೆ. ನೀವು ಕೇಳುವ ಪಶ್ನೆ ಸರಳವಾಗಿದ್ದರೆ ಸರಿಯಾದ ಉತ್ತರ ಬರುವುದಿಲ್ಲ. ಪಶ್ನೆ ಕೇಳುವ ಹಕ್ಕು ಪತ್ರಕರ್ತರಿಗಿದೆ ಎಂದರು. ಪತ್ರಕರ್ತರು ಮತ್ತು ರಾಜಕಾರಣಿಗಳ ನಡುವೆ ಒಳ್ಳೆಯ ಸಂಬಂಧ ಇದ್ದರೆ ಕಳ್ಳರು ಪೊಲೀಸರ ನಡುವಿನ ಸಂಬಂಧ ಇದ್ದಂಗೆ ಆಗಿದೆ. ಎಲ್ಲಿವರೆಗೂ ಕಠಿಣ ಪಶ್ನೆ ಕೇಳುವುದಿಲ್ಲವೋ ಅಲ್ಲಿಯವರೆಗೂ ರಾಜಕಾರಣಿಗಳಿಂದ ಒಳ್ಳೆಯ ಆಡಳಿತ ನಿರೀಕ್ಷೆ ಮಾಡಬೇಡಿ ಎಂದು ಹೇಳಿದರು.

ಆಡಳಿತಗಾರರಿಗೆ ಒಳ್ಳೆಯ ಪಶ್ನೆ ಕೇಳಿದರೆ ಆಡಳಿತಗಾರರಿಗೂ ಉತ್ತಮ ಆಡಳಿತ ನಡೆಸಲು ಅನುಕೂಲವಾಗುತ್ತದೆ. ಎಲ್ಲರ ಮನೆಯಲ್ಲಿಯೂ ಇಡ್ಲಿ ದೋಸೆ ಇದ್ದೇ ಇರುತ್ತದೆ. ಅದರ ಬಗ್ಗೆ ಎಷ್ಟು ದಿನ ಬರೆಯುತ್ತೀರಿ ಎಂದು ಪಶ್ನಿಸಿದರು. *ಗಂಡ ಹೆಂಡತಿ ಸಂಬಂಧ* ಈಗ ಡಿಜಿಟಲ್ ಪತ್ತಿಕೋದ್ಯಮ ಬಂದಿದೆ. ಅದರಲ್ಲಿ ಸತ್ಯ ಎಷ್ಟು ಸುಳ್ಳು ಎಷ್ಟು ಅನ್ನುವುದು ಗೊತ್ತಿಲ್ಲ. ರಾಜಕಾರಣಿಗಳಿಗೆ ಪತಕರ್ತರಿಗೆ ಅವಿನಾಭಾವ ಸಂಬಂಧ. ಗಂಡ ಹೆಂಡತಿ ಸಂಬಂಧ ಇದ್ದಹಾಗೆ. ಪತ್ರಿಕೆ ಇಲ್ಲದಿದ್ದರೆ ರಾಜಕಾರಣಿಗಳ ಪರಿಸ್ಥಿತಿ ಏನಾಗುತ್ತಿತ್ತು. ಅವರು ಮಾಡಿರುವ ಕೆಲಸ, ಅವರ ಸರ್ಕಾರಕ್ಕೆ ಬೇಕಾಗಿರುವ ಪ್ರಚಾರ ಸಿಗದಿದ್ದರೆ ರಾಜಕಾರಣಿಗೆ ಯಾವುದೇ ಪ್ರಯೋಜನ ಇಲ್ಲ. ಪತ್ರಿಕೆಗಳಿಗೂ ರಾಜಕಾರಣಿಯ ಸುದ್ದಿ ಬರೆಯದಿದ್ದರೆ ಅವರ ಪತ್ರಿಕೆಯನ್ನೂ ಓದುವುದಿಲ್ಲ. ಇದೊಂದು ರೀತಿ ಗಂಡ ಹೆಂಡತಿ ಸಂಬಂಧ ಇದ್ದಹಾಗೆ ಎಂದರು.

ರಾಜಕಾರಣಿಗೆ ನಿವೃತ್ತಿ ಇಲ್ಲ. ರಾಜಕಾರಣಕ್ಕೆ ಬರಲು ಅರ್ಹತೆಯೂ ಇಲ್ಲ. ಹಾಗೇ ಪತ್ರಕರ್ತರಿಗೆ ಎಲ್ಲಿಯವರೆಗೂ ಬರೆಯುವ ಶಕ್ತಿ ಇರುತ್ತದೆಯೋ ಅವರು ಪತ್ರಕರ್ತರೇ ಆಗಿರುತ್ತಾರೆ. ಸೇವಕರೆ ಜನಪರ ಇರುವ ರಾಜಕಾರಣಿ. ಪತ್ರಕರ್ತರೂ ಅಷ್ಟೇ ಎಲ್ಲಿಯವರೆಗೂ ಬರೆಯುವ ಇಚ್ಚಾಶಕ್ತಿ ಇದೆ–ಯೋ ಅಲ್ಲಿವರೆಗೂ ನಿಮ್ಮ ವೃತ್ತಿ ಮುಂದುವರೆಸಬಹುದು ಎಂದರು. ತಾವು ಬರೆಯುವ ವರದಿ ಸಮಾಜದ ಮೇಲೆ ಪರಿಣಾಮ ಬೀರುತ್ತದೆ. ಹೀಗಾಗಿ ಒಂದು ರೀತಿಯಲ್ಲಿ ನೀವೂ ಕೂಡ ರಾಜಕಾರಣಿಗಳು, ನಾವು ಪತ್ರಕರ್ತರು. ನಿಮಗೆ ಏನು ಉತ್ತರ ಬೇಕೊ ಅದನ್ನು ಪಶ್ನೆ ಕೇಳುತ್ತೀರಿ. ನಾವೂ ಬುದ್ದಿವಂತರಿದ್ದೇವೆ. ಪತ್ರಿಕೆಯಲ್ಲಿ ಏನು ಬರಬೇಕೊ ಅದನ್ನು ಹೇಳುತ್ತೇವೆ. ಈ ಬುದ್ಧಿವಂತಿಕೆ ಸಮಾಜದ ಒಳಿತಿಗೆ ಬಳಕೆ ಆಗಬೇಕು. ಸಮಾಜದ ದೃಷ್ಕೃತ ಮುಚ್ಚುವುದಕ್ಕೆ ಬಳಕೆ ಆಗಬಾರದು ಎಂದು ಹೇಳಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಮಾತನಾಡಿ ಪ್ರತಿ ವರ್ಷ ಮಕ್ಕಳ ಪ್ರತಿಭಾ ಪುರಸ್ಕಾರ ಮಾಡಲಾಗುತ್ತಿದೆ ಎಂದರು.

ಈ ಸಂದರ್ಭದಲ್ಲಿ ಮಾಜಿ ಸಚಿವ ಡಾ.ಸುಧಾಕರ್, ಸಂಸದ ಡಾ. ಕೆ. ಸುಧಾ–ಕರ, ಹಂಗಾಮಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್, ಬೆಂಗಳೂರು ಉತ್ತರ ವಿವಿ ಕುಲಪತಿ ಡಾ. ಬಿ.ಕೆ. ರವಿ, ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಜಿ.ಪ್ರಭು, ಕೆಯುಡಬ್ಲ್ಯೂಜೆ ಪದಾಧಿಕಾರಿಗಳು, ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ್, ಜಿಲ್ಲಾಧ್ಯಕ್ಷ ರವಿಕುಮಾರ್ ಹಿರಿಯ ಪತ್ರಕರ್ತ ಬಿ.ವಿ.ಮಲ್ಲಿಕಾರ್ಜುನಯ್ಯ ಸೇರಿದಂತೆ ಅನೇಕ ಹಿರಿಯ ಪತ್ರಕರ್ತರು ಪಾಲ್ಗೊಂಡಿದ್ದರು. ಇದೇ ಸಂದರ್ಭದಲ್ಲಿ ಪ್ರತಿಭಾನ್ವಿತ ಪತ್ರಕರ್ತರ ಮಕ್ಕಳನ್ನು ಸನ್ಮಾನಿಸಲಾಯಿತು.

## ಹಾಲು ಉತ್ಪಾದಕರಿಗೆ ಪ್ರೋತ್ಸಾಹ, ಸರ್ಕಾರಿ ಸೌಲಭ್ಯಗಳು ದೊರೆಯಲಿ

ಕಲಬುರಗಿ:ಜೂ.1:ಹಾಲಿಗೆ ನೀಡುತ್ತಿರುವ ಪ್ರೋತ್ಸಾಹಧನ ಹೆಚ್ಚಳಗೊಳಿಸುವುದು, ಹೈನೋದ್ಯಮ್ಯಕ್ಕೆ ಹೆಚ್ಚಿನ ಪ್ರೋತ್ಸಾಹ ನೀಡುವುದು, ಸೂಕ್ತ ಫಲಾನುಭವಿಗೆ ಸಾಲ ಸೌಲಭ್ಯ, ಸಬ್ಸಿಡಿ, ಶೆಡ್ ನಿರ್ಮಾಣಕ್ಕೆ ಧನ ಸಹಾಯ, ಮೇವು ಕತ್ತರಿಸುವ ಹಾಗೂ ಹಾಲೂ ಕರೆಯುವ ಯಂತ್ರ ನೀಡುವುದು ಸೇರಿದಂತೆ ಇನ್ನಿತರ ಸರ್ಕಾರಿ ಸೌಲಭ್ಯಗಳು ದೊರೆಯಬೇಕು. ಆಗ ಮಾತ್ರ ಹೈನುಗಾರಿಕೆಯತ್ತ ಜನರ ಒಲವು ಹೆಚ್ಚಾಗುತ್ತದೆ ಎಂದು ಹಿರಿಯ ಹೈನೋದ್ಯಮಿ ಬಾಬುರಾವ ಪಾಟೀಲ ಹೇಳಿದರು.

ನಗರದ ಹೊರವಲಯದ ಉಪಳಾಂವನ ಪಾಟೀಲ್‌ರ ಹೊಲದಲ್ಲಿನ ಹಾಲಿನ ಡೈರಿಯಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಏರ್ಪಡಿಸಿದ್ದ 'ವಿಶ್ವ ಹಾಲು ದಿನಾಚರಣೆ'ಯಲ್ಲಿ ಅವರು ಮಾತನಾಡಿದರು.

ಬಳಗದ ಅಧ್ಯಕ್ಷ ಹಾಗೂ ಅರ್ಥಶಾಸ್ತ್ರ ಉಪನ್ಯಾಸಕ ಎಚ್.ಬಿ.ಪಾಟೀಲ ಮಾತನಾಡಿ, ಹಾಲು ಅಮೃತಕ್ಕೆ ಸಮಾನ. ಎಲ್ಲಾ ಪೋಷಕಾಂಶಗಳುಳ್ಳ ಸಮತೋಲಿತ ಆಹಾರವಾಗಿದ್ದು, ಅದನ್ನು ವ್ಯರ್ಥ ಮಾಡಬಾರದು. ವಿಶ್ವದಲ್ಲಿ ಇಂದಿಗೂ ಕೂಡಾ ಅನೇಕ ಮಕ್ಕಳು ಹಾಲಿನ ಲಭ್ಯತೆಯಿಂದ ವಂಚಿತರಾಗಿ ಅಪೌಷ್ಟಿಕತೆಯನ್ನು ಎದುರಿಸುತ್ತಿದ್ದಾರೆ. ಕೃಷಿ ಜೊತೆಗೆ ಹೈನುಗಾರಿಕೆಗೆ ಆದ್ಯತೆಯನ್ನು ನೀಡಿ ಹಾಲಿನ ಉತ್ಪಾದಕತೆಯನ್ನು ವೃದ್ಧಿಗೊಳಿಸುವದರ ಜೊತೆಗೆ, ಅದನ್ನು ಉತ್ತಮವಾಗಿ ನಿರ್ವಹಣೆ ಮಾಡಿ ಶುದ್ಧ ಹಾಲು ಎಲ್ಲರಿಗೂ ದೊರೆಯುವಂತೆ ಮಾಡುವುದು ಇಂದಿನ ಅಗತ್ಯವಾಗಿದೆ. ಬಾಬುರಾವ ಪಾಟೀಲ ಕುಟುಂಬು ಕಳೆದ 40 ವರ್ಷಗಳಿಂದ ಹೈನುಗಾರಿಕೆಯನ್ನು ಮಾಡಿಕೊಂಡು ಸ್ವಾವಲಂಬನೆ ಜೀವನ ಸಾಗಿಸುತ್ತಾ, ಮಾದರಿಯಾಗಿದ್ದಾರೆ. 25 ಎಮ್ಮೆಗಳು ಮತ್ತು 5 ಮುರ್ರಾ ತಳಿಯ ಆಕಳುಗಳೊಂದಿಗೆ ಅಧಿಕ ಪ್ರಮಾಣ ಹಾಲನ್ನು ಉತ್ಪಾದಿಸಿ, ಕ್ಷೀರಕ್ರಾಂತಿ ಮಾಡುತ್ತಿದ್ದಾರೆ ಎಂದು ನುಡಿದರು.

## ಸಾಮಾಜಿಕ ಅಭಿವೃದ್ಧಿಯಲ್ಲಿ ಸಹಕಾರ ಸಂಘ ಸಂಸ್ಥೆಗಳ ಪಾತ್ರ ಅಪಾರವಾಗಿದೆ: ವಿಶ್ವನಾಥ್ ರೆಡ್ಡಿ ದರ್ಶನಾಪುರ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ,ಬೆಂಗಳೂರು ಯಾದಗಿರಿ ಜಿಲ್ಲಾ ಸಹಕಾರ ಒಕ್ಕೂಟ ನಿ,ಯಾದಗಿರಿ ಹಾಗೂ ಸಹಕಾರ ಇಲಾಖೆ ಯಾದಗಿರಿ ಹಾಗೂ ಸಗರನಾಡು ಪತ್ತಿನ ಸಹಕಾರ ಸಂಘ ನಿ, ಶಹಪುರ ಇವರುಗಳ ಸಂಯುಕ್ತಾ ಆಶ್ರಯದಲ್ಲಿ ಆಡಳಿತ ಮಂಡಳಿಯ ನಿರ್ದೇಶಕರಿಗೆ ಕ್ಲಸ್ಟರ್ ತರಬೇತಿ ಕಾರ್ಯಕ್ರಮ ಜರುಗಿಸಲಾಯಿತು , ಸಾಮಾಜಿಕ ಅಭಿವೃದ್ಧಿಯಲ್ಲಿ ಸಹಕಾರ ಸಂಘ ಸಂಸ್ಥೆಗಳ ಪಾತ್ರ ಅಪಾರವಾಗಿದೆ ಸಹಕಾರ ಕ್ಷೇತ್ರ ವಿಸ್ತಾರವಾದ ಕ್ಷೇತ್ರವಾಗಿದೆ ಸಹಕಾರ ತತ್ವವು ಈ ಕ್ಷೇತ್ರದ ಉದಾತ್ತ ಮುದತ್ತಧ್ಯೆಯವಾಗಿದೆ ಸಹಕಾರ ಸಂಘಗಳು ಗ್ರಾಮೀಣ ಮತ್ತು ನಗರ ಪ್ರದೇಶದ ಜನರಿಗೆ ಕೃಷಿ ಸಣ್ಣ ಉದ್ಯಮಗಳಿಗೆ ಸಾಲ ಸೌಲಭ್ಯಗಳ ನೆರವು ಒದಗಿಸುತ್ತಿವೆ ಎಂದು ಸಸಿಗೆ ನೀರು ಹಾಕುವುದರ ಮುಖಾಂತರ ವಿಶ್ವನಾಥ್ ರೆಡ್ಡಿ ದರ್ಶನಪುರ ಅಧ್ಯಕ್ಷರು ಯಾದಗಿರಿ ಜಿಲ್ಲಾ ಸಹಕಾರ ಒಕ್ಕೂಟ ನಿ, ಯಾದಗಿರಿ ಇವರು ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು ಅದೇ ರೀತಿಯಾಗಿ ವಿಶ್ವದಲ್ಲಿ ಸಹಕಾರ ಕ್ಷೇತ್ರ ವಲಯವು ಪ್ರಮುಖವಾದ ಕ್ಷೇತ್ರವಾಗಿದೆ ಭಾರತದಲ್ಲಿ ಕೂಡ ಸಹಕಾರ ವಲಯ ಮುಂಚೂಣಿಯಲ್ಲಿದೆ ಮುನ್ನಡೆ ಬರೆದಿದೆ ವಿಶ್ವದ ಸಹಕಾರ ಸಂಸ್ಥೆಗಳ ಅಂಕಿ ಅಂಶಗಳ ಪಟ್ಟಿಯಲ್ಲಿ ಭಾರತದ ಹಲವು ಸಹಕಾರ ಸಂಘಗಳು ತಮ್ಮ ಸ್ಥಾನವನ್ನು ಭದ್ರಪಡಿಸಿಕೊಂಡಿವೆ ಸಹಕಾರ ವ್ಯವಸ್ಥೆ ನಿಂತ ನೀರಲ್ಲ ಹರಿವ ಜಲಧಾರೆ ಎಂಬುವ ಮಾತಿಗೆ ಸಾಕ್ಷಿಯಾಗಿದೆ ಕಳೆದ 121 ವರ್ಷಗಳ ಸಹಕಾರ ಚಳುವಳಿ ಇತಿಹಾಸವನ್ನು ಅವಲೋಕಿಸಿದರೆ ಈ ಮಾತು ಸ್ಪಷ್ಟವಾಗುತ್ತದೆ ಸುದೀರ್ಘವಾದ ಭಾರತ ಸರ್ಕಾರ ಚಳುವಳಿಯಲ್ಲಿ ಹಲವು ಸಹಕಾರ ಸಂಘಗಳು ಅಬಲರಿಗೆ ಆರ್ಥಿಕ ಸಹಾಯ ದುಡಿಯುವ ಕೈಗೆ ಕೆಲಸ ನೀಡುವ ಮೂಲಕ ದೀರ್ಘ ಸೇವೆ ನೀಡುವ ಮೂಲಕ ದೇಶದ ಆರ್ಥಿಕ ವ್ಯವಸ್ಥೆಗೆ ತನ್ನದೇ ಆದ ಕೊಡುಗೆ ನೀಡುತ್ತಿದೆ ಎಂದು ಎಂ ನಾರಾಯಣ ಉಪಾಧ್ಯಕ್ಷರು ಯಾದಗಿರಿ ಜಿಲ್ಲಾ ಸಹಕಾರ ಒಕ್ಕೂಟ ನಿ, ಯಾದಗಿರಿ ಇವರು ಮುಖ್ಯ ಅತಿಥಿಯಾಗಿ ಮಾತನಾಡಿದರು ಸಹಕಾರ ಅಭಿವೃದ್ಧಿ ಕುರಿತು ಚಿಂತನೆ ಇಂದು ನಿನ್ನೆದಲ್ಲ 122 ವರ್ಷಗಳ ಹಿಂದೆ ಭಾರತದಲ್ಲಿ ಸಹಕಾರ ಚಳುವಳಿ ಆರಾಂಭವಾಗಿನಿಂದಲೂ ಸಹಕಾರ ಅಭಿವೃದ್ಧಿ ಕುರಿತು ಚಿಂತನೆಗಳು ನಡೆಯುತ್ತಲೇ ಇವೆ ಸಹಕಾರ ಚಳುವಳಿ ನಿಂತ ನೀರಲ್ಲ ಹರಿಯುವ ಜಲಧಾರೆ ಹಾಗಾಗಿ ಅದು ಜೀವಂತವಾಗಿ ಇರಬೇಕಾದರೆ ನಿರಂತರವಾಗಿ ಚಳುವಳಿ ಬಗ್ಗೆ ಮಾತು ಬರಹ ಚರ್ಚೆ ವಿಚಾರ ವಿನಿಮಯಗಳು ನಡೆಯುತ್ತಿರಬೇಕಾಗುತ್ತದೆ ಎಂದು ರೇವಣಸಿದ್ದಪ್ಪ ಕಲ್ಬುರ್ಗಿ ಸಂಘದ ಉಪಾಧ್ಯಕ್ಷರು ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು, ಸಹಕಾರಿ ಸಂಘಗಳಲ್ಲಿ ಸದಸ್ಯರು ಸಾಲ ಪಡೆಯುವುದು ಅವರ ಹಕ್ಕು ಹಾಗೆಯೇ ಸಕಾಲಕ್ಕೆ ಮರುಪಾವತಿ ಮಾಡುವುದು, ಸದಸ್ಯರ ಜವಾಬ್ದಾರಿ ಆಗಿರುತ್ತದೆ ಹಕ್ಕು ಮತ್ತು ಜವಾಬ್ದಾರಿ ಸುಲಲಿತವಾಗಿ ನಡೆದರೆ ಮಾತ್ರ ಸಹಕಾರಿ ಸಂಘಗಳಿಗೂ ಮತ್ತು ಸಾಲ ಪಡೆದವರಿಗೂ ಕ್ಷೇಮ ಎಂದು ಸುಧಾಕರ್ ಗುಡಿ ಸಂಘದ ನಿರ್ದೇಶಕರು ಕಾರ್ಯಕ್ರಮ ಕುರಿತು ಮಾತನಾಡಿದರು, ವಿಶ್ವನಾಥ್ ರೆಡ್ಡಿ ಎ ಪಾಟೀಲ್ ಹಳಿ ಸಗರ್ ಅಧ್ಯಕ್ಷರು ಸಗರ ನಾಡು ಪತ್ತಿನ ಸಹಕಾರ ಸಂಘ ನಿ, ಶಹಪುರ ಇವರು ಅಧ್ಯಕ್ಷತೆ ವಹಿಸಿದ್ದರು ಆಡಳಿತ ಮಂಡಳಿಯ ನಿರ್ದೇಶಕರ ಹಕ್ಕು ಕರ್ತವ್ಯ ಜವಾಬ್ದಾರಿ ಕುರಿತು ಶಿವಶಂಕರ ಸಹಕಾರ ಸಂಘಗಳ ಹಿರಿಯ ನಿರೀಕ್ಷಕರು ಇವರು ವಿಶೇಷ ಉಪನ್ಯಾಸ ನೀಡಿದರು ಶ್ರೀಮತಿ ಸುಜಾತ ಮಠ ಜಿಲ್ಲಾ ಸಹಕಾರ ಶಿಕ್ಷಕರು ಇವರು ಕಾರ್ಯಕ್ರಮದ ನಿರೂಪಣೆ ಮಾಡಿದರು,ಮುಖ್ಯ ಅತಿಥಿಗಳಾಗಿ ಶಾಂತಗೌಡ ಸಾದ್ಯಾಪುರ್ ನಿರ್ದೇಶಕರು ಯಾದಗಿರಿ ಜಿಲ್ಲಾ ಸಹಕಾರ ಒಕ್ಕೂಟ ನಿ,ಯಾದಗಿರಿ ಹಾಗೂ ದೇವಿಂದ್ರಪ್ಪ ವಿಶ್ವಕರ್ಮ ಅಧ್ಯಕ್ಷರು ಸಹಕಾರ ಭಾರತಿ ಶಹಪುರ ಹಾಗೂ ಮಹೇಶ ವಾರದ ದೇವೇಂದ್ರಪ್ಪ ನಾಶಿ ಸಂತೋಷ್ ವಿಶ್ವಕರ್ಮ ಹಾಗೂ ಸಂಘದ ಆಡಳಿತ ಮಂಡಳಿ ನಿರ್ದೇಶಕರು ಸಂಘದ ಕಾರ್ಯದರ್ಶಿಯಾದ ಚಂದ್ರಶೇಖರ್ ಪಾಟೀಲ್ ಉಪಸ್ಥಿತರಿದ್ದರು ಕಾರ್ಯಕ್ರಮದ ಸ್ವಾಗತವನ್ನು ವಿರುಪಣ್ಣ ಒಕ್ಕೂಟದ ವ್ಯವಸ್ಥಾಪಕರು ನಡೆಸಿಕೊಟ್ಟರು ಸಿದ್ದನಗೌಡ ಚಾಮನಾಳ ಒಕ್ಕೂಟದ ದ್ವಿತೀಯ ದರ್ಜೆ ಸಹಾಯಕರು ವಂದನಾರ್ಪಣೆ ಮಾಡಿದರು ಸಂಘದ ಸದಸ್ಯರು ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಪ್ರಿಯಾಂಕ್ ಖರ್ಗೆಗೆ ಡಿಸಿಎಂ ಸ್ಥಾನ ನೀಡಿ–ದರ್ಶನಾಪೂರ ಅವರಿಗೆ ಸಚಿವ ಸಂಪುಟದಲ್ಲಿ ಮುಂದುವರೆಸಿ:ಕಾಮರಡ್ಡಿ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಕಲ್ಯಾಣ ಕರ್ನಾಟಕದ ಭಾಗದಲ್ಲಿ ನೇರವಾಗಿ ದಿಟ್ಟತನದಿಂದ ಪ್ರತಿಪಕ್ಷದ ಕುರಿತು ಮಾತನಾಡುವ ಪ್ರಿಯಾಂಕ ಖರ್ಗೆಯವರಿಗೆ ಡಿ.ಸಿ.ಎಂ ಸ್ಥಾನವನ್ನು ನೀಡಬೇಕು ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪೂರ ಅವರಿಗೆ ಸಚಿವ ಸಂಪುಟದಲ್ಲಿ ಮುಂದುವರೆಸೆ ಉನ್ನತ ಖಾತೆಯನ್ನು ನೀಡಬೇಕು ಎಂದು ಯಾದಗೀರಿ ಮತಕ್ಷೇತ್ರದ ಕಾಂಗ್ರೆಸ್ ಪಕ್ಷದ ಮುಖಂಡ ಡಾ. ಎಸ್.ಬಿ.ಕಾಮರಡ್ಡಿ ಅವರು ಮನವಿ ಮಾಡಿದ್ದಾರೆ.ಅವರು ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿ, ತಮಗಿಂತ ಹಿರಿಯ ನಾಯಕರು ಬಿಜೆಪಿ ವಿರುದ್ಧ ಚಕಾರ ಎತ್ತದಿರುವಾಗ ಪುಟಿದೆದ್ದು ಬಿಜೆಪಿಗೆ ಸಿಂಹ ಸ್ವಪ್ನವಾಗಿ ಕಾಡಿದವರು ಪ್ರಿಯಂಕ್ ಖರ್ಗೆ ಆಗಿದ್ದಾರೆ. ಬಿಜೆಪಿ ಸರಕಾರದ ಅವದಿಯಲ್ಲಿ ಬಿಟ್ ಕಾಯಿನ್,ಪಿಎಸ್ಐ ಹಗರಣ ಸೇರಿ ಹಲವಾರು ಹಗರಣಗಳನ್ನು ಎಳೆ ಎಳೆಯಾಗಿ ಬಯಲಿಗೆಳೆದು ಜನಸಾಮಾನ್ಯರಿಗೆ ಅರ್ಥವಾಗಿಸುವಂತೆ ಮಾಧ್ಯಮ ಹಾಗೂ ಸಾಮಾಜಿಕ ಜಾಲತಾಣದ ಮೂಲಕ ಜನರ ಮನಸ್ಸಿಗೆ ತಲುಪಿಸಿದ್ದು ಕಾಂಗ್ರೆಸ್ ಪಕ್ಷದ ಸಾಮಾಜಿಕ ಜಾಲತಾಣಕ್ಕೆ ತನ್ನದೇ ಡೇರಿಂಗ್ ಟಚ್ ನೀಡಿ ಪುಟಿದೆಬ್ಬಿಸಿದ್ದು, ಪಕ್ಷದ ಗ್ಯಾರಂಟಿಗಳ ವಿಶಿಷ್ಟ ಪ್ರಚಾರ, ಕಲಬುರಗಿಯಲ್ಲಿ ಹಾಗೂ ಕಲ್ಯಾಣ ಕರ್ನಾಟಕ ಭಾಗದಲ್ಲಿ ದಾಖಲೆ ಕ್ಷೇತ್ರಗಳನ್ನು ಗೆಲ್ಲಿಸಿ ಬಿಜೆಪಿಯನ್ನು ದಿಕ್ಕುಪಾಲು ಮಾಡಿದ್ದು ಪ್ರಿಯಾಂಕ ಖರ್ಗೆಯವರಾಗಿದ್ದಾರೆ. ರಾಜ್ಯಸಭೆ ಪ್ರತಿಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ,ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ, ಮುಖ್ಯಮಂತ್ರಿ ಸಿದ್ಧರಾಮಯ್ಯ ಜತೆ ಸಾಮಾಜಿಕ ಜಾಲತಾಣದ ಮೂಲಕ ಕರ್ನಾಟಕದಲ್ಲಿ 2023ರ ಚುನಾವಣೆಯಲ್ಲಿ ಕಾಂಗ್ರೆಸ್ ಸರಕಾರ ಅಧಿಕಾರಕ್ಕೆ ಬರಲು ಪ್ರಮುಖ ಪಾತ್ರವಹಿಸಿದವರು ಪ್ರಿಯಾಂಕ ಖರ್ಗೆ.ಆದ್ದರಿಂದ ನೂತನ ಸಚಿವ ಸಂಪುಟದಲ್ಲಿ ಉಪ ಮುಖ್ಯಮಂತ್ರಿ ಸ್ಥಾನ ನೀಡಬೇಕು ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪೂರ ಅವರು ಸಚಿವರಾದ ನಂತರ ಯಾದಗಿರಿ ಜಿಲ್ಲೆಯಲ್ಲಿ ಅನೇಕ ಅಭಿವೃದ್ಧಿ ಕೇಲಸಮಾಡಿದ್ದು ಅವರನ್ನು ಸಚಿವ ಸಂಪುಟದಲ್ಲಿ ಮುಂದುವರೆಸಿ ಉನ್ನತ ಖಾತೆಯನ್ನು ನೀಡಬೇಕು ಎಂದು ಹಿರಿಯ ನಾಯಕರಲ್ಲಿ ಮನವಿ ಮಾಡಿದ್ದಾರೆ.

## ಬಯೊಮೆಟ್ರಿಕ್ ಹಾಜರಾತಿ ದುರ್ಬಳಕೆ ಕರವೇ ಆಕ್ರೋಶ.



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಗುರುಮಠಕಲ್ ಮತಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಪ. ಜಾ. ಮತ್ತು ಪ. ಪಂ. ವಸತಿ ನಿಲಯಗಳಲ್ಲಿ ಬಯೊಮೆಟ್ರಿಕ್ ಹಾಜರಾತಿ ಇದ್ದರೂ ಅದರ ಸದ್ಬಳಕೆ ಆಗದೇ ವಾರ್ಡನ್ ಗಳು ದುರ್ಬಳಕೆ ಮಾಡಿಕೊಳ್ಳುತ್ತಿದ್ದು, ಇದರಲ್ಲಿ ತಾಲ್ಲೂಕು ಅಧಿಕಾರಿಗಳು ಸಿಬ್ಬಂದಿ ವರ್ಗದವರು ಶಾಮೀಲಾಗಿದ್ದು, ಇವರ ವಿರುದ್ಧ ಕ್ರಮ ಕೈಗೊಂಡು ತಪ್ಪಿತಸ್ಥ ಅಧಿಕರಿಗಳ ಅಮಾನತು ಮಾಡುವಂತೆ ಕರವೇ ಜಿಲ್ಲಾ ಪ್ರಧಾನಕಾರ್ಯದರ್ಶಿ ಸಿದ್ದು ನಾಯಕ ಹತ್ತಿಕುಣಿ ಆಗ್ರಹಿಸಿದರು. ಗುರುಮಠಕಲ್ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳ ಮೆಟ್ರಿಕ್ ಪೂರ್ವ ಹಾಗೂ ನಂತರದ ವಸತಿ ನಿಲಯಗಳಲ್ಲಿ ಬಯೊಮೆಟ್ರಿಕ್ ಹಾಜರಾತಿ ಇದ್ದರೂ ಅದನ್ನು ನಿಷ್ಕ್ರಿಯಗೊಳಿಸಿ ತಮಗೆ ಬೇಕಾದಂತೆ ದಾಖಲೆಗಳನ್ನು ಮಾಡಿ ಅಕ್ರಮ ಎಸಗುತ್ತಿರುವುದು ನಡೆಯುತ್ತಿದೆ. ಪ್ರತಿ ವಸತಿ ನಿಲಯಗಳಲ್ಲಿ ಇರುವ ಎಲ್ಲ ಮಕ್ಕಳಿಗಿಂತಲೂ ಸರ್ಕಾರ ನಿಗದಿಪಡಿಸಿದ ಸಂಖ್ಯೆಯ ಮಕ್ಕಳಿಗೆ ನಿತ್ಯ ಊಟ ಒದಗಿಸುತ್ತಿರುವುದಾಗಿ ದಾಖಲೆಗಳಲ್ಲಿ ಹೇಳಲಾಗುತ್ತಿದೆ ಎಂದ ಆರೋಪಿಸಿದರು. ಕೆಲವೇ ಮಕ್ಕಳಿಗೆ ಮಾತ್ರ ಊಟ ಒದಗಿಸಿ ಬಯೋಮೆಟ್ರಿಕ್ ಮಾಡುವಾಗಿ ಹಾಸ್ಟೆಲ್ ನ ಸರ್ಕಾರ ನಿಗದಿ ಪಡಿಸಿದಷ್ಟು ಮಕ್ಕಳಿಗೆ ಊಟ ಕೊಟ್ಟಂತೆ ಬಯೋ ಮೆಟ್ರಿಕ್ ವ್ಯವಸ್ಥೆಯನ್ನೂ ದುರ್ಬಳಕೆ ಮಾಡಿಕೊಳ್ಳುತ್ತಿದ್ದಾರೆ.ವಾಸ್ತವದಲ್ಲಿ ಇಲ್ಲದ ಮಕ್ಕಳಿಗೂ ಊಟ ಕೊಟ್ಟಂತೆ ಬಯೋ ಮೆಟ್ರಿಕ್ ಹಾಜರಾತಿ ಸೃಷ್ಟಿಸಿ ಸರ್ಕಾರಕ್ಕೆ ವಂಚಿಸುವ ಕಾರ್ಯ ಎಗ್ಗಿಲ್ಲದೇ ನಡೆಯುತ್ತಿದೆ ಎಂದು ಅಸಮಾಧಾನವ್ಯಕ್ತಪಡಿಸಿದ್ದಾರೆ. ವರ್ಷವಿಡಿ ನಿತ್ಯ 100 ಮಕ್ಕಳು ಊಟ ಮಾಡಿದ್ದಾಗಿ ದಾಖಲೆಗಳು ಹೇಳುತ್ತಿವೆ ಆದರೆ ಪ್ರತಿನಿತ್ಯವೂ ಇಷ್ಟೇ ಸಂಖ್ಯೆಯಲ್ಲಿ ಮಕ್ಕಳು ಊಟ ಮಾಡಿದ್ದಾರೆ ಎಂಬುದೇ ಅವೈಜ್ಞಾನಿಕ ಅಲ್ಲದೇ ಎಷ್ಟೋ ಮಕ್ಕಳು ಊರಿಗೆ ಹೋಗಿರಲಿ ಇಲ್ಲವೇ ಬೇರೆ ಕಡೆ ಹೋಗಿದ್ದರೂ ಅವರೆಲ್ಲರನ್ನು ಸೇರಿಸಿ ಒಟ್ಟು 100 ಮಕ್ಕಳು ಊಟ ಮಾಡಿದಂತೆ ದಾಖಲೆಗಳನ್ನು ಸೃಷ್ಟಿಸಲಾಗುತ್ತಿದೆ. ಈ ಅವ್ಯವಹಾರದಲ್ಲಿ ವಾರ್ಡನ್ ಜೊತೆಗೆ ಮೇಲಾಧಿಕಾರಿಗಳು ಇಲಾಖೆಯ ಸಿಬ್ಬಂದಿಗಳು ಶಾಮೀಲಾಗಿ ಸರ್ಕಾರಕ್ಕೆ ವಂಚಿಸುತ್ತಿದ್ದಾರೆ. ಆದ್ದರಿಂದ ಸದ್ರಿ ವಂಚಕ ಅಧಿಕಾರಿ ಸಿಬ್ಬಂದಿಗಳ ವಿರುದ್ಧ ಕಠಿಣ ಕ್ರಮ ಕೈಗೊಂಡು ತಪ್ಪಿತಸ್ಥರನ್ನು ವಜಾ ಮಾಡಬೇಕೆಂದು ಒತ್ತಯಿಸುತ್ತೇವೆ. ಇಲ್ಲವಾದಲ್ಲಿ ಲೋಕಾಯುಕ್ತರ ಮೊರೆ ಹೋಗಬೇಕಾಗುತ್ತದೆ ಎಂದು ಮಲ್ಲು ಮಾಳಿಕೇರಿ, ಅಂಬ್ರೇಶ ಹತ್ತಿಮನಿ, ಸಂತೋಷ ನಿರ್ಮಲಕರ್, ಭೀಮಾಶಂಕರ ಹತ್ತಿಕುಣಿ, ನಿಂಗಪ್ಪ ಗುಡಗುಡಿ, ವಿಶ್ವರಾಜ ಹೊನಗೇರಾ, ರವಿ ಜಮ್ಮಾರ್, ಕಾಶೀನಾಥ ನಾನೇಕ್, ಅಶೋಕ ನಾಯಕ, ಶರಣು ಇದ್ದರು.

## ಬಸವರಾಜ ರಾಯರೆಡ್ಡಿ ಅವರಿಗೆ ಉಪಮುಖ್ಯಮಂತ್ರಿ ಸ್ಥಾನ ನೀಡಿ: ಪೂಜ್ಯ ಮಹಾದೇವ ಸ್ವಾಮೀಜಿ



ಮಲ್ಲಮ್ಮ ನುಡಿವಾರ್ತೆ

ಕುಕನೂರ : ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿ ಹಾಗೂ ಪ್ರಾದೇಶಿಕ ನ್ಯಾಯದ ದೃಷ್ಟಿಯಿಂದ ಯಲಬುರ್ಗಾ ಕ್ಷೇತ್ರದ ಹಿರಿಯ ಶಾಸಕ, ನಮ್ಮ ಭಾಗದ ಜನನಾಯಕ ಶ್ರೀ ಬಸವರಾಜ ರಾಯರೆಡ್ಡಿ ಅವರಿಗೆ ಕರ್ನಾಟಕ ಸರ್ಕಾರದಲ್ಲಿ ಉಪಮುಖ್ಯಮಂತ್ರಿ ಸ್ಥಾನವನ್ನು ನೀಡಬೇಕು ಎಂದು ಪೂಜ್ಯ ಮಹಾದೇವ ಸ್ವಾಮೀಜಿ ಅವರು ಸರ್ಕಾರವನ್ನು ಆಗ್ರಹಿಸಿದ್ದಾರೆ.

ರಾಯರೆಡ್ಡಿ ಅವರು ಏಳು ಬಾರಿ ಶಾಸಕರಾಗಿ, ಸಚಿವರಾಗಿ, ಸರ್ಕಾರದ ಮುಖ್ಯ ಸಚೇತಕರಾಗಿ ರಾಜ್ಯಕ್ಕೆ ಅನುಪಮ ಸೇವೆ ಸಲ್ಲಿಸಿದ್ದಾರೆ. ಕಲ್ಯಾಣ ಕರ್ನಾಟಕದ ನೀರಾವರಿ ಯೋಜನೆಗಳು, ಶಿಕ್ಷಣ, ಆರೋಗ್ಯ ಕ್ಷೇತ್ರದ ಅಭಿವೃದ್ಧಿಗೆ ಅವರ ಕೊಡುಗೆ ಅಪಾರ. ಉತ್ತರ ಕರ್ನಾಟಕದ ಧ್ವನಿಯಾಗಿ ವಿಧಾನಸಭೆಯಲ್ಲಿ ನಿರಂತರವಾಗಿ ಕೆಲಸ ಮಾಡಿದ್ದಾರೆ.

ಉತ್ತರಕರ್ನಾಟಕ, ವಿಶೇಷವಾಗಿ ಗದಗ–ಕೊಪ್ಪಳ ಭಾಗಕ್ಕೆ ಇದುವರೆಗೂ ಉಪಮುಖ್ಯಮಂತ್ರಿ ಸ್ಥಾನ ಸಿಕ್ಕಿಲ್ಲ. ಪ್ರಾದೇಶಿಕ ಅಸಮಾನತೆ ಹೋಗಲಾಡಿಸಲು, ಕಲ್ಯಾಣ ಕರ್ನಾಟಕಕ್ಕೆ ವಿಶೇಷ ಆದ್ಯತೆ ನೀಡಲು ಈ ಭಾಗದ ಹಿರಿಯ ನಾಯಕರಿಗೆ ಅವಕಾಶ ಕಲ್ಪಿಸುವುದು ಅತ್ಯಗತ್ಯ. ಶ್ರೀ ರಾಯರೆಡ್ಡಿ ಅವರ ಅನುಭವ, ಜನಪರ ಕಾಳಜಿ ಮತ್ತು ಆಡಳಿತಾತ್ಮಕ ಚಾಕಚಕ್ಯತೆ ರಾಜ್ಯದ ಸರ್ವಾಂಗೀಣ ಅಭಿವೃದ್ಧಿಗೆ ಪೂರಕವಾಗಲಿದೆ.

ಲಿಂಗಾಯತ ಸಮಾಜದ ಪ್ರಮುಖ ನಾಯಕರಾಗಿ, ಎಲ್ಲಾ ವರ್ಗದವರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಹೋಗುವ ಗುಣ ಅವರಲ್ಲಿದೆ. ತುಂಗಭದ್ರಾ, ಮಹದಾಯಿ ಯೋಜನೆ ಸೇರಿದಂತೆ ನಮ್ಮ ಭಾಗದ ಬಹುದಿನಗಳ ಬೇಡಿಕೆಗಳಿಗೆ ನ್ಯಾಯ ದೊರಕಿಸಲು ಅವರಿಗೆ ಅಧಿಕಾರದ ಉನ್ನತ ಸ್ಥಾನ ನೀಡುವುದು ಸೂಕ್ತ.

ಆದುದರಿಂದ ಮಾನ್ಯ ಮುಖ್ಯಮಂತ್ರಿಗಳು ಹಾಗೂ ಕಾಂಗ್ರೆಸ್ ಹೈಕಮಾಂಡ್ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ, ಕಲ್ಯಾಣ ಕರ್ನಾಟಕದ ಜನತೆಯ ಭಾವನೆಗೆ ಸ್ಪಂದಿಸಿ ಶ್ರೀ ಬಸವರಾಜ ರಾಯರೆಡ್ಡಿ ಅವರಿಗೆ ಉಪಮುಖ್ಯಮಂತ್ರಿ ಸ್ಥಾನವನ್ನು ಘೋಷಿಸಬೇಕು ಎಂದು ಅನ್ನದಾನೀಶ್ವರ ಮಠದ ಭಕ್ತರ ಪರವಾಗಿ ಒತ್ತಾಯಿಸುತ್ತೇವೆ ಎಂದು ಶ್ರೀಮಠದಲ್ಲಿ ಪತ್ರಕರ್ತರ ರೊಂದಿಗೆ ಮಾತನಾಡುತ್ತಾ ಹೇಳಿದರು.

## ರಾಘವೇಂದ್ರ ಹಿಟ್ನಾಳ್ ಅವರಿಗೆ ಸಚಿವ ಸ್ಥಾನ ನೀಡುವಂತ:ಮಲ್ಲಣ್ಣ ಐಕೂರ ಒತ್ತಾಯ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಕುರುಬ ಸಮಾಜದ ಕೊಪ್ಪಳದ ಯುವ ಶಾಸಕರಾದ ಶಾಸಕ ರಾಘವೇಂದ್ರ ಹಿಟ್ನಾಳ್ ರವರಿಗೆ ಮುಂಬರುವ ಸಚಿವ ಸಂಪುಟ ಪುನರ್ ರಚನೆಯಲ್ಲಿ ಸಚಿವ ಸ್ಥಾನ ನೀಡುವಂತೆ ಕುರುಬ ಸಮಾಜದ ಯಾದಗಿರಿ ಜಿಲ್ಲಾಧ್ಯಕ್ಷ ಮಲ್ಲಣ್ಣ ಐಕೂರ ಕಾಂಗ್ರೆಸ್ ಹೈಕಮಾಂಡಿಗೆ ಒತ್ತಾಯಿಸಿದ್ದಾರೆ. ಕಲ್ಯಾಣಿ ಕರ್ನಾಟಕ ಭಾಗದಲ್ಲಿ ಕುರುಬ ಸಮಾಜದ ಜನರು ಹೆಚ್ಚಿನ ಸಂಖ್ಯೆಯಲ್ಲಿದ್ದು ಕಲ್ಯಾಣ ಕರ್ನಾಟಕ ಭಾಗದ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳನ್ನು ಹೆಚ್ಚಿನ ಮತಗಳ ಅಂತರದಿಂದ ಗೆಲ್ಲಿಸಲು ನಮ್ಮ ಸಮಾಜವು ಅತ್ಯಂತ ಹೆಚ್ಚಿನ ಶ್ರಮವಹಿಸಿದೆ ಲೋಕಸಭಾಕ್ಷೇತ್ರದ ಅಭ್ಯರ್ಥಿಗಳ ಗೆಲುವಿಗೂ ಕೂಡಾ ಸಮಾಜ ಪ್ರಮುಖ ಪಾತ್ರವಹಿಸಿದೆ ಹಲವು ವರ್ಷಗಳಿಂದ ಕಲ್ಯಾಣ ಕರ್ನಾಟಕ ಭಾಗದ ನಮ್ಮ ಸಮುದಾಯವು ರಾಜಕೀಯ ಸ್ಥಾನಮಾನದಿಂದ ವಂಚಿತರಾಗಿದ್ದಾರೆ.ಕಾಂಗ್ರೆಸ್ ಪಕ್ಷ ನಮ್ಮ ಸಮಾಜವನ್ನು ಬರಿ ವೋಟ್ ಬ್ಯಾಂಕ್ ಆಗಿ ಬಳಸಿಕೊಳ್ಳುವುದು ಸರಿಯಲ್ಲ ಕಲ್ಯಾಣ ಕರ್ನಾಟಕ ಭಾಗದಲ್ಲಿ ರಾಘವೇಂದ್ರ ಹಿಟ್ನಾಳ್ ಅವರು ಕಾಂಗ್ರೆಸ್ ಪಕ್ಷದಿಂದ ಏಕೈಕ ಶಾಸಕರಾಗಿ ಆಯ್ಕೆಯಾಗಿದ್ದು ಕಾಂಗ್ರೆಸ್ ಪಕ್ಷದ ಏಳಿಗೆಗಾಗಿ ಹಗಲು ಇರುಳು ಎನ್ನದೆ ಶ್ರಮಿಸಿದ್ದಾರೆ.ಅವರು ಯಾವುದೇ ಹುದ್ದೆಗಳಿಗೆ ಆಸೆ ಪಡೆದೆ ಸಾಮಾನ್ಯ ಕಾರ್ಯಕರ್ತರಾಗಿ ಕಾರ್ಯನಿರ್ವಹಿಸಿದ್ದಾರೆ. ಸರಳ ಸಜ್ಜನಿಕೆಯ ಹಾಗೂ ಅಭಿವೃದ್ಧಿ ಹರಿಕಾರರಾಗಿದ್ದು ಇವರಿಗೆ ಈ ಬಾರಿಯ ಸಚಿವ ಸಂಪುಟ ಪುನರ್ ರಚನೆಯಲ್ಲಿ ಸಚಿವ ಸ್ಥಾನ ನೀಡಬೇಕು ಒಂದು ವೇಳೆ ನಿರ್ಲಕ್ಷವಹಿಸಿದ್ದಲ್ಲಿ ಮುಂದಿನ ದಿನಗಳಲ್ಲಿ ನಡಿಯುವ ಜಿಲ್ಲಾ ಪಂಚಾಯತ್ ತಾಲೂಕು ಪಂಚಾಯಿತಿ ಹಾಗೂ ಇನ್ನಿತರ ಚುನಾವಣೆಗಳಲ್ಲಿ ತಕ್ಕ ಪಾಠ ಕಲಿಸಬೇಕಾಗುತ್ತದೆ ಎಂದು ಕುರುಬ ಸಮಾಜದ ಯಾದಗಿರಿ ಜಿಲ್ಲಾಧ್ಯಕ್ಷ ಮಲ್ಲಣ್ಣ ಐಕೂರ ಎಚ್ಚರಿಸಿದ್ದಾರೆ

## ಜೂನ್ 03 ರಂದು ಶರಣು ಕಾರ್ಯಾಲಯ ಉದ್ಘಾಟನೆ



ಮಲ್ಲಮ್ಮ ನುಡಿ ವಾರ್ತೆ

ಕುಕನೂರ : ಶರಣು ಕಾರ್ಯಾಲಯದ ಮೂಲಕ ಸಾರ್ವಜನಿಕ ಸೇವೆಗೆ ಸದಾ ಸಿದ್ಧ' ಎಂದು ಮುಖಂಡ ಕಳಕಪ್ಪ ಕಂಬಳಿ ಹೇಳಿದರು.

ಪಟ್ಟಣದ ಪರಿವೀಕ್ಷಣ ಮಂದಿರದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಯಲಬುರ್ಗಾ ವಿಧಾನಸಭಾ ಕ್ಷೇತ್ರದ 144 ಹಳ್ಳಿಗಳಲ್ಲಿ ಸಭೆ ನಡೆಸಿ 'ಶರಣು ಕಾರ್ಯಾಲಯ'ದ ಉದ್ಘಾಟನೆ ಹಾಗೂ ಸತ್ಯನಾರಾಯಣ ಪೂಜಾ ಕಾರ್ಯಕ್ರಮದಲ್ಲಿ ತಾಲೂಕಿನ ಗುರು ಹಿರಿಯರು,ಮುಖಂಡರು ಯುವಕರು ಅಭಿಮಾನಿಗಳು ಪಾಲ್ಗೊಂಡು ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಕರೆ ನೀಡಿದರು

"ಪ್ರತಿ ಹಳ್ಳಿಗಳಿಂದ ಜನರು ತಮ್ಮ ಸಮಸ್ಯೆ ಹೇಳಿಕೊಂಡು ನನ್ನ ಬಳಿ ಬಂದಾಗ ಅವರ ಸಮಸ್ಯೆಗಳಿಗೆ ಸ್ಪಂದಿಸುವ ನಿಟ್ಟಿನಲ್ಲಿ ಈ ಕಾರ್ಯಾಲಯವನ್ನು ಪಕ್ಷಾತೀತ ಹಾಗೂ ಜಾತ್ಯತೀತವಾಗಿ ಪ್ರಾರಂಭಿಸುತ್ತಿದ್ದೇನೆ. ಇದು ಪ್ರತಿಯೊಬ್ಬರ ಸಮಸ್ಯೆಯನ್ನು ಆಲಿಸಿ ಪರಿಹರಿಸುವ ಕಾರ್ಯಾಲಯವಾಗಿದ್ದು, ಯಾವುದೇ ಪಕ್ಷ ಅಥವಾ ಜಾತಿಗೆ ಸೀಮಿತವಾಗಿಲ್ಲ" ಎಂದರು.

ಉದ್ಘಾಟನಾ ಕಾರ್ಯಕ್ರಮಕ್ಕೆ ಆಗಮಿಸುವ ಜನರಿಗೆ ನೀರು ಹಾಗೂ ಊಟದ ವ್ಯವಸ್ಥೆ ಮಾಡಲಾಗಿದ್ದು, ಅದರಲ್ಲೂ ಮಹಿಳೆಯರಿಗೆ ಪ್ರತ್ಯೇಕ ಊಟದ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ತಿಳಿಸಿದರು.

ಈ ವೇಳೆಯಲ್ಲಿ ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ಈರಪ್ಪ ಕುಡುಗುಂಟೆ ಮಾತನಾಡಿ ಕಳಕಪ್ಪ ಕಂಬಳಿ ಹಲವಾರು ವರ್ಷಗಳಿಂದ ನೊಂದು ಬಂದವರಿಗೆ ಸಹಾಯ ಮಾಡುವ ಮನೋಭಾವನೆಯನ್ನು ಬೆಳೆಸಿಕೊಂಡು ಬಂದಿದ್ದಾರೆ ಬಡವರಿಗೆ, ಕಷ್ಟದಲ್ಲಿದ್ದವರಿಗೆ ರೈತರಿಗೆ ಹಲವಾರು ರೀತಿಯಲ್ಲಿ ಸಹಾಯವನ್ನು ಮಾಡಿದ್ದಾರೆ ಕಷ್ಟ ಅಂತ ಬಂದ ಜನರಿಗೆ ಸಹಾಯ ಮಾಡುವುದಕ್ಕಾಗಿ ಶರಣು ಕಾರ್ಯಾಲಯ ಉದ್ಘಾಟನೆಯನ್ನು ಜೂನ್ 3 ರಂದು ಮಾಡಲಿದ್ದು ಕಾರ್ಯಕ್ರಮದಲ್ಲಿ ಪ್ರತಿಯೊಬ್ಬರು ಭಾಗವಹಿಸಿ ಉದ್ಘಾಟನೆ ಯಶಸ್ವಿಗೊಳಿಸಬೇಕೆಂದು ಹೇಳಿದರು

ಈ ಪತ್ರಿಕಾಗೋಷ್ಠಿಯಲ್ಲಿ ಪಕೀರಪ್ಪ ತಳವಾರ್ ಇಮಾಮ್ ಸಾಬ್ ಮಂಡಲಗೇರಿ ರಾಮಣ್ಣ ಕೌದಿ, ಬಾಳಪ್ಪ ಬಾರಕೇರ, ಬುಡ್ಡಪ್ಪ ಬಾರಕೇರ, ಸುರೇಶ್ ಬೆಣಕಲ್, ನೀಲನಗೌಡ ಪಾಟೀಲ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಪಿಜಿಯೊಂದರಲ್ಲಿ 8 ಮೊಬೈಲ್‌ಗಳ ಕಳ್ಳತನ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಜೂ.1– ಪಿಜಿಯೊಂದಕ್ಕೆನುಗ್ಗಿದ ಚೋರರು ಕೊಠಡಿಗಳಲ್ಲಿ ಚಾರ್ಜಿಂಗ್‌ಗೆ ಹಾಕಿದ್ದ ಎಂಟು ದುಬಾರಿ ಬೆಲೆಯ ಮೊಬೈಲ್‌ಗಳನ್ನು ಕಳ್ಳತನ ಮಾಡಿಕೊಂಡು ಪರಾರಿಯಾಗಿರುವ ಘಟನೆ ಬಂಡೆಪಾಳ್ಯ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ. ಹೊಸಪಾಳ್ಯದ ಕೂಡ್ಲು ಮುಖ್ಯರಸ್ತೆಯಲ್ಲಿ ಬಾಯ್ಸ್ ಪಿಜಿ ಇದ್ದು, ಇಲ್ಲಿ ವಿದ್ಯಾರ್ಥಿಗಳು, ಉದ್ಯೋಗಿಗಳು ನೆಲೆಸಿದ್ದಾರೆ. ಕ್ಯಾಬ್ ಚಾಲಕ ದರ್ಶನ್ ಎಂಬುವವರು ಕೆಲಸ ಮುಗಿಸಿಕೊಂಡು ಪಿಜಿಗೆ ಬಂದು ತಮ ಕೊಠಡಿಯಲ್ಲಿ ಎರಡು ಮೊಬೈಲ್‌ಗಳನ್ನು ಚಾರ್ಜಿಂಗ್‌ಗೆ ಹಾಕಿ ಬಾಗಿಲು ಹಾಕಿಕೊಳ್ಳದೆ ನಿದ್ರೆಗೆ ಜಾರಿದ್ದಾರೆ. ಮಾರನೇ ದಿನ ಮುಂಜಾನೆ 6 ಗಂಟೆಗೆ ದರ್ಶನ್ ಎದ್ದು ಮೊಬೈಲ್ ಹುಡುಕಾಡಿದ್ದಾರೆ. ಆದರೆ ಮೊಬೈಲ್‌ಗಳು ಸಿಗಲಿಲ್ಲ. ಪಕ್ಕದ ಕೊಠಡಿಗಳಿಗೆ ಹೋಗಿ ವಿಚಾರಿಸಿದಾಗ ಅಲ್ಲಿಯೂ ಸಹ ಮೊಬೈಲ್‌ಗಳು ನಾಪತ್ತೆಯಾಗಿರುವುದು ಕಂಡು ಬಂದಿದೆ. ಕಳ್ಳರು ಒಟ್ಟು ಎಂಟು ಮೊಬೈಲ್‌ಗಳನ್ನು ದೋಚಿಕೊಂಡು ಪರಾರಿಯಾಗಿದ್ದಾರೆ.

ಇವರುಗಳು ರೂಮ್‌ನ ಬಾಗಿಲು ಹಾಕಿಕೊಳ್ಳದೇ ಮಲಗಿದ್ದರಿಂದ ಚಾಲಾಕಿ ಕಳ್ಳ ಒಳಗೆ ನುಗ್ಗಿ ಕೈಗೆ ಸಿಕ್ಕಿದ ಮೊಬೈಲ್‌ಗಳನ್ನು ದೋಚಿ ಪರಾರಿಯಾಗಿರುವುದು ಸಿಸಿ ಟಿವಿ ದೃಶ್ಯಾವಳಿಗಳಲ್ಲಿ ಸೆರೆಯಾಗಿದೆ.

## ಸುಮಿತ್ ಪಾಟೀಲ್ ಡಿಎಫ್‌ಓ ಅಧಿಕಾರ ಸ್ವೀಕಾರ



ಮಲ್ಲಮ್ಮ ನುಡಿ ವಾರ್ತೆ

ಬೀದರ್ ಪ್ರಾದೇಶಿಕ ಅರಣ್ಯ ಇಲಾಖೆಯ ಉಪ ಅರಣ್ಯ ಸಂರಕ್ಷಣಾಧಿಕಾರಿಯಾಗಿ ಸುಮಿತ್ ಪಾಟೀಲ್ ಸೋಮವಾರ ಅಧಿಕಾರ ವಹಿಸಿಕೊಂಡಿದ್ದಾರೆ. ಈ ಹಿಂದೆ ಕಲಬುರ್ಗಿ ಪ್ರಾದೇಶಿಕ ಅರಣ್ಯ ವಿಭಾಗ ಉಪಅರಣ್ಯ ಸಂರಕ್ಷಣಾಧಿಕಾರಿಯಾಗಿ ಮೂರು ವರ್ಷ ಅತ್ಯುತ್ತಮವಾಗಿ ಸೇವೆ ಸಲ್ಲಿಸಿದ್ದಾರೆ. ಅಲ್ಲಿಂದ ಇಲ್ಲಿಗೆ ಇವರನ್ನು ವರ್ಗಾಯಿಸಲಾಗಿದೆ. ಪರಿಸರವಾದಿ ಶೈಲೇಂದ್ರ ಕಾವಡಿ ಇವರನ್ನು ಸನ್ಮಾನಿಸಿ ಸ್ವಾಗತಿಸಿಕೊಂಡರು.

## ರೈತ ಭವನದಲ್ಲಿ ಅನ್ನದಾತರಿಗೆ ವಿಶೇಷ ಊಟ ವ್ಯವಸ್ಥೆ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,: ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಆಶ್ರಯದಲ್ಲಿ ನಡೆಯುತ್ತಿರುವ "ರೈತಣ್ಣನ ಊಟ ಯೋಜನೆ"ಯಡಿ ಇಂದು ರೈತ ಭವನದಲ್ಲಿ ಅನ್ನದಾತರಿಗೆ ವಿಶೇಷ ಸಿಹಿ ಖಾದ್ಯ ಹಾಗೂ ಸಂಪೂರ್ಣ ಊಟದ ವ್ಯವಸ್ಥೆ ಮಾಡಲಾಯಿತು.

ಜಿಲ್ಲಾ ಕೃಷಿ ಪರಿಕರಗಳ ಮಾರಾಟಗಾರರ ಸಂಘದ ಅಧ್ಯಕ್ಷರು, ಬಳ್ಳಾರಿ ಗ್ರಾಮೀಣ ವಿಧಾನಸಭಾಕ್ಷೇತ್ರದ ಬಗುರ್ ಹುಕುಂ ಸಮಿತಿ ಅಧ್ಯಕ್ಷರಾಗಿರುವ ಹೆಚ್. ತಿಮ್ಮನಗೌಡ ಅವರು ತಮ್ಮ ಹುಟ್ಟುಹಬ್ಬದ ಪ್ರಯುಕ್ತ ಇಂದಿನ ಊಟದ ಸಂಪೂರ್ಣ ವೆಚ್ಚವನ್ನು ವಹಿಸಿಕೊಂಡು ಸಮಾಜಮುಖಿ ಕಾರ್ಯಕ್ಕೆ ಕೈಜೋಡಿಸಿದರು.

ಈ ಸಂದರ್ಭದಲ್ಲಿ ರೈತ ಭವನಕ್ಕೆ ಆಗಮಿಸಿದ ರೈತರು ಹಾಗೂ ಸಾರ್ವಜನಿಕರು ಹೆಚ್. ತಿಮ್ಮನಗೌಡ ಅವರ ಈ ಸೇವಾ ಮನೋಭಾವವನ್ನು ಶ್ಲಾಘಿಸಿದರು. ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷರಾದ ಅವ್ವಾರು ಮಂಜುನಾಥ್, ಹಾಗೂ ಗೌರವ ಕಾರ್ಯದರ್ಶಿಗಳಾದ ಕೆ ಸಿ ಸುರೇಶ್ ಬಾಬು, ಪದಾಧಿಕಾರಿಗಳು ಹಾಗೂ ಸದಸ್ಯರು ತಿಮ್ಮನಗೌಡ ಅವರಿಗೆ ಹಾರ್ದಿಕ ಹುಟ್ಟುಹಬ್ಬದ ಶುಭಾಶಯಗಳನ್ನು ಸಲ್ಲಿಸಿ, ಅವರ ಸಾಮಾಜಿ

ರೈತಣ್ಣನ ಊಟ ಯೋಜನೆಯ ಮೂಲಕ ಪ್ರತಿದಿನ ನೂರಾರು ರೈತರಿಗೆ ಉಚಿತ ಹಾಗೂ ಗುಣಮಟ್ಟದ ಆಹಾರವನ್ನು ನೀಡಲಾಗುತ್ತಿದ್ದು, ಈ ಯೋಜನೆಗೆ ವಿವಿಧ ದಾನಿಗಳು ಮತ್ತು ಸಮಾಜಸೇವಕರು ನಿರಂತರವಾಗಿ ಸಹಕಾರ ನೀಡುತ್ತಿದ್ದಾರೆ.

# ಎಲ್ಲ ಜನಾಂಗದವರೂ ತಮ್ಮ ಕುಟುಂಬದ ಸಂಪೂರ್ಣ ಮಾಹಿತಿಯನ್ನು ನೀಡಬೇಕು

ಮಲ್ಲಮ್ಮ ನುಡಿ ವಾರ್ತೆ

ಹುಣಸೂರು ಮಹನೀಯರು ಒಂದು ಜಾತಿಗೆ ಸೀಮಿತರಲ್ಲ 2027ಕ್ಕೆ ಪೂರ್ಣಪ್ರಮಾಣದ ಜನಗಣತಿ ಕಾರ್ಯ ನಡೆಯಲಿದ್ದು, ಎಲ್ಲ ಜನಾಂಗದವರೂ ತಮ್ಮ ಕುಟುಂಬದ ಸಂಪೂರ್ಣ ಮಾಹಿತಿಯನ್ನು ನೀಡಬೇಕು .ಮಾಜಿ ಶಾಸಕರಾದ ಎಚ್.ಪಿ.ಮಂಜುನಾಥ್ ಎಂದು ತಿಳಿಸಿದ್ದಾರೆ

ತಾಲ್ಲೂಕು ಹನಗೋಡು ಹೋಬಳಿಯ ಹಿಂಡಗುಡ್ಲು ಗ್ರಾಮದಲ್ಲಿ ಜೈ ಬೀಮ್ ಪುತ್ಥಳಿ ಪ್ರತಿಷ್ಠಾನ ಸಮಿತಿಯ ವತಿಯಿಂದ ಡಿಎಸ್ ಎಸ್ ಜಿಲ್ಲಾ ಸಂಚಾಲಕ ಕಿರಂಗೂರು ಸ್ವಾಮಿ ನೇತೃತ್ವದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ರವರ 135ನೇ ಜನ್ಮದಿನಾಚರಣೆ ಪ್ರಯುಕ್ತ ಡಾ.ಬಿ.ಆರ್.ಅಂಬೇಡ್ಕರ್ ಪುತ್ಥಳಿ ಲೋಕಾರ್ಪಣೆ ಕಾರ್ಯಕ್ರಮ ನಡೆದಿದ್ದು,ಈ ಕಾರ್ಯಕ್ರಮದಲ್ಲಿ ಮಾತನಾಡಿ 1931ರ ನಂತರ ಕೇಂದ್ರ ಸರ್ಕಾರ ಪೂರ್ಣ ಪ್ರಮಾಣದ ಜನಗಣತಿ ಮಾಡಲು ಮುಂದಾಗಿದ್ದು, ಎಲ್ಲರೂ ಸಂಪೂರ್ಣ ಮಾಹಿತಿ ನೀಡಬೇಕು, ಹಿಂದಿನ ಗಣತಿ ಪ್ರಕಾರ ಎಸ್.ಸಿ ಮತ್ತು ಎಸ್.ಟಿ ಸಮುದಾಯ ಶೇ.30ರಷ್ಟಿತ್ತು. ಈ ಜನಗಣತಿ ಬಳಿಕ ಶೇ.40ರಿಂದ 45ರಷ್ಟಕ್ಕೆ ಏರುವ ನಿರೀಕ್ಷೆ ಇದೆ. ಇಷ್ಟು ದೊಡ್ಡ ಸಮುದಾಯಕ್ಕೆ ಕೇವಲ ಶೇ.15ರಷ್ಟು ಮೀಸಲಾತಿ ನೀಡಲಾಗಿದ್ದು, ಕೇಂದ್ರ ಸರ್ಕಾರ ಶೇ.21ಕ್ಕೆ ಏರಿಕೆ ಮಾಡುತ್ತೇವೆ ಎನ್ನುತ್ತಿದೆ. ಆದರೆ, ಈ ಪ್ರಮಾಣ ಶೇ.35 ಆಗಬೇಕು. ಇದಕ್ಕಾಗಿ ನಾವು ಹೋರಾಟ ಮಾಡಬೇಕು.



ದಲಿತ ಸಮುದಾಯ ಒಟ್ಟಿಗೆ ಸೇರಿ ಇಲ್ಲಿ ಅಂಬೇಡ್ಕರ್ ಅವರ ಪ್ರತಿಮೆ ನಿರ್ಮಿಸಿರುವುದು ಉತ್ತಮ ಬೆಳವಣಿಗೆ. ನಿಜವಾದ ಬಸವ ಅನುಯಾಯಿಗಳು ಇಲ್ಲಿದ್ದಾರೆ.

ಪ್ರಸ್ತುತ ಅಂಬೇಡ್ಕರ್, ಬುದ್ಧ, ಬಸವ, ಕನಕದಾಸರನ್ನು ಜಾತಿಗಳಿಗೆ ಸೀಮಿತ ಮಾಡಲಾಗುತ್ತಿದೆ. ಇವರೆಲ್ಲ ಜಾತೀಯತೆಯ ವಿರುದ್ಧ ಹೋರಾಡಿದವರು. ಅವರನ್ನು ನಾವು ಅರ್ಥ ಮಾಡಿಕೊಳ್ಳುವುದರಲ್ಲಿ ವಿಫಲವಾದ ಪರಿಣಾಮ ದೇಶದಲ್ಲಿ ಇನ್ನೂ ಜಾತಿ ವ್ಯವಸ್ಥೆ ಜೀವಂತವಾಗಿದೆ.

ಮೊದಲು ನಾವು ಸಮಾಜ ಸುಧಾರಕರನ್ನು ಓದಬೇಕು. ಮಹಿಳೆಯರಿಗೆ ಓದು, ಆಸ್ತಿ, ಗೌರವವನ್ನು ತಂದುಕೊಟ್ಟ ಅಂಬೇಡ್ಕರ್‌ರವರಿಗೆ ನಿತ್ಯ ಕೈಮುಗಿಯಬೇಕು ಎಂದು ಮಾತನಾಡಿರುತ್ತಾರೆ.

ಅಂತರಸಂತೆ ಸಾರನಾಥ ಬೌದ್ಧ ವಿಹಾರದ ಗೌತಮಿ ಬಂತೇಜಿ ಮಾತನಾಡಿ:–ಗ್ರಾಮದಲ್ಲಿ ಅಂಬೇಡ್ಕರ್ ಅವರ ಪ್ರತಿಮೆ ಸ್ಥಾಪನೆಯಾಗಿದೆ. ಈಗ ಅಂಬೇಡ್ಕರ್ ಅವರು ನಮ್ಮ ಗ್ರಾಮದಲ್ಲಿ ಎಷ್ಟು ಪ್ರಮಾಣದಲ್ಲಿ ಜೀವಂತ ಇರುತ್ತಾರೆ. ಎಷ್ಟು ಪ್ರಮಾಣದಲ್ಲಿ ಜೀವಂತವಾಗಿಟ್ಟುಕೊಳ್ಳುತ್ತೀರಿ ಎಂಬುದರ ಬಗ್ಗೆ ಆಲೋಚಿಸಬೇಕು. ಅವರ ಚಿಂತನೆಗಳು, ಅವರ ತತ್ವಗಳು ಕೇವಲ ಮೂರ್ತಿಗಳಲ್ಲಿ, ಫ್ಲೆಕ್ಸ್‌ಗಳಲ್ಲಿ ಆರಾಧಿಸುವ, ಆಚರಿಸುವ ವಸ್ತುವಲ್ಲ. ಅಂಬೇಡ್ಕರ್ ಎಂದರೆ ಅನುಸರಣೆ. ಅವರನ್ನು ನಾವು ಅನುಸರಿಸಬೇಕು ಎಂದು ತಿಳಿಸಿದರು

ಡಿಎಸ್ ಎಸ್ ಮುಖಂಡ ಹರಿಹರ ಆನಂದಸ್ವಾಮಿ ಮಾತನಾಡಿ:–ನಮ್ಮ ದೇಶದ ಚರಿತ್ರೆ ಇರುವ ಪಠ್ಯಗಳು ಇಲ್ಲದೇ ಇರುವುದರಿಂದ ನಮ್ಮ ಮಕ್ಕಳು ದಾರಿ ತಪ್ಪುತ್ತಿದ್ದಾರೆ. ರಾಜ್ಯ ಸರ್ಕಾರ ಹಾಗೂ ಕೇಂದ್ರ ಸರ್ಕಾರ ನಮ್ಮ ಮಕ್ಕಳಿಗೆ ಮೌಲ್ಯಯುತ ಶಿಕ್ಷಣದಿಂದ ವಂಚಿಸುತ್ತಿದ್ದಾರೆ. ಒಂದನೇ ತರಗತಿಯಿಂದ ಪಿ ಎಚ್ ಡಿ ತನಕ ಅಂಬೇಡ್ಕರ್ ಅವರ ಓದು, ಬರಹ ಮತ್ತು ಅವರ ಜೀವನ ಚರಿತ್ರೆ ಮಕ್ಕಳಿಗೆ ಕೊಡಬೇಕಿತ್ತು. ಆದರೆ, ಶಿಕ್ಷಣದಲ್ಲಿ ನೀಡಿಲ್ಲ. ಹಾಗಾಗಿ ಪಠ್ಯಗಳಲ್ಲಿ ಅಂಬೇಡ್ಕರ್ ಅವರನ್ನು ಮರೆಮಾಚಲಾಗಿದೆ. ಈಗಾಗಿ ನಮಗೆ ಸಂವಿಧಾನದ ಅರಿವು ಕಡಿಮೆಯಾಗಿದೆ. ಆದ್ದ–ರಿಂದ ಪಠ್ಯದಲ್ಲಿ ಅಂಬೇಡ್ಕರ್ ಅವರನ್ನು ಸೇರಿಸಬೇಕು ಎಂದು ತಿಳಿಸಿದರು

ಡಿಎಸ್ ಎಸ್ ಮುಖಂಡ ಚೋರನಹಳ್ಳಿ ಶಿವಣ್ಣ ಮಾತನಾಡಿ:– ಹಿಂಡಗುಡ್ಲು ಗ್ರಾಮದವರೆಲ್ಲಾ ಒಟ್ಟಾಗಿ ಸೇರಿ ಹಣ ಹಾಕಿ ಅಂಬೇಡ್ಕರ್ ಪ್ರತಿಮೆ ನಿರ್ಮಾಣ ಮಾಡಿರುವುದು ಸ್ವಾಭಿಮಾನದ ಬದುಕನ್ನು ಕಟ್ಟಿಕೊಳ್ಳುವ ಪ್ರಕ್ರಿಯೆಯಾಗಿದೆ. ಇದು ಸ್ವಾವಲಂಬನೆಯ ಪ್ರತೀಕ. ಹಾಗಾಗಿ ಈ ಗ್ರಾಮದಲ್ಲಿ ನೈಜ ಅಂಬೇಡ್ಕರ್ ಅನುಯಾಯಿಗಳು ಇದ್ದಾರೆ ಎಂದು ಹೇಳಲು ಹೆಮ್ಮೆ ಅನಿಸುತ್ತದೆ ಎಂದು

ಕಾರ್ಯಕ್ರಮದಲ್ಲಿ ದೇವರಾಜ್ ಒಡೆಯರ್ ಬೋರನಹಳ್ಳಿ ಶಿವಣ್ಣ, ನಿಂಗರಾಜ್ ಮಲ್ಲಾಡಿ, ನಾಗರಾಜ್ ಮಲ್ಲಾಡಿ,ಗೋವಿಂದರಾಜು,ಬಸವಯ್ಯ,ರಮೇಶ್, ಕಿರಂಗೂರು ಸ್ವಾಮಿ ನಾಗರಾಜು,ಬೀರ 'ಪ್ಪ,ರೇವಣ್ಣ,ಶಿವಕುಮಾರ್, ಕುಮಾರ್ ಭಾಗವಹಿಸಿರುತ್ತಾರೆ.

## ನಿಂಗರಾಜ್ ಗೌಡ್ರು ಜನ್ಮದಿನದ ಅಂಗವಾಗಿ ಸಾರ್ವಜನಿಕ ಆಸ್ಪತ್ರೆಗೆ ರೋಗಿಗಳಿಗೆ ಬ್ರೆಡ್–ಹಾಲು ವಿತರಣೆ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸೂಗೂರು, ಮೇ 31: ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆಯ ರಾಜ್ಯಾಧ್ಯಕ್ಷರಾದ ನಿಂಗರಾಜ್ ಗೌಡ್ರು ಅವರ ಜನ್ಮದಿನದ ಅಂಗವಾಗಿ ತಾಲ್ಲೂಕು ಅಧ್ಯಕ್ಷ ಜಿಲಾನಿ ಪಾಷಾ ಅವರ ನೇತೃತ್ವದಲ್ಲಿ ತಾಲೂಕು ಸಾರ್ವಜನಿಕ ಆಸ್ಪತ್ರೆಯಲ್ಲಿ ದಾಖಲಾಗಿದ್ದ ರೋಗಿಗಳಿಗೆ ಬ್ರೆಡ್ ಹಾಗೂ ಹಾಲು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲಾನಿ ಪಾಷಾ, ಸಮಾಜ ಸೇವೆಯ ಮೂಲಕ ಜನ್ಮದಿನ ಆಚರಿಸುವುದು ಮಾನವೀಯ ಮೌಲ್ಯಗಳನ್ನು ಬೆಳೆಸುವ ಕಾರ್ಯವಾಗಿದೆ. ರಾಜ್ಯಾಧ್ಯಕ್ಷ ನಿಂಗರಾಜ್ ಗೌಡ್ರು ಅವರ ಮಾರ್ಗದರ್ಶನದಲ್ಲಿ ಸಂಘಟನೆ ಸದಾ ಸಮಾಜಮುಖಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದ್ದು, ಬಡವರು ಹಾಗೂ ಅಗತ್ಯವಿರುವವರಿಗೆ ನೆರವಾಗುವ ಕೆಲಸವನ್ನು ನಿರಂತರವಾಗಿ ಮಾಡುತ್ತಿದೆ ಎಂದು ತಿಳಿಸಿದರು.

ಸಾರ್ವಜನಿಕ ಆಸ್ಪತ್ರೆಯಲ್ಲಿನ ರೋಗಿಗಳು ಹಾಗೂ ಅವರ ಕುಟುಂಬಸ್ಥರಿಗೆ ಬ್ರೆಡ್ ಮತ್ತು ಹಾಲು ವಿತರಿಸುವ ಮೂಲಕ ಸಂಘಟನೆಯ ಪದಾಧಿಕಾರಿಗಳು ಮಾನವೀಯತೆ ಮೆರೆದರು. ಈ ಕಾರ್ಯಕ್ರಮವನ್ನು ಆಸ್ಪತ್ರೆಯ ರೋಗಿಗಳು ಹಾಗೂ ಸಾರ್ವಜನಿಕರು ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಶೇಕ್ ಅಜಮೀರ್, ರವಿಕುಮಾರ್ ಬರಗುಡಿ, ಅಜೀಜ್ ಪಾಷಾ, ಮೋಸಿನ್ ಖಾನ್, ಅಲ್ಲಾವುದ್ದೀನ್ ಬಾಬಾ, ಬಸವರಾಜ್ ಗೌಡ, ಜಮೀರ್ ಖಾನ್, ಮಲ್ಲನಗೌಡ, ಸಲ್ಮಾನ್ ಖಾನ್, ಅಮರಪ್ಪ ಗೊರೆಬಾಳ, ಜಿ. ಭಗೀರಥ, ಅಮರೇಶ್ ಎಸ್.ಆರ್.ಎಸ್., ವೀರೇಶ್ ಐದನಾಳ, ಮಹಮದ್ ಖಾಸಿಂ ಮರಘಟ್ನಾಳ, ಶಬ್ಬೀರ್ ಪುಲವಾಲೆ, ಮಲ್ಲಿಕಾರ್ಜುನ್ ಪೋಳ್, ಶೇಕ್ ಮಹೇಬೂಬ್ ಸೇರಿದಂತೆ ಸಂಘಟನೆಯ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ಶರಣಬಸಪ್ಪಗೌಡ ದರ್ಶನಾಪುರವರಿಗೆ ಸಚಿವ ಸ್ಥಾನ ನೀಡಿ: ರಾಜು ಚಂದಾಪುರ ಒತ್ತಾಯ.

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ.



ರಾಜ್ಯ ಸರ್ಕಾರದಲ್ಲಿ ಸಣ್ಣ ಕೈಗಾರಿಕೆ ಸಚಿವರಾಗಿ ಕಾರ್ಯನಿರ್ವಹಿಸುತ್ತಿರುವ ಶರಣಬಸಪ್ಪಗೌಡ ದರ್ಶನಾಪುರ ಅವರು ಪಕ್ಷಸಂಘಟನೆ ಹಾಗೂ ಜನಪರ ಅಭಿವೃದ್ಧಿ ಕಾರ್ಯಗಳಲ್ಲಿ ಮಹತ್ವದ ಕೊಡುಗೆ ನೀಡಿದ್ದು, ಅವರನ್ನು ಸಂಪುಟ ದರ್ಜೆಯಲ್ಲಿ ಮುಂದುವರಿಸುವುದರ ಜೊತೆಗೆ ಉಪಮುಖ್ಯಮಂತ್ರಿ ಹುದ್ದೆ ನೀಡಬೇಕು ಎಂದು ರಾಜು ಚಂದಾಪುರ ಒತ್ತಾಯಿಸಿದ್ದಾರೆ, ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಯಾದಗಿರಿ ಜಿಲ್ಲೆಯಲ್ಲಿ ನೀರಾವರಿ ಸೇರಿದಂತೆ ಹತ್ತು ಹಲವು ಜನಪರ, ರೈತರ ಪರ ಯೋಜನೆಗಳನ್ನು ತರುವ ಮೂಲಕ ಅಭಿವೃದ್ಧಿ ಕಾಮಗಾರಿಗಳ ರೂವಾರಿಯಾಗಿರುವ ಶರಣಬಸಪ್ಪ ದರ್ಶನಾಪುರ ಅವರನ್ನು ಸಚಿವ ಸಂಪುಟದಿಂದ ಯಾವುದೇ ಕಾರಣಕ್ಕೂ ಕೈ ಬಿಡದೆ ಪಕ್ಷದ ವರಿಷ್ಠರು ದರ್ಶನಾಪುರ ಅವರನ್ನೇ ಸಚಿವರನ್ನಾಗಿ ಮುಂದುವರೆಸುವಂತೆ ಆಗ್ರಹಿಸಿದ್ದಾರೆ. ಯಾದಗಿರಿ ಜಿಲ್ಲೆಯಲ್ಲಿ ಕಾಂಗ್ರೆಸ್ ಪಕ್ಷ ಸಂಘಟನೆ ಹಾಗೂ ಚುನಾವಣೆ ಸಮಯದಲ್ಲಿ ಯುವಕರನ್ನು ಉತ್ಸಾಹದಿಂದ ಕಂಡು ನಮ್ಮೆಲ್ಲರ ಶ್ರೇಯಸ್ಸನ್ನು ಬಯಸಿದ ಶಹಾಪುರ ಕ್ಷೇತ್ರದ ಶಾಸಕರಾಗಿ ಅನೇಕ ಕ್ರಿಯಾಶೀಲ ಕಾರ್ಯಗಳನ್ನು ಮಾಡಿರುವ ದರ್ಶನಾಪುರ ಅವರನ್ನು ಸಚಿವರ ಸ್ಥಾನದಲ್ಲೇ ಉಳಿಸಿಕೊಂಡು ಮುಂದುವರೆಸಬೇಕೆಂದು ಶಾಸಕರಾಗಿ ಮೂರು ಬಾರಿ ಸಚಿವರಾಗಿ ರಾಜ್ಯದಲ್ಲಿ ಉತ್ತಮವಾದ ಅಭಿವೃದ್ಧಿ ಕೆಲಸ ಮತ್ತು ಯಾದಗಿರಿ ಜಿಲ್ಲೆ ಮತ್ತು ಸರ್ವಾಂಗಣ ಅಭಿವೃದ್ಧಿಗಾಗಿ ಸಾಕಷ್ಟು ಮೂರು ವರ್ಷದಲ್ಲಿ ಅಭಿವೃದ್ಧಿ ಕೆಲಸವನ್ನು ಮಾಡಿದ್ದಾರೆ ಮತ್ತು ವಿಶೇಷವಾಗಿ ದಿನನಿತ್ಯ ಸಾರ್ವಜನಿಕರಿಗೆ ಭೇಟಿಯನ್ನು ಮಾಡುವಂತ ಸೌಜನ್ಯತೆ ಕೂಡ ಅವರದಾಗಿದ್ದು ಮತ್ತು ಇಂಥ ಒಬ್ಬ ನಾಯಕರನ್ನು ಸಚಿವ ಸಂಪುಟದಲ್ಲಿ ತೆ–ಗೆದುಕೊಂಡರೆ ಯಾದಗಿರಿ ಜಿಲ್ಲೆಯ ಸಾಕಷ್ಟು ಅಭಿವೃದ್ಧಿ ಆಗುತ್ತದೆ ಮತ್ತು ಕಾಂಗ್ರೆಸ್ ಪಕ್ಷದ ಎಲ್ಲಾ ಕಾರ್ಯಕರ್ತರಿಗೆ ಅನುಕೂಲವಾಗಲಿದೆ ಇಂಥ ಒಬ್ಬ ನಾಯಕನನ್ನು ಸಚಿವ ಸಂಪುಟದಲ್ಲಿ ಮುಂದುವರಿಸಬೇಕು ಎಂದು ಯಾದಗಿರಿ ಜಿಲ್ಲೆಯ ಜನರ ಆಸೆಯಾಗಿದ್ದು ಅದಕ್ಕಾಗಿ ಕರ್ನಾಟಕ ಸರ್ಕಾರದಲ್ಲಿ ಮತ್ತೆ ಅವರನ್ನು ಸಚಿವ ಸಂಪುಟದಲ್ಲಿ ಮುಂದುವರಿಸಬೇಕೆಂದು ಎಂದು ರಾಜು ಚಂದಾಪುರ ಒತ್ತಾಯಿಸಿದ್ದಾರೆ

## ಸಮವಸ್ತ್ರವನ್ನು ಕಡ್ಡಾಯವಾಗಿ ಧರಿಸಬೇಕು



ಮಲ್ಲಮ್ಮ ನುಡಿ ವಾರ್ತೆ

ಹುಣಸೂರು ನಗರ ಪೊಲೀಸ್ ಠಾಣೆಯಲ್ಲಿ ಆಟೋ ಚಾಲಕರ ಮತ್ತು ಮಾಲೀಕರ ಸಭೆಯನ್ನು ನಡೆಸಲಾಯಿತು. ಸಭೆಯಲ್ಲಿ ಡಿ ವೈ ಎಸ್ ಪಿ ರವಿ, ಚಾಲಕರನ್ನು ಉದ್ದೇಶಿಸಿ ಸಭೆಯಲ್ಲಿ ಮಾತನಾಡಿ

ವಾಹನಗಳಲ್ಲಿ ಸಮರ್ಪಕವಾಗಿ ದಾಖಲೆಗಳನ್ನು ನಿರ್ವಹಿಸುವ ಬಗ್ಗೆ, ಸಮವಸ್ತ್ರವನ್ನು ಧರಿಸುವ ಕಡ್ಡಾಯವಾಗಿ ಧರಿಸಬೇಕು ಎಂದರು

ವೃತ್ತ ನಿರೀಕ್ಷಕರು ಎಂ. ಶಿವಮಾದಯ್ಯ ಮಾತನಾಡಿ ಚಾಲಕರುಗಳಿಗೆ ಪ್ರಯಾಣಿಕರೊಂದಿಗೆ ಸೌಜನ್ಯ ದಿಂದ ವರ್ತಿಸಲು, ಹೆಚ್ಚು ಹಣ ತೆಗೆದುಕೊಳ್ಳದೆ ನಿಗಧಿತ ದರವನ್ನು ಪಡೆಯುವಂತೆ ಹಾಗೂ ಚಾಲಕರು ಮಾಡುವ ಪ್ರಸ್ತುತ ತಪ್ಪು ಗಳ ಗ್ರಹಿಕೆ ಮಾಡಿಕೊಟ್ಟರು, ಅಲ್ಲದೇ ತಮ್ಮ ಮಕ್ಕಳ ಭವಿಷ್ಯದ ಬಗ್ಗೆ ಯೋಚಿಸಲು ಸೂಕ್ತ ಸಲಹೆಗಳನ್ನು ನೀಡಿದರು.

ಪಿ.ಎಸ್.ಐ ತಾಜುದ್ದೀನ್, ರವರು ಮಾತನಾಡಿ ಶಾಲಾ ಕಾಲೇಜು ಮಕ್ಕಳಿಗೆ ಯಾ–ರೇ ಚಾಲಕರು ಕಿರುಕುಳ ನೀಡಿದ್ದಲ್ಲಿ ನಿರ್ಧಾಕ್ಷಣ್ಯ ಕ್ರಮ ಕಾಗೊಳ್ಳಲಾಗುವುದು ಎಂದು ಚಾಲಕರುಗಳಿಗೆ ಸಂಚಾರಿ ನಿಯಮಗಳು ಮತ್ತು ಕಾನೂನು ವಿಷಯಗಳ ಕುರಿತು ಜಾಗೃತಿ ಮೂಡಿಸಿದರು. ಸಭೆಯಲ್ಲಿ ಸುಮಾರು 200–250 ಜನರು ಭಾಗವಹಿಸಿದ್ದರು. ಎಲ್ಲಾ ಆಟೋ ಚಾಲಕರಿಗೆ ಇನ್ನು ಒಂದು ತಿಂಗಳ ಒಳಗಾಗಿ ವಾಹನಗಳ ಸಮರ್ಪಕ ದಾಖಲಾತಿಗಳನ್ನು ಹೊಂದುವಂತೆ ಖಡಕ್ಕಾಗಿ ಸೂಚಿಸಲಾಯಿತು ಈ ಸಂದರ್ಭದಲ್ಲಿ ಎಲ್ಲಾ ಆಟೋ ಚಾಲಕರು ಸಭೆಯಲ್ಲಿ ಭಾಗವಹಿಸಿದರು.

## ಸೆಟಲಮೆಂಟ್ ಪಾಲಿಟಿಕ್ಸ್ ಮಾಡದೆ, ಡೆವಲಪ್ಮೆಂಟ್ ಪಾಲಿಟಿಕ್ಸ್ ಮಾಡಿ: ನೂತನ ಸಿಎಂ ಡಿಕೆಶಿಗೆ ಸಲಹೆ ನೀಡಿದ: ಶರಣಗೌಡ ಕಂದಕೂರ.

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ. ಯರಗೋಳ, ಹೋರುಂಚಾದಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಚಾಲನೆ * ಶಾಸಕ ಕಂದಕೂರ ಆಶಯ

ಕುಮಾರಣ್ಣ, ಬಿಎಸ್ ವೈ, ಸಿದ್ದರಾಮಯ್ಯ ಆಡಳಿತ ಶ್ಲಾಘಿಸಿದ ಶರಣಗೌಡ * ನೂತನ ಸಿಎಂ ಡಿಕೆಶಿಗೆ ಸಲಹೆ *

ಸೆಟಲಮೆಂಟ್ ಪಾಲಿಟಿಕ್ಸ್ ಮಾಡದೆ, ಡೆವಲಪ್ಮೆಂಟ್ ಪಾಲಿಟಿಕ್ಸ್ ಮಾಡಿ!



ರಾಜ್ಯದಲ್ಲಿ ಅಧಿಕಾರ ನಡೆಸಿದ ಮೂರು ಜನ ಮುಖ್ಯಮಂತ್ರಿಗಳು ತಮ್ಮ ಜನಪರ ಆಡಳಿತದಿಂದ ಜನ ಮಾನಸದಲ್ಲಿ ಅಚ್ಚಳಿಯದಂತೆ ಉಳಿದಿದ್ದಾರೆ ಎಂದು ಗುರಮಠಕಲ್ ಕ್ಷೇತ್ರದ ಶಾಸಕ ಶರಣಗೌಡ ಕಂದಕೂರು ತಿಳಿಸಿದರು.

ಸೋಮವಾರ ಮತಕ್ಷೇತ್ರದ ಹೋರುಂಚಾ ಹಾಗೂ ಯರಗೋಳ ಗ್ರಾಮದಲ್ಲಿ ಕೆಕೆಆರ್ ಡಿಬಿಯ ಮೈಕ್ರೋ ಎಸ್.ಸಿಪಿ ಯೋಜನೆಯಡಿ ಥಾವರು ನಾಯಕ ತಾಂಡಾದಿಂದ ತಾನು ನಾಯಕ ತಾಂಡಾವರೆಗೆ ಮುಖ್ಯರಸ್ತೆ 4 ಕೋಟಿ ರೂ. ವೆಚ್ಚದಲ್ಲಿ ಡಾಂಬರೀಕರಣ ಹಾಗೂ ಹೋರುಂಚಾ ಗ್ರಾಮದಲ್ಲಿ ನಡುವಿನ ತಾಂಡಾದಿಂದ ಯಡ್ಡಳ್ಳಿ ಗ್ರಾಮದ ಹರಿಜನವಾಡಾದ ವರೆಗೆ 3 ಕೋಟಿ ರೂ.ವೆಚ್ಚದಲ್ಲಿ ರಸ್ತೆ ನಿರ್ಮಾಣ ಕಾಮಗಾರಿಗೆ ಅಡಿಗಲ್ಲು ನೆರವೇರಿಸಿ ಅವರು ಮಾತನಾಡಿದರು.

ಎಚ್.ಡಿ.ಕುಮಾರಸ್ವಾಮಿ ಸಿಎಂ ಆಗಿದ್ದಾಗ ರೈತರ ಸಾಲಮನ್ನಾ, ಜನತಾ ದರ್ಶನ, ಗ್ರಾಮ ವಾಸ್ತವ್ಯ ಹಾಗೂ ಸುವರ್ಣ ಗ್ರಾಮದಂಥ ಮಹತ್ವದ ಯೋಜನೆ ಜಾರಿಗೊಳಿಸುವ ಮೂಲಕ ಜನ ಮೆಚ್ಚುಗೆ ಗಳಿಸಿದ್ದಾರೆ. ಬಿ.ಎಸ್.ಯಡಿಯೂರಪ್ಪ ಅವರು, ಭಾಗ್ಯಲಕ್ಷ್ಮೀ ಯೋಜನೆ, ವಿದ್ಯಾರ್ಥಿಗಳಿಗೆ ಸೈಕಲ ವಿತರಣೆ ಯೋಜನೆ ತಂದು ಅನುಕೂಲ ಮಾಡಿಕೊಟ್ಟರು. ಇನ್ನೂ ಸಿದ್ದರಾಮಯ್ಯನವರು ಅನೇಕ ಭಾಗ್ಯಗಳನ್ನು ಜಾರಿಗೆ ತರುವ ಮೂಲಕ ರಾಜ್ಯದ ಜನರ ಮನಸ್ಸಿನಲ್ಲಿ ಶಾಶ್ವತವಾಗಿ ನೆಲೆಯೂರಿದ್ದಾರೆ ಎಂದು ಬಣ್ಣಿಸಿದರು.

ರಾಜ್ಯ ಸರ್ಕಾರದ ನೂತನ ಆಡಳಿತದ ಚುಕ್ಕಾಣಿ ಹಿಡಿಯಲಿರುವರು ಈ ಮೂರು ನಾಯಕರ ಕಾರ್ಯಕ್ರಗಳನ್ನು ಆದರ್ಶವಾಗಿ ಇಟ್ಟುಕೊಂಡು ಆಡಳಿತ ನಡೆಸಬೇಕು. ಅಲ್ಲದೆ ಇಕ ಮೂರು ಜನ ಮುಖ್ಯಮಂತ್ರಿಗಳು ನಾಡಿನ ಜನರ ಭಾವನೆ ಅರ್ಥಮಾಡಿಕೊಂಡು ಡೆವಲಪಮೆಂಟ್ ಪಾಲಿಟಿಕ್ಸ್ ಮಾಡಿದ್ದಾರೆ ಎಂದರು.

ಉತ್ತರಾಧಿಮಠದ ಪಂ.ಸತ್ಯಬೋಧಾಚಾರ್ಯ ಘಟಾಲಿ ಮಾತನಾಡಿ, ಕ್ಷೇತ್ರದಲ್ಲಿ ನಾವು ಎಷ್ಟೋ ನಾಯಕರನ್ನು ಕಂಡಿದ್ದೇವೆ. ಆದರೆ, ಅಭಿವೃದ್ಧಿ ಪರ ಇರುವ ಶಾಸಕ ಶರ–ಣಗೌಡ ಕಂದಕೂರ ಅವರಂಥ ನಾಯಕತ್ವ ಸಿಗುವುದು ಬಹಳ ಅಪರೂಪ. ಥಾವರು ನಾಯಕ ತಾಂಡಾ ರಸ್ತೆ ಸುಧಾರಣೆಯಿಂದ ಈ ಭಾಗದ ಜನತೆ ಸಂಚಾರಕ್ಕೆ ಪಡುತ್ತಿರುವ ಕಷ್ಟ ದೂರವಾಗಲಿದೆ. ಶ್ರೀ ಟೀಕಾಚಾರ್ಯರು ಶಾಸಕರಿಗೆ ಆಶಿರ್ವದಿಸಲಿ ಎಂದು ಹರಸಿದರು.

ಈ ವೇಳೆ ಲೋಕೋಪಯೋಗಿ ಇಲಾಖೆ ಎಇಇ ಪರಶುರಾಮ, ತಾಪಂ ಎಡಿ ರಾಮಚಂದ್ರ, ಕಂದಾಯ ನಿರೀಕ್ಷಕ ರಾಜಶೇಖರ, ಜೆಡಿಎಸ್ ಜಿಲ್ಲಾಧ್ಯಕ್ಷ ಸುಭಾಶ್ಚಂದ್ರ ಕಟಕಟಿ, ಮುಖಂಡರಾದ ಭೋಜನಗೌಡ ಯಡ್ಡಳ್ಳಿ, ರವಿ ಪಾಟೀಲ್ ಬಸ್ಸಣ್ಣ ದೇವರಳ್ಳಿ, ಶಂಕ್ರಪ್ಪ ದಿಬ್ಬಾ, ಶಿವಣ್ಣ ಹಿರಿಕೇರಾ, ಶಿವು ಭೀಮನಳ್ಳಿ, ಮಾರ್ಥಂಡ ಯರಗೋಳ, ಸಿದ್ದಪ್ಪ ಹೋರುಂಚಾ, ಮಜಾಯಿದ್ ಸೇಠ್, ಮಲ್ಲನಗೌಡ ಹೋರುಂಚಾ, ರಾಜುಗೌಡ ಚಾಮನಳ್ಳಿ,ಗುರು ಅಲ್ಲಿಪುರ ತಾಂಡಾ, ಸಾಬಣ್ಣಾ ಹೋರುಂಚಾ, ಹಂಪಯ್ಯಾ ಅಲ್ಲಿಪುರ, ದೇವಪ್ಪ ವಡ್ನಳ್ಳಿ, ಸಿದ್ದಲಿಂಗರಡ್ಡಿ ಅರಿಕೇರಾ, ರಾಘವೇಂದ್ರ ವಡ್ನಳ್ಳಿ, ನಾಗರಾಜ ಮಲಕಪನಳ್ಳಿ, ಮರೆಪ್ಪ ಚಡಬನೂರ, ಗುತ್ತಿಗೆದಾರ ಸಿದ್ದಪ್ಪಗೌಡ ಕಾಳೆಬೆಳಗುಂದಿ ಇದ್ದರು.

### ರಾಜ್ಯದ ಜನತೆಗೆ ಜನಪರ ಆಡಳಿತ ಕೊಡಿ....

ಮುಂದಿನ ಮುಖ್ಯಮಂತ್ರಿಗಳು ಸೆಟಲ್ ಮೆಂಟ್ ಪಾಲಿಟಿಕ್ಸ್ ಮಾಡದೆ ಡೆವಲಪಮೆಂಟ್ ಪಾಲಿಟಿಕ್ಸ್ ಮಾಡುವ ಮೂಲಕ ಜನತೆಗೆ ಉತ್ತಮ ಆಡಳಿತ ನೀಡಲಿ ಎಂದು ಶಾಸಕ ಶರ–ಣಗೌಡ ಕಂದಕೂರ ನೂತನ ಮುಖ್ಯಮಂತ್ರಿಯಾಗಲಿರುವ ಡಿ.ಕೆ.ಶಿವಕುಮಾರ ಅವರಿಗೆ ಶುಭ ಹಾರೈಸಿದರು.

### ನೀವು ಬದಲಾಗುತ್ತೀರಾ? ನಾನೇ ಬದಲಾಯಿಸಬೇಕಾ...

ಯರಗೋಳ ಗ್ರಾಮದಲ್ಲಿ ಕಾಮಗಾರಿಗೆ ಅಡಿಗಲ್ಲು ನೆರವೇರಿಸಿ ಗ್ರಾಮಸ್ಥರ ಅಹವಾಲು ಸ್ವೀಕರಿಸಿದ ಶಾಸಕರಿಗೆ ಜನತೆ ಜೆಸ್ಕಾಂ ಸಿಬ್ಬಂದಿಗಳ ಬೇಜವಾಬ್ದಾರಿತನದ ಬಗ್ಗೆ ದೂರಿದರು. ಇದ–ರಿಂದ ಕೆಂಡಾಮಂಡಲರಾದ ಶಾಸಕರು ಸರ್ಕಾರ ಕೊಡುವ ಸಂಬಳಕ್ಕೆ ಕೆಲಸ ಮಾಡಿ. ನೀವು ಬದಲಾಗುತ್ತೀರಾ? ನಾನೇ ಬದಲಾಯಿಸಬೇಕಾ ಎಂದು ಗುಡುಗಿದರು.

### ವಡ್ನಳ್ಳಿ ಗ್ರಾಮದಲ್ಲಿ ಟಿಸಿ ಸುಟ್ಟು ವಾರಗಟ್ಟಲೇ ಆಗಿದೆ. ಗ್ರಾಮಸ್ಥರು

ವಾಹನ ವ್ಯವಸ್ಥೆ ಮಾಡುತ್ತೇವೆ ಟಿಸಿ ಕೊಡಿ ಎಂದರೂ ಲೈನಮ್ಯಾನ್ ಮತ್ತು ಎಸ್‌ಓ ಸ್ಪಂದನೆ ಮಾಡುತ್ತಿಲ್ಲ. ಕೂಡಲೇ ಅವರ ಮೇಲೆ ಕ್ರಮ ಕೈಗೊಳ್ಳುವಂತೆ ಜೆಸ್ಕಾಂ ಇಇ ರಾಘವೇಂದ್ರ ಅವರಿಗೆ ದೂರವಾಣಿ ಮೂಲಕ ಸೂಚನೆ ನೀಡಿದರು.

## ಮಳೆ ನೀರು ನಿಂತು ವಾಹನ ಸಂಚಾರಕ್ಕೆ ಅಡಚಣೆ

ಮಲ್ಲಮ್ಮ ನುಡಿ ವಾರ್ತೆ

ಹುಳಿಯಾರು, ಜೂ. 1– ಮಳೆ ಬಂದರೆ ಸಾಕು ಹುಳಿಯಾರಿನಲ್ಲಿ ಹಾದು ಹೋಗುವ ರಾಷ್ಟ್ರೀಯ ಹೆದ್ದಾರಿ 69 ರಸ್ತೆಯು ಮಿನಿ ಕೆರೆಯಾಗಿ ಮಾರ್ಪಡುತ್ತಿದೆ. ಕಳಪೆ ಹಾಗೂ ಅವೈಜ್ಞಾನಿಕ ಚರಂಡಿ ಕಾಮಗಾರಿಯಿಂದಾಗಿ ಸಾರ್ವಜನಿಕರು ಮತ್ತು ಸ್ಥಳೀಯರು ನಿತ್ಯ ನರಕಯಾತನೆ ಅನುಭವಿಸುತ್ತಿದ್ದಾರೆ. ಕಳೆದ ಎರಡು ದಿನಗಳ ಹಿಂದೆ ಸುರಿದ ಮಳೆಯಿಂದಾಗಿ ಮೊಳಕಾಲುದ್ದದ್ದ ನೀರು ನಿಂತು ವಾಹನ ಸಂಚಾರಕ್ಕೆ ಭಾರಿ ತೊಂದರೆ–ಯುಂಟಾಗಿತ್ತು. ಮಂಗಳೂರುನಿಂದ ವಿಶಾಖಪಟ್ಟಣ ರಾಷ್ಟ್ರೀಯ ಹೆದ್ದಾರಿ ಕಾಮಗಾರಿ ಹುಳಿಯಾರು ಪಟ್ಟಣದಲ್ಲಿ ಕಳೆದ ಆರೇಳು ವರ್ಷಗಳಿಂದ ನಡೆ–ಯುತ್ತಿದ್ದರೂ ಸಹ ಇದೂವರೆವಿಗೂ ಪೂರ್ಣವಾಗಿಲ್ಲ. ಒಂದೊಂದು ಕಿಲೋ ಮೀಟರ್‌ಗೂ ಸಹ ಪ್ರತಿಭಟನೆ, ಧರಣಿ ಮಾಡಿ ಕಾಮಗಾರಿ ಮಾಡಿಸಿಕೊಳ್ಳಬೇಕಾದ ಅನಿವಾರ್ಯ ಕರ್ಮ ಸೃಷ್ಠಿಯಾಗಿತ್ತು.

# ಪ್ರಿಯಾಂಕ್ ಖರ್ಗೆ ಅವರಿಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡಲು ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಗುರುಮಠಕಲ್:ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾವಣೆ ಹಿನ್ನಲೆಯಲ್ಲಿ ಕಲ್ಯಾಣ ಕರ್ನಾಟಕ ಭಾಗದ ಹಿರಿಯ ನಾಯಕ ಹಾಗೂ ಸಚಿವರಾದ ಪ್ರಿಯಾಂಕ್ ಖರ್ಗೆ ಅವರಿಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡಬೇಕು ಎಂದು ಗುರುಮಠಕಲ್ ಬ್ಲಾಕ್ ಕಾಂಗ್ರೆಸ್ ಯೂಥ್ ಅಧ್ಯಕ್ಷ ಆನಂದ್ ಪೂಜಾರಿ ಪತ್ರಿಕಾ ಗೋಷ್ಠಿಯಲ್ಲಿ ಆಗ್ರಹಿಸಿದರು.

ಈ ಕುರಿತು ಮಾತನಾಡಿ ಪ್ರಿಯಾಂಕ್ ಖರ್ಗೆ ಅವರು ಸಚಿವರಾಗಿ ಸಮರ್ಥವಾಗಿ ಕಾರ್ಯನಿರ್ವಹಿಸಿದ್ದು, ರಾಜ್ಯದ ಅಭಿವೃದ್ಧಿ ಹಾಗೂ ಕಾಂಗ್ರೆಸ್ ಪಕ್ಷದ ಸಂಘಟನೆ ಬಲವರ್ಧನೆಗೆ ಮಹತ್ವದ ಕೊಡುಗೆ ನೀಡಿದ್ದಾರೆ. ಆದ್ದರಿಂದ ಅವರಿಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡುವುದು ಸೂಕ್ತ ಎಂದು ಅಭಿಪ್ರಾಯಪಟ್ಟರು.

ಅದೇ ರೀತಿ, ಗುರುಮಟ್ಕಲ್ ವಿಧಾನಸಭಾ ಕ್ಷೇತ್ರ ಹಾಗೂ ಕಲ್ಯಾಣ ಕರ್ನಾಟಕ ಭಾಗಕ್ಕೆ ಪ್ರತಿನಿಧಿತ್ವ ಕಲ್ಪಿಸುವ ನಿಟ್ಟಿನಲ್ಲಿ ಸ್ಥಳೀಯ ಕಾಂಗ್ರೆಸ್ ನಾಯಕನೊಬ್ಬರನ್ನು ವಿಧಾನ ಪರಿಷತ್ ಸದಸ್ಯರಾಗಿ (ಎಂಎಲ್‌ಸಿ) ಆಯ್ಕೆ ಮಾಡಬೇಕು. ಇದರಿಂದ ಪಕ್ಷದ ಸಂಘಟನೆ ಮತ್ತಷ್ಟು ಬಲಗೊಳ್ಳಲಿದ್ದು, ಕ್ಷೇತ್ರದ ಅಭಿವೃದ್ಧಿಗೂ ನೆರವಾಗಲಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಚನ್ನಬಸವ ಗಾಜರಕೋಟ, ಹುಸೇನಪ್ಪ ಪುಲಿ, ಭೀಮಶಪ್ಪ ಕೇಳಮನಿ, ಸೈಯದ್ ಕರೀಂ ,ನರೇಶ್ ಮುದಿರಾಜ್ ಇತರ ಮುಖಂಡರು, ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಆಟೋ ಚಾಲಕರಿಗೆ ಸಮವಸ್ತ್ರ ವಿತರಣೆ



ಮಲ್ಲಮ್ಮ ನುಡಿ ವಾರ್ತೆ

ಕೆ.ಆರ್.ಪುರ, ಜೂ.1– ಬಡವರಿಗೆ ಹಾಗೂ ಬಡ ಮಕ್ಕಳ ಶಿಕ್ಷಣಕ್ಕೆ ಮಾಡುವ ಸೇವಾ ಕಾರ್ಯಗಳು ನಮಗೆ ನೆಮ್ಮದಿ ನೀಡುವ ಜೋತೆಗೆ ಸಾರ್ಥಕತೆ ನೀಡುತ್ತದೆ ಎಂದು ಶಾಸಕ ಬಿ.ಎ.ಬಸವರಾಜ ಅವರು ತಿಳಿಸಿದರು. ಕ್ಷೇತ್ರದ ದೂರವಾಣಿನಗರ ವಾರ್ಡನಲ್ಲಿ ಪ್ರಬಲ ಆಕಾಂಕ್ಷಿ ಪ್ರದೀಪ್ ಗೌಡ ಅವರ ಸೇವಾದಿನದ ಅಂಗವಾಗಿ ಆಟೋಚಾಲಕರಿಗೆ ಸಮವಸ್ತ್ರಗಳನ್ನು ವಿತರಣೆ ಮಾಡಿ ಮಾತನಾಡಿದರು.

ಹಲವಾರು ಸಮಾಜಮುಖಿ ಕಾರ್ಯಗಳಾದ ಬಡವರಿಗೆ ದಿನಸಿ ಕಿಟ್, ಸೀರೆ ವಿತರಣೆ, ಆಟೋ ಚಾಲಕರಿಗೆ ಸಮವಸ್ತ್ರ, ಊಟದ ವ್ಯವಸ್ಥೆ ಹೀಗೆ ಹಲವಾರು ಸೇವಾಕಾರ್ಯಗಳನ್ನು ಪ್ರದೀಪ್ ಗೌಡ ಮಾಡುತ್ತ ಬಂದಿದ್ದು, ವಾರ್ಡನ ಸಾರ್ವಜನಿಕರ ಹಿತಕಾಯುವ ನಾಯಕನಾಗಿ ಹೊರಹೊಮ್ಮಿದ್ದಾರೆ ಎಂದು

# 82ನೇ ಮಾಸಿಕ ಕಾರಹುಣ್ಣಿಮೆ ಪ್ರಯುಕ್ತ ಶಿವಾನುಭವಾ ಗೋಷ್ಠಿ ಕಾರ್ಯಕ್ರಮ

ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ:ಜಿಲ್ಲಾಯಲಬುರ್ಗಾ ತಾಲೂಕಿನ ಮಕ್ಕಳ್ಳಿ ಗ್ರಾಮದಲ್ಲಿ ಶಿವಾನಂದ ಸೇವಾ ಸಮಿತಿ ವತಿಯಿಂದ ಮಕ್ಕಳ್ಳಿ ಮಠದಲ್ಲಿ ಶಿವಾನುಭವಾ ಗೋಷ್ಠಿ ಕಾರ್ಯಕ್ರಮವು ಭಕ್ತಿಭಾವ ಮತ್ತು ಆಧ್ಯಾತ್ಮಿಕ ವಾತಾವರಣದಲ್ಲಿ ಯಶಸ್ವಿಯಾಗಿ ನಡೆಯಿತು.

ಕಾರ್ಯಕ್ರಮದಲ್ಲಿ ಶಿವಶರಣರ ವಚನಗಳು, ಬಸವ ತತ್ವಗಳು ಹಾಗೂ ಮಾನವೀಯ ಮೌಲ್ಯಗಳ ಕುರಿತು ವಿದ್ವಾಂಸರು ಮತ್ತು ಭಕ್ತರು ತಮ್ಮ ಅನುಭವಗಳನ್ನು ಹಂಚಿಕೊಂಡರು. ಶಿವಾನುಭಾವದ ಮಹತ್ವ, ಸಮಾಜದಲ್ಲಿ ಧರ್ಮದ ಪಾತ್ರ ಹಾಗೂ ನೈತಿಕ ಜೀವನದ ಅಗತ್ಯತೆ–ಯ ಕುರಿತು ಉಪನ್ಯಾಸಗಳು ನಡೆದವು. ಗೋಷ್ಠಿಯಲ್ಲಿ ದಿವ್ಯ ಸಾನಿಧ್ಯವನ್ನು. ಬ್ರ.ನಿ. ಸದ್ಗುರು ಶಿವಾನಂದ ಮಹಾಸ್ವಾಮಿಗಳು ಶಿವಾನಂದಮಠ ಮಕ್ಕಳಿ. ಮುಖ್ಯ ಅತಿಥಿಗಳಾಗಿ ಮಳೆಯಪಯ್ಯ ಶರಣರು. ಅಲಿಸಾ ನದಾಫ್. ಶ್ರೀ ಚಂದ್ರಶೇಖರ್ ಕೋಗಿಲೆ ತಬಲವಾದಕರು. ಭಾಷಾ ಸಾಹೇಬರು. ದುರಗೇಶ ಬಿ ನಿಲೋಗಲ್ ಬುದ್ಧ ಲೋಕ ಪತ್ರಿಕೆಯ ಜಿಲ್ಲಾ ವರದಿಗಾರರು. ರಮೇಶ್ ಲಿಂಗದಹಳ್ಳಿ. ಹನುಮಂತಪ್ಪ ಬಾರಕೇರ. ತುಕಾರಾಂ ನಾವಡೆ. ಈರಪ್ಪ ಕರೆಕುರಿ. ನಾಗನಗೌಡ ಮಾ.ಪಾಟೀಲ್. ಸಂಗಪ್ಪ ಹುಣಸಿಹಾಳ್. ಮರೇಗೌಡ್ರ ಸಂಗನಹಾಲ. ಯಂಕಪ್ಪ ಸಂಗಟ್ಟಿ. ಬಸಣ್ಣ ವಿಠಲಾಪುರ. ರುದ್ರಗೌಡ ಮಾಲಿ ಪಾಟೀಲ್. ಮಂಜುನಾಥ್ ಸುರ್ವೆ. ಶಿವಶರಣಯ್ಯ ಮುಧೋಳ್. ಯಂಕಪ್ಪ ಲಡ್ಡಿ. ಶರಣಗೌಡ ಮಾಲಿ ಗೌಡ್ರ. ಯಂಕಪ್ಪ ಸರಕಲಿ. ಉಮೇಶ್ ನಿಲೋಗಲ್. ದೇವಪ್ಪ ಹೊಸೂರ್. ಶಂಕ್ರಪ್ಪ ಮೇಟಿ. ಶ್ರೀಕಾಂತಗೌಡ ಮಾಲಿ ಪಾಟೀಲ್. ಭೀಮಣ್ಣ ಹಡಪದ. ಶಿವಣ್ಣ ಹುಳ್ಳಿ. ಗುನ್ನೆಪ್ಪ ದಾಸರ್. ಹಾಗೆ ಇನ್ನು ಮುಂತಾದವರು. ಭಾಗವಹಿಸಿದ ಭಕ್ತರು ಮತ್ತು ಗಣ್ಯರು ಶಿವತತ್ವಗಳ ಕುರಿತು ಚರ್ಚಿಸಿ, ಆಧ್ಯಾತ್ಮಿಕ ಜ್ಞಾನವನ್ನು ವೃದ್ಧಿಸಿಕೊಳ್ಳುವ ಅವಕಾಶ ಪಡೆದರು. ಕಾರ್ಯಕ್ರಮದ ಕೊನೆಯಲ್ಲಿ ಎಲ್ಲರಿಗೂ ಪ್ರಸಾದ ವಿತರಣೆ ಮಾಡಲಾಯಿತು.



ಈ ಶಿವಾನುಭವಾ ಗೋಷ್ಠಿಯು ಭಕ್ತರಲ್ಲಿ ಧಾರ್ಮಿಕ ಜಾಗೃತಿ ಮೂಡಿಸುವುದರ ಜೊತೆಗೆ ಸಮಾಜದಲ್ಲಿ ಸೌಹಾರ್ದತೆ ಮತ್ತು ಸತ್ಸಂಸ್ಕಾರಗಳನ್ನು ಬೆಳೆಸುವಲ್ಲಿ ಮಹತ್ವದ ಪಾತ್ರ ವಹಿಸಬೇಕೆಂದು ಶಿವಾನಂದ ಮಹಾಸ್ವಾಮಿಗಳು ಹೇಳಿದರು. ಹಾಗೆ 10ನೇ ತರಗತಿಯಲ್ಲಿ (80% ಪರ್ಸೆಂಟ್ ) ಅಂಕಗಳನ್ನು ಮತ್ತು ಅದಕ್ಕಿಂತ ಹೆಚ್ಚು ಅಂಕ ಪಡೆದವರಿಗೆ ಎಲ್ಲಾ ವಿದ್ಯಾರ್ಥಿಗಳಿಗೂ ಶ್ರೀ ಮಠದ ಕಡೆಯಿಂದ ಸನ್ಮಾನ ಮತ್ತು ಪ್ರಶಸ್ತಿ ಪತ್ರಗಳನ್ನು ನೀಡಲಾಯಿತು.

## ಶಾಲಾ ಪ್ರಾರಂಭೋತ್ಸವ: ವಿದ್ಯಾರ್ಥಿನಿಯರಿಗೆ ಪುಷ್ಪಾರ್ಚನೆ ಮೂಲಕ ಆತ್ಮೀಯ ಸ್ವಾಗತ.



ಮಲ್ಲಮ್ಮ ನುಡಿ ವಾರ್ತೆ

ಗುರುಮಠಕಲ್ :ಪಟ್ಟಣದ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರೌಢ ವಿಭಾಗದಲ್ಲಿ ಸೋಮವಾರ ಶಾಲಾ ಪ್ರಾರಂಭೋತ್ಸವವನ್ನು ಸಂಭ್ರಮದಿಂದ ಆಚರಿಸಲಾಯಿತು. ಹೊಸ ಶೈಕ್ಷಣಿಕ ವರ್ಷದ ಅಂಗವಾಗಿ ವಿದ್ಯಾರ್ಥಿನಿಯರನ್ನು ಪುಷ್ಪಾರ್ಚನೆ ಹಾಗೂ ಪುಷ್ಪಾಕ್ಷತೆ ಮೂಲಕ ಆತ್ಮೀಯವಾಗಿ ಸ್ವಾಗತಿಸಲಾಯಿತು.

ಕಾರ್ಯಕ್ರಮದಲ್ಲಿ ಶಿಕ್ಷಣ ಸಂಯೋಜಕರಾದ ರವೀಂದ್ರ ಚವಾಣ್, ಮುಖ್ಯಗುರುಗಳಾದ ವೀರಮ್ಮ, ದೈಹಿಕ ಶಿಕ್ಷಣ ಶಿಕ್ಷಕರಾದ ಶರಣಪ್ಪ ಬಿ ಹಾಗೂ ಆಂಜನೇಯ, ಶಿಕ್ಷಕರಾದ ಲಿಂಗಾನಂದ ಗೋಗಿ, ಲಕ್ಷ್ಮಣರಾವ್ ಶ್ರೀಗಿರಿ, ಹೇಮಲತಾ, ಭಾಗ್ಯಲಕ್ಷ್ಮಿ, ಸಂತೋಷ್ ಇಬಾಯಿ, ನರ್ಮದಾ, ಅಲಿ ಮೌಲಾನಾ ಸೇರಿದಂತೆ ಇತರರು ಭಾಗವಹಿಸಿ ವಿದ್ಯಾರ್ಥಿನಿಯರಿಗೆ ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ವಿದ್ಯಾರ್ಥಿನಿಯರಿಗೆ ಉಚಿತ ಪಠ್ಯಪುಸ್ತಕಗಳು, ಶಾಲಾ ಸಮವಸ್ತ್ರಗಳನ್ನು ವಿತರಿಸಲಾಯಿತು. ಜೊತೆಗೆ 8ನೇ ಹಾಗೂ 9ನೇ ತರಗತಿಗಳಿಗೆ ವಿಶೇಷ ದಾಖಲಾತಿ ಅಭಿಯಾನಕ್ಕೂ ಚಾಲನೆ ನೀಡಲಾಯಿತು.

ಹೊಸ ಶೈಕ್ಷಣಿಕ ವರ್ಷದಲ್ಲಿ ಉತ್ತಮ ವಿದ್ಯಾಭ್ಯಾಸದೊಂದಿಗೆ ಶಿಸ್ತು, ಸಂಸ್ಕಾರ ಹಾಗೂ ಸಾಧನೆಯತ್ತ ವಿದ್ಯಾರ್ಥಿನಿಯರು ಗಮನ ಹರಿಸಬೇಕು ಎಂದು ಗುರುಮಠಕಲ್ ವಲಯ ಶಿಕ್ಷಣ ಸಂಯೋಜಕರಾದ ರವೀಂದ್ರ ಚೌಹಾಣ್ ಕರೆ ನೀಡಿದರು.

# ಶಾಲಾ ಪ್ರಾರಂಭೋತ್ಸವ, ದಾಖಲಾತಿ ಆಂದೋಲನ ಹಾಗೂ ಪೋಷಕರ ಮಹಾಸಭೆ.



ಮಲ್ಲಮ್ಮ ನುಡಿ ವಾರ್ತೆ

ಗುರುಮಠಕಲ್:

ಪಟ್ಟಣದ ಸರ್ಕಾರಿ ಬಾಲಕಿಯರ ಉರ್ದು ಹಿರಿಯ ಪ್ರಾಥಮಿಕ ಶಾಲೆ ಹಾಗೂ ಪಿಎಂ ಶ್ರೀ ಬಾಲಕಿಯರ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆ ಉಪ್ಪರಗಡ್ಡ ಶಾಲಾ ಪ್ರಾರಂಭೋತ್ಸವ, ದಾಖಲಾತಿ ಆಂದೋಲನ ಮತ್ತು ಪೋಷಕರ ಮಹಾಸಭೆ ಸೋಮವಾರ ನಡೆಯಿತು.

ಕಾರ್ಯಕ್ರಮವನ್ನು ತಹಸೀಲ್ದಾರ್ ಚನ್ನಮಲ್ಲಪ್ಪ ಘಂಟಿ, ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಅಂಬರೀಶ್ ಪಾಟೀಲ್, ಶಿಕ್ಷಣ ಸಂಯೋಜಕ ರವೀಂದ್ರ ಚವ್ಹಾಣ್, ಸಿಆರ್‌ಪಿ ಬಲಪ್ಪ ಸಿರಗೆಂ, ಎಸ್‌ಡಿಎಂಸಿ ಅಧ್ಯಕ್ಷ ರಮೇಶ್, ಸದಸ್ಯರಾದ ಶ್ರೀನಿವಾಸ್ ಯಾದವ್, ಶ್ರೀನು, ಸಿದ್ದಪ್ಪ ಮದ್ದೂರು, ಅಹ್ಮದ್, ಉರ್ದು ಶಾಲೆಯ ಶಿಕ್ಷಕ ಇಕ್ಬಾಲ್ ಅಹ್ಮದ್, ಸರ್ಕಾರಿ ಬಾಲಕಿಯರ ಪ್ರೌಢಶಾಲೆಯ ಮುಖ್ಯಗುರು ವೀರಮ್ಮ, ಶಿಕ್ಷಕರಾದ ಆಂಜನೇಯ, ಕನಿಪ ದಯಾನಂದ್ ಹಿರೇಮಠ್ ಹಾಗೂ ಪುರಸಭೆಯ ಮಾಜಿ ಸದಸ್ಯ ನರಸಪ್ಪ ಗಡದುಲ್ ಸಸಿಗೆ ನೀರೆರೆಯುವ ಮೂಲಕ ಉದ್ಘಾಟಿಸಿದರು.

ಶಿಕ್ಷಣ ಸಂಯೋಜಕ ರವೀಂದ್ರ ಚವ್ಹಾಣ್ ಮಾತನಾಡಿ, ಸರ್ಕಾರಿ ಶಾಲೆಗಳಿಗೆ ಮಕ್ಕಳನ್ನು ಸೇರಿಸಿ ಶಾಲೆಗಳನ್ನು ಉಳಿಸಬೇಕು. ಸರ್ಕಾರ ಉಚಿತ ಶಿಕ್ಷಣದ ಜೊತೆಗೆ ಪಠ್ಯಪುಸ್ತಕ, ಸಮವಸ್ತ್ರ, ಪೌಷ್ಟಿಕ ಆಹಾರ ಸೇರಿದಂತೆ ಅನೇಕ ಸೌಲಭ್ಯಗಳನ್ನು ನೀಡುತ್ತಿದೆ ಎಂದು ತಿಳಿಸಿದರು.

ತಹಸೀಲ್ದಾರ್ ಚನ್ನಮಲ್ಲಪ್ಪ ಘಂಟಿ ಮಾತನಾಡಿ, ನಾವು ಸರ್ಕಾರಿ ಶಾಲೆಗಳಲ್ಲಿ ಶಿಕ್ಷಣ ಪಡೆದಿದ್ದೇವೆ, ಸರಕಾರ ಶಿಕ್ಷಣದ ಗುಣಮಟ್ಟ ಸುಧಾರಿಸಲು ಸಾಕಷ್ಟು ಯೋಜನೆ ತಂದಿದೆ ಪೋಷಕರು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗಳಿಗೆ ದಾಖಲಿಸಿ ಸರ್ಕಾರದ ಸೌಲಭ್ಯಗಳನ್ನು ಬಳಸಿಕೊಳ್ಳಬೇಕು ಎಂದು ಹೇಳಿದರು.

ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಅಂಬರೀಶ್ ಪಾಟೀಲ್ ಮಾತನಾಡಿ, ಶಿಕ್ಷಣವು ಮೂಲಭೂತ ಹಕ್ಕುಗಳಲ್ಲಿ ಒಂದಾಗಿದೆ. ಸರ್ಕಾರಿ ಶಾಲೆಗಳಲ್ಲಿ ಬಟ್ಟೆ, ಪುಸ್ತಕ, ಸಮವಸ್ತ್ರ, ಶೈಕ್ಷಣಿಕ ಪ್ರವಾಸ ಹಾಗೂ ಪೌಷ್ಟಿಕ ಆಹಾರ ಸೇರಿದಂತೆ ಹಲವು ಸೌಲಭ್ಯಗಳನ್ನು ಉಚಿತವಾಗಿ ನೀಡಲಾಗುತ್ತಿದೆ ಇದರ ಸದುಪಯೋಗ ಠಿಚಿಜಜಜಣಾ5 ಕೊಳ್ಳಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ನೂತನವಾಗಿ ದಾಖಲಾತಿ ಪಡೆದ ನವೀನ್ ಕುಮಾರ್ ಎಂಬ ವಿದ್ಯಾರ್ಥಿಗೆ ಪುಸ್ತಕ, ಬಟ್ಟೆ ಹಾಗೂ ಸಮವಸ್ತ್ರ ವಿತರಿಸಲಾಯಿತು. ಅಲ್ಲದೆ ಶಾಲೆಯ ಎಲ್ಲಾ ವಿದ್ಯಾರ್ಥಿಗಳಿಗೆ ಪುಸ್ತಕ ಮತ್ತು ಸಮವಸ್ತ್ರಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಶಿಕ್ಷಕರಾದ ವಿಜಯನಿರ್ಮಲಾ, ಪ್ರೇಮಲತಾ, ಶರಣಮ್ಮ, ಸುನೀತಾ, ಯಶೋಧಾ ಸೇರಿದಂತೆ ಶಾಲೆಯ ಸಿಬ್ಬಂದಿ, ಪೋಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಮೆರವಣಿಗೆ ಮುಖಾಂತರ ಶಾಲಾ ವಿದ್ಯಾರ್ಥಿಗಳನ್ನು ಸ್ವಾಗತಿಸಿದ ಶಾಲಾ ಸಮಿತಿ



ಮಲ್ಲಮ್ಮ ನುಡಿವಾರ್ತೆ

ಕುಕನೂರ:ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಸಿದ್ನೆಕೊಪ್ಪ ಶಾಲಾ ಪ್ರಾರಂಭೋತ್ಸವದ ಅಂಗವಾಗಿ ಹುಚ್ಚೀರೇಶ್ವರ ಹಾಗೂ ಸಿದ್ದೇಶ್ವರ ದೇವಸ್ಥಾನದಿಂದ ಜಾಂಜ್ ಮೇಳ ಎತ್ತಿನಗಾಡಿಯ ಮೆರವಣಿಗೆ ಮುಖಾಂತರ ಎಲ್ಲಾ ಮಕ್ಕಳನ್ನು ಶಾಲೆಗೆ ಕರೆ ತರಲಾಯಿತು.

ಗ್ರಾಮದ ಯುವಕ ಮಿತ್ರರು ಹಾಗೂ ಹಿರಿಯರು ಶಾಲಾ ಎಸ್ ಡಿ ಎಂ ಸಿ ಅಧ್ಯಕ್ಷ ಶರಣಪ್ಪ ಲಕ್ಷಟ್ಟಿ ಉಪಾಧ್ಯಕ್ಷ ಲಕ್ಷ್ಮಿ ತಳವಾರ ಸದಸ್ಯರು ಕೊಟ್ರಯ್ಯ ಹಿರೇಮಠ, ಶರಣಪ್ಪ ನೆರೆಗಲ್, ಮತ್ತು ಮರ್ತುಜ ಸಾಬ್ ಬಡಿಗೇರ್ ದಾವಲ್ ಸಾಬ್ ಬಳಿಗೇರ್ ಭರಮಪ್ಪ ಕಾಳಿ ವಿದ್ಯಾಶ್ರೀ ಬಿನ್ನಾಳ, ಗಂಗವ್ವ ಹೊಸಳ್ಳಿ, ಲಲಿತಾ ಸಾಲಿಮಠ ಸಿದ್ದಮ್ಮ ದೊಡ್ಡಮನಿ, ಅನ್ನಪೂರ್ಣ ಮಾದಾರ್ ಬಿಬಿಜಾನ್ ಬಡಿಗೇರ್ ರಜಿಯಾಬೇಗಂ ವಾಲಿಕಾರ್ ಹಾಗೂ ಮುಖ್ಯೋಪಾಧ್ಯಯರಾದ ಪ್ರಕಾಶ ಪಾಟೀಲ್, ಹಾಗೂ ಶಿವಕುಮಾರ ಹೊಂಬಾಳ, ಮತ್ತು ಪೂಜಾ ಹಿರೇಮಠ್ ಗ್ರಾಮದ ಗುರಿ ಹಿರಿಯರು ತಾಯಂದಿರು ಮುದ್ದು ಮಕ್ಕಳು ಪಾಲ್ಗೊಂಡಿದ್ದರು.



ಯಾದಗಿರಿ:ಜೂ.1:ಯಾದಗಿರಿ ನಗರದ ಚಿತ್ತಾಪುರ ರಸ್ತೆಯಲ್ಲಿರುವ ಸಪ್ತಪದಿ ಕನ್ವೆನ್ಷನ್ ಹಾಲ್ ಎದುರು ಭಾನುವಾರ ಮಧ್ಯಾಹ್ನ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಓರ್ವ ಮಹಿಳೆ ಗಂಭೀರವಾಗಿ ಗಾಯಗೊಂಡಿದ್ದು, ಮೂವರು ಸಣ್ಣಪುಟ್ಟ ಗಾಯಗಳೊಂದಿಗೆ ಪಾರಾಗಿದ್ದಾರೆ.

# ಮಕ್ಕಳನ್ನು ವಿಶಿಷ್ಟರೀತಿಯಾಗಿ ಸ್ವಾಗತಿಸಿ ಶಾಲೆ ಪ್ರಾರಂಬಿಸಿದ ಶಿಕ್ಷಕರು



ಮಲ್ಲಮ್ಮ ನುಡಿ ವಾರ್ತೆ

ಕಲಘಟಗಿ ತಾಲೂಕಿನಾದ್ಯಂತ ಶಾಲೆಗಳು ಪ್ರಾರಂಭವೋತ್ಸವವನ್ನು ವಿಬಿನ್ನಭಗೆಯಾಗಿ ಆಚರಿಸಿ ಮಕ್ಕಳನ್ನು ಶಿಕ್ಷಕರು ಸ್ವಾಗತಿಸಿದರು. ತಾಲೂಕಿನ ಬೀರವಳ್ಳಿ ಗ್ರಾಮದಲ್ಲಿ ಶಾಲಾ ಮುಖ್ಯೋಪಾಧ್ಯಯರಾದ ಸಿ.ಎಸ್ ಗ್ಯಾನಪ್ಪನವರ ಮತ್ತು ಸದಸ್ಯ ಮಂಡಳಿ ಹಾಗೂ ಸಹಶಿಕ್ಷಕರೊಡನೆ ತಂದೆತಾಯಿ ಜೊತೆ ಮಕ್ಕಳನ್ನು ಎತ್ತಿನ ಚಕ್ಕಡಿಯಲ್ಲಿ ಕುಳ್ಳಿರಿಸಿ ವಾದ್ಯ ಮೇಳದೊಂದಿಗೆ ಗ್ರಾಮದಲ್ಲಿ ಮೆರವಣಿಗೆ ಮೂಲಕ ಶಾಲೆಯಲ್ಲಿ ಸ್ವಾಗತಿಸಲಾಯಿತು.

ಪಿರಿಯಾಪಟ್ಟಣ : 2026 ನೇ ಸಾಲಿನ ಎಸ್ ಎಸ್ ಎಲ್ ಸಿ ಎಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ನೆನಪಿನ ಕಾಣಿಕೆ ನೀಡುವ ಮೂಲಕ ಪುರಸ್ಕರಿಸಿ ಗೌರವಿಸಲಾಯಿತು.

ದ. ಕನ್ನಡ ಜಿಲ್ಲೆಯ ಭಗವಾನ್ ಶ್ರೀ ಸತ್ಯ ಸಾಯಿ ವಿದ್ಯ ಕೇಂದ್ರ ಇಂಗ್ಲಿಷ್ ಮೀಡಿಯಂ (ಚೌಕ್ಕಡಿ) ಕಾಲೇಜ್ ಆವರಣದಲ್ಲಿ ಈ ಕಾರ್ಯಕ್ರಮ ನಡೆಯಿತು.



ವಿದ್ಯಾರ್ಥಿಗಳಾದ ವರ್ಷ ನಾಗರಾಜ್ ಚಿತ್ರ. ಕೆಜೆ ಲವನ್. ಜಿ ಕುಶಲ್. ಬಿಡಿ ನಿತಿನ್. ಟಿಎ ಲಲಿತ್ ಆದಿತ್ಯ. ಎನ್ ಚರಣ್. ಗೌತಮ್. ಎಸ್ ಕೆ ಸಾತ್ವಿಕ್. ಎಸ್ ಆರ್ ಪ್ರೀತಮ್ ಮತ್ತು ಮುಖ್ಯೋಪಾಧ್ಯರು ಹಾಗೂ ಪೋಷಕರು ಹಾಜರಿದ್ದರು.

# ಶಾಸಕ ಬಸವರಾಜ ರಾಯರೆಡ್ಡಿ ಅವರಿಗೆ ಹಿರಿತನ ಅನುಭವ ಗಮನಿಸಿ ಸಚಿವ ಸ್ಥಾನ ನೀಡಿ : ಸಿಎಂ ಈಶ್ವರ್ ಹಠಮಾಳಗಿ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಅಭಿವೃದ್ಧಿ ವಿಚಾರದಲ್ಲಿ ಇಡೀ ದೇಶಕ್ಕೆ ಮಾದರಿಯಾದ ಯಲಬುರ್ಗಾ ಕ್ಷೇತ್ರದ ಶಾಸಕ ಬಸವರಾಜ ರಾಯರೆಡ್ಡಿಯವರಿಗೆ ಪಕ್ಷದ ಹೈಕಮಾಂಡ್ ನೂತನ ಮಂತ್ರಿ ಮಂಡಲದಲ್ಲಿ ಸಚಿವ ಸ್ಥಾನ ನೀಡಬೇಕು ಎಂದು ಕಾಂಗ್ರೆಸ್ ಮುಖಂಡ ಸಿಎಂ ಈಶ್ವರ ಅಟಮಾಳಗಿ ಅವರು ಆಗ್ರಹಿಸಿದರು.

ಈ ಕುರಿತು ಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನೂತನ ಮುಖ್ಯಮಂತ್ರಿಯಾಗಲಿರುವ ಡಿ.ಕೆ ಶಿವಕುಮಾರ್ ಅವರ ಸಚಿವ ಸಂಪುಟದಲ್ಲಿ ಶಾಸಕ ಬಸವರಾಜ ರಾಯ–ರೆಡ್ಡಿ ಅವರಿಗೆ ಮಂತ್ರಿ ಸ್ಥಾನ ನೀಡಿದರೆ ರಾಜ್ಯಕ್ಕೆ ಉತ್ತಮ ಆಡಳಿತ ನೀಡುವಲ್ಲಿ ಶಾಸಕ ರಾಯರೆಡ್ಡಿ ಅವರು ನಿರ್ವಹಿಸುತ್ತಾರೆ. ಇವರನ್ನು ಅಭಿವೃದ್ಧಿ ಕೂಟದಡಿ ಪರಿಗಣಿಸಿ ಸಚಿವ ಸ್ಥಾನ ಕೊಡಬೇಕು, 1985ದಿಂದ ಇಲ್ಲಿವರೆಗೂ ಒಟ್ಟು ಆರು ಬಾರಿ ಶಾಸಕರಾಗಿ ಒಮ್ಮೆ ಸಂಸದರಾಗಿ, ದೆಹಲಿ ವಿಶೇಷ ಪ್ರತಿನಿಧಿಯಾಗಿ, ಸರ್ಕಾರವು ಪಕ್ಷದ



ವಿವಿಧ ಹುದ್ದೆಗಳನ್ನು ಸಮರ್ಥವಾಗಿ ನಿಭಾಯಿಸಿದ್ದಾರೆ, ಹಿಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸರ್ಕಾರದಲ್ಲಿ ಸಿಎಂ ಆರ್ಥಿಕ ಸಲಹೆಗಾರರಾಗಿ ಸರ್ಕಾರಕ್ಕೆ ಸಾಕಷ್ಟು ಉತ್ತಮ ಆಡಳಿತ ನಡೆಸುವಲ್ಲಿ ಶಾಸಕರ ಸಲಹೆ ನಿಜಕ್ಕೂ ಸ್ಮರಣೀಯ, ಇಂತಹ ಅನುಭವಿ, ಆಡಳಿತಗಾರ ವ್ಯಕ್ತಿಗೆ ಸಚಿವ ಸ್ಥಾನ ಕೊಟ್ಟಾಗ ಸಮರ್ಥವಾಗಿ ನಿಭಾಯಿಸಲಿದ್ದಾರೆ. ವಸತಿ ಹಾಗೂ ಉನ್ನತ ಶಿಕ್ಷಣ ಸಚಿವರಾಗಿ ಸಾಕಷ್ಟು ಜನಪರ ಕೆಲಸಗಳನ್ನು ಮಾಡಿದ್ದಾರೆ. ಇಡೀ ಯಲಬುರ್ಗಾ ಕ್ಷೇತ್ರವನ್ನು ರಾಜ್ಯವೇ ನೋಡುವಂತೆ ಬಹುದೊಡ್ಡ ಮಟ್ಟದಲ್ಲಿ ಅಭಿವೃದ್ಧಿ ಕ್ರಾಂತಿಯನ್ನು ಮಾಡಿದ್ದಾರೆ. ರೈಲ್ವೆ ಶಿಕ್ಷಣ, ಹೆದ್ದಾರಿ, ಕೆರೆ ತುಂಬಿಸುವ ಯೋಜನೆ ಮಹತ್ವದ ಕೆಲಸಗಳನ್ನು ಇವರು ಮಾಡಿದ್ದಾರೆ. ಸ್ವತಃ ಮುಖ್ಯಮಂತ್ರಿ ಸಿದ್ದರಾಮಯ್ಯನವರೇ ರಾಯರೆಡ್ಡಿ ಅವರನ್ನು ಯಾರು ಮೀರಿಸಲಾಗದು ಎಂದು ಸಾರ್ವಜನಿಕರ ಮುಂದೆ ಹೇಳಿದ್ದಾರೆ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರದ ಪಂಚ ಗ್ಯಾರಂಟಿ ಯೋಜನೆ ಯಶಸ್ವಿಗೊಳ್ಳಬೇಕಾದರೆ ರಾಯರೆಡ್ಡಿಯವರು ಪಾತ್ರ ಬಹುದೊಡ್ಡದು, ಯಾವುದೇ ಕಪ್ಪು ಚುಕ್ಕೆ ಇಲ್ಲದೆ ಆಡಳಿತ ಮಾಡುತ್ತಿರುವ ರಾಯರೆಡ್ಡಿಯವರಿಗೆ ಮಂತ್ರಿ ಸ್ಥಾನದ ಅವಕಾಶ ಕಲ್ಪಿಸಬೇಕು, ರಾಜ್ಯದ 224 ಶಾಸಕರಲ್ಲಿ ರಾಯರೆಡ್ಡಿಯವರು ಬುದ್ಧಿವಂತ ಶಾಸಕರಾಗಿದ್ದಾರೆ. ಒಟ್ಟಾರೆ ನಮ್ಮ ಶಾಸಕರಿಗೆ ಸಚಿವ ಸ್ಥಾನ ನೀಡಬೇಕೆಂದು ಮನವಿ ಮಾಡಿದರು.

# ಶಾಲಾ ಪ್ರಾರಂಭೋತ್ಸವದ ಸಂಭ್ರಮ–ಶಾಸಕ ಉಮೇಶ ಚಾಲನೆ
# ಶಿಕ್ಷಣ ಮಕ್ಕಳ ಭವಿಷ್ಯ ರೂಪಿಸುವ ಪ್ರಮುಖ ಸಾಧನ

• ಮಲ್ಲಮ್ಮ ನುಡಿ ವಾರ್ತೆಬಾಗಲಕೋಟೆ

ಶಿಕ್ಷಣ ಪ್ರತಿ ವ್ಯಕ್ತಿಯ ಜೀವನಕ್ಕೆ ಭದ್ರ ಬುನಾದಿಯಾಗಿದ್ದು, ಭವಿಷ್ಯ ರೂಪಿಸುವ ಸಾಧನವೂ ಆಗಿದೆ ಎಂದು ಶಾಸಕ ಉಮೇಶ ಮೇಟಿ ಹೇಳಿದರು.

ಜಿಲ್ಲೆಯಾದ್ಯಂತ ಸೋಮವಾರ ಪ್ರಾರಂಭವಾದ ಪ್ರಸಕ್ತ ಶೈಕ್ಷಣಿಕ ವರ್ಷದ ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮದ ಹಿನ್ನೆಲೆಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಶಾಲಾ ಶಿಕ್ಷಣ ಇಲಾಖೆ ಸಹಯೋಗದಲ್ಲಿ ತಿಮ್ಮಾಪೂರ ಹಾಗೂ ಬೇವಿನಮಟ್ಟಿ ಗ್ರಾಮಗಳಲ್ಲಿ ಹಮ್ಮಿಕೊಳ್ಳಲಾಗಿದ್ದ ಶಾಲಾ ಪ್ರಾರಂಭೋತ್ಸವ ಹಾಗೂ ದಾಖಲಾತಿ ಆಂದೋಲನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಮಕ್ಕಳಿಗೆ ಗುಣಮಟ್ಟದ ಶಿಕ್ಷಣದ ಜೊತೆಗೆ ಉತ್ತಮ ಸಂಸ್ಕಾರ, ಶಿಸ್ತು, ಸಮಯಪಾಲನೆ ಹಾಗೂ ಸಾಮಾಜಿಕ ಮೌಲ್ಯಗಳನ್ನು ಕಲಿಸುವ ಅಗತ್ಯತೆಯಿದೆ. ಈ ನಿಟ್ಟಿನಲ್ಲಿ ಶಿಕ್ಷಕರು ಮಕ್ಕಳನ್ನು ಉತ್ತಮ ಪ್ರಜೆಗಳನ್ನಾಗಿ ರೂಪಿಸಿ ಅವರ ಭವಿಷ್ಯವನ್ನು ಉಜ್ವಲಗೊಳಿಸಬೇಕು ಎಂದ ಶಾಸಕರು, ಸರಕಾರ ಶಿಕ್ಷಣ ಕ್ಷೇತ್ರ–ಕ್ಕೆ ವಿಶೇಷ ಆದ್ಯತೆ ನೀಡಿ ಹಲವಾರು ಕಾರ್ಯಕ್ರಮ ಮತ್ತು ಯೋಜನೆಗಳನ್ನು ಜಾರಿಗೊಳಿಸಿ ಮಕ್ಕಳು ಹಾಗೂ ಪಾಲಕರಿಗೆ ಯಾವ ತೊಂದರೆಯೂ ಆಗದಂತೆ ನೋಡಿಕೊಳ್ಳುತ್ತಿದೆ. ಇದರ ಪ್ರಯೋಜನವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಹೇಳಿದರು. ಪಾಲಕರು ತಮ್ಮ ಮಕ್ಕಳನ್ನು ಸರಕಾರಿ ಶಾಲೆಗಳಿಗೆ ದಾಖಲಿಸಿ ಯೋಜನೆಗಳ ಲಾಭ ದೊರಕಿಸಿಕೊಡಬೇಕು. ಶಾಲೆಗಳ ಅಭಿವೃದ್ಧಿಗೆ ಸಮಾಜವೂ ಕೈಜೋಡಿಸಬೇಕು ಎಂದ ಉಮೇಶ ಮೇಟಿ, ಬೇವಿನಮಟ್ಟಿ ಶಾಲೆಗೆ ಶಾಸಕರ ಅನುದಾನದಡಿ ಹೆಚ್ಚುವರಿಯಾಗಿ 2 ಕೊಠಡಿ ನಿರ್ಮಾಣ ಮಾಡಲಾಗುವುದು ಎಂದು ಹೇಳಿದರು.



ಇದೇ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಸಾಂಕೇತಿಕವಾಗಿ ಸಮವಸ್ತ್ರ ಹಾಗೂ ಪಠ್ಯಪುಸ್ತಕಗಳನ್ನು ವಿತರಿಸಿದರಲ್ಲದೇ, ಸ್ಮಾರ್ಟಕ್ಲಾಸ್‌ಗೆ ಚಾಲನೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾಧಿಕಾರಿ ಸಂಗಪ್ಪ ಮಾತನಾಡಿ, ಶಾಲೆಗಳು ಕೇವಲ ಪಾಠ ಪುಸ್ತಕಗಳ ಜ್ಞಾನವಲ್ಲ. ಜೀವನದ ಮೌಲ್ಯಗಳನ್ನು ಕಲಿಸುತ್ತವೆ. ಶಾಲೆಯ ಪರಿಸರ ಸರಳತೆ, ಸಹನೆ ಶಿಸ್ತನ್ನು ಬೆಳೆಸುತ್ತದೆ. ಸರ್ಕಾರಿ ಶಾಲೆಗಳು ದೇಶದ ಸಾಮಾನ್ಯ ಜನರ ಕನಸುಗಳಿಗೆ ಬುನಾದಿ ಹಾಕುತ್ತವೆ ಎಂದು ಹೇಳಿ, ಬೇವಿನಮಟ್ಟಿ ಶಾಲೆಯ ಅಭಿವೃದ್ಧಿ ಕಾರ್ಯಗಳಿಗಾಗಿ ವೈಯಕ್ತಿಕವಾಗಿ 10 ಸಾವಿರ ರೂ.ಗಳನ್ನು ಎಸ್.ಡಿ.ಎಂಸಿ ಖಾತೆಗೆ ಜಮೆ ಮಾಡುವುದಾಗಿ ತಿಳಿಸಿದರು.

ತಿಮ್ಮಾಪೂರ ಕಾರ್ಯಕ್ರಮದಲ್ಲಿ ಜಿ.ಪಂ ಮಾಜಿ ಅಧ್ಯಕ್ಷ ಬಸವಂತಪ್ಪ ಮೇಟಿ, ಪಿಕೆಪಿಎಸ್ ಅಧ್ಯಕ್ಷ ಮುತ್ತಪ್ಪ ಹುಗ್ಗಿ, ಗ್ರಾ.ಪಂ ಸದಸ್ಯರಾದ ಸಂಗನಗೌಡ ಪಾಟೀಲ, ಮಲ್ಲಪ್ಪ ಹಂಚಿನಾಳ, ಗ್ಯಾನಪ್ಪ ತುಂಬರಮಟ್ಟಿ, ಎಸ್.ಡಿ.ಎಂಸಿ ಸದಸ್ಯ ಮಹಾದೇವಪ್ಪ ಕುಂಬಾರ ಮತ್ತಿತರರು ಇದ್ದರು. ಬೇವಿನಮಟ್ಟಿ ಕಾರ್ಯಕ್ರಮದಲ್ಲಿ ಶಾಲಾ ಶಿಕ್ಷಣ ಇಲಾಖೆಯ ಉಪ ಸಮನ್ವಯಾಧಿಕಾರಿ ಪ್ರಮೋದಿನಿ ಬಳೋಲಮಟ್ಟಿ, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಸುಭಾಷ ಸಂಪಗಾವಿ, ಪ್ರೌಢಶಾಲಾ ವಿಭಾಗದ ಮುಖ್ಯೋಪಾಧ್ಯಾಯನಿ ಲಕ್ಷ್ಮೀದೇವಿ ಮುಂಡವಾಡಿ, ಪ್ರಾಥಮಿಕ ವಿಭಾಗದ ಮುಖ್ಯಗುರು ಎಂ.ಪಿ.ಕುದರಿ, ಬಿ.ಆರ್.ಸಿ ಸಿ.ವೈ.ಸಂಗಮ, ದೈಹಿಕ ಶಿಕ್ಷಣ ಅಧಿಕಾರಿ ಆರ್.ಆರ್.ಪಾಟೀಲ, ಮುಖಂಡರಾದ ದ್ಯಾಮಣ್ಣ ಗಾಳಿ, ನಾಗರಾಜ ಹದ್ಲಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಕಾರ್ಯಕ್ರಮಕ್ಕೂ ಪೂರ್ವದಲ್ಲಿ ತಿಮ್ಮಾಪೂರ ಗ್ರಾಮದಲ್ಲಿ ಶಾಸಕ ಉಮೇಶ ಮೇಟಿ ಮೊದಲ ದಿನ ಶಾಲೆಗೆ ಆಗಮಿಸಿದ ವಿದ್ಯಾರ್ಥಿಗಳಿಗೆ ಶುಭಾಶಯ ಕೋರಿ, ಸಿಹಿ ಹಂಚಿದರು. ಬೇವಿನಮಟ್ಟಿ ಗ್ರಾಮದಲ್ಲಿ ಚಕ್ಕಡಿಯಲ್ಲಿ ಶಾಸಕರು ಹಾಗೂ ಇತರೆ ಗಣ್ಯಮಾನ್ಯರನ್ನು ಮೆರವಣಿಗೆ ಕರೆತಂದು ಆರತಿ ಮಾಡುವ ಮೂಲಕ ವೇದಿಕೆಗೆ ಬರಮಾಡಿಕೊಳ್ಳಲಾಯಿತು.

## ಡಾ.ಫ.ಗು.ಹಳಕಟ್ಟಿ ಟ್ರಸ್ಟ್ ತಾಲೂಕಾ ಘಟಕ ಅಸ್ತಿತ್ವಕ್ಕೆ ಚವಡಾಪೂರ ಅಧ್ಯಕ್ಷ, ತಿಪ್ಪಶೆಟ್ಟಿ ಕಾರ್ಯದರ್ಶಿ

• ಮಲ್ಲಮ್ಮ ನುಡಿ ವಾರ್ತೆಬಾಗಲಕೋಟೆ

ಡಾ.ಫ.ಗು. ಹಳಕಟ್ಟಿ ರಾಷ್ಟ್ರೀಯ ಟ್ರಸ್ಟ್ ನ ಬಾಗಲಕೋಟ ತಾಲೂಕಾ ಘಟಕ ಅಸ್ತಿತ್ವಕ್ಕೆ ಬಂದಿದೆ.

ಆಧ್ಯಾತ್ಮಿಕ ಚಿಂತಕ ಪ್ರದೀಪ ಗುರೂಜಿ ತಾಲ್ಲೂಕು ಘಟಕದ ಗೌರವಾಧ್ಯಕ್ಷರಾಗಿದ್ದು, ಶಂಕರಪ್ಪ ಚವಡಾಪೂರ ಅಧ್ಯಕ್ಷ, ಬಸವರಾಜ ತಿಪ್ಪಶೆಟ್ಟಿ ಕಾರ್ಯದರ್ಶಿ, ಎಂ.ಎಲ್.ಶಾಂತಗೇರಿ ಗೌರವ ಕಾರ್ಯದರ್ಶಿ ಹಾಗೂ ಸುರೇಶ ಉಕ್ಕಲಿ ಖಜಾಂಚಿಯಾಗಿರುತ್ತಾರೆ. ಎಂ.ಎಂ.ಜಿಗಜಿನ್ನಿ, ಪಿ.ಆರ್.ಪಾವಟೆ, ಪ್ರಕಾಶ ಬಾಳಕ್ಕನವರ, ಎಂ.ಎಸ್.ಹೊಸಮನಿ, ಶಿವರುದ್ರಪ್ಪ ಹೊಸಕೋಟೆ, ರುದ್ರಪ್ಪ ಮ್ಯಾಗಿನಹಳ್ಳಿ ಸದಸ್ಯರಾಗಿದ್ದಾರೆ. ಎ.ಎಸ್.ಪಾವಟೆ, ಎಸ್.ಎಸ್.ಅನಾಮಿ, ಹೆಚ್.ಜಿ.ಮಿರ್ಜಿ, ಪ್ರಕಾಶ ಹಿತ್ತಲಮನಿ, ಸಿದ್ದಣ್ಣ ಬಿರಾದಾರ ಸಲಹಾ ಸಮಿತಿ ಸದಸ್ಯರಾಗಿದ್ದಾರೆ ಎಂದು ಘಟಕದ ಅಧ್ಯಕ್ಷ ಶಂಕರಪ್ಪ ಚವಡಾಪುರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತಿಮ್ಮಾಪೂರಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡಲು ಆಗ್ರಹ



• ಮಲ್ಲಮ್ಮ ನುಡಿ ವಾರ್ತೆಬಾಗಲಕೋಟೆ

–ಕಾಂಗ್ರೆಸ್ ಪಕ್ಷದ ಹಿರಿಯ ನಾಯಕ, ಜಿಲ್ಲಾ ಉಸ್ತುವಾರಿ ಸಚಿವರಾಗಿ ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿರುವ ಆರ್.ಬಿ.ತಿಮ್ಮಾಪುರ ಅವರಿಗೆ ನೂತನ ಸರ್ಕಾರದಲ್ಲಿ ಉಪಮುಖ್ಯಮಂತ್ರಿ ಸ್ಥಾನ ಹಾಗೂ ಉನ್ನತ ಖಾತೆಯನ್ನು ನೀಡಬೇಕೆಂದು ಕಾಂಗ್ರೆಸ್ ಮುಖಂಡ ಅಶೋಕ ರೇವಡಿ ಆಗ್ರಹಿಸಿದ್ದಾರೆ.

ಸೋಮವಾರ ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆರ್.ಬಿ.ತಿಮ್ಮಾಪುರ ಹಿಂದುಳಿದ ಹಾಗೂ ದಲಿತ ಸಮುದಾಯದ ಪ್ರಮುಖ ನಾಯಕರಾಗಿ ಬೆಳೆದಿದ್ದಾರೆ. ಕೇವಲ ಸ್ವಂತ ಏಳಿಗೆಯನ್ನು ಬಯಸದೆ, ಹಿಂದುಳಿದ ವರ್ಗಗಳ ಅಭಿವೃದ್ಧಿಗಾಗಿ ಶ್ರಮಿಸಿದ್ದಾರೆ. ಕಳೆದ 20 ವರ್ಷಗಳ ಸುದೀರ್ಘ ರಾಜಕೀಯ ಜೀವನದಲ್ಲಿ ಅವಕಾಶಗಳು ಸಿಕ್ಕಾಗಲೂ ಮತ್ತು ಸಿಗದಿದ್ದಾಗಲೂ ಪಕ್ಷದ ತತ್ವ ಸಿದ್ಧಾಂತಗಳಿಗೆ ಬದ್ಧರಾಗಿ ಕೆಲಸ ಮಾಡಿದ್ದಾರೆ ಎಂದು ಹೇಳಿದರು.

ತಿಮ್ಮಾಪೂರ ಅವರಿಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡುವಂತೆ ಪಕ್ಷದ ನಾಯಕರಾದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿ, ಸೋನಿಯಾ ಗಾಂಧಿ, ಪ್ರಿಯಾಂಕಾ ಗಾಂಧಿ, ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ಅವರಿಗೆ ಮನವಿ ಮಾಡಿಕೊಂಡಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಕಲ್ಮೇಶ ಸಾರವಾಡ, ಸಂಗಮೇಶ ಇಟ್ಟನವರ್, ಮಂಜುನಾಥ ಮಾಚಕನೂರ, ಮುದಕಣ್ಣ ಅಂಬಿಗೇರ, ಚಿನ್ನು ಅಂಬಿ ಮತ್ತಿತರರು ಇದ್ದರು.



ಪಿರಿಯಾಪಟ್ಟಣ : 2026 ನೇ ಸಾಲಿನ ಎಸ್ ಎಸ್ ಎಲ್ ಸಿ ಎಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ನೆನಪಿನ ಕಾಣಿಕೆ ನೀಡುವ ಮೂಲಕ ಪುರಸ್ಕರಿಸಿ ಗೌರವಿಸಲಾಯಿತು.ವಿದ್ಯಾರ್ಥಿಗಳಾದ ವರ್ಷ ನಾಗರಾಜ್ ಚಿತ್ರ. ಕೆಜೆ ಲವನ್. ಜಿ ಕುಶಲ್. ಬಿಡಿ ನಿತಿನ್. ಟಿಎ ಲಲಿತ್ ಆದಿತ್ಯ. ಎನ್ ಚರಣ್. ಗೌತಮ್. ಎಸ್ ಕೆ ಸಾತ್ವಿಕ್. ಎಸ್ ಆರ್ ಪ್ರೀತಮ್ ಮತ್ತು ಮುಖ್ಯೋಪಾಧ್ಯರು ಹಾಗೂ ಪೋಷಕರು ಹಾಜರಿದ್ದರು

## ಕಮಕನೂರ ಅವರನ್ನು ಪೂರ್ಣ ಅವಧಿಗೆ ಆಯ್ಕೆ ಮಾಡಿ

• ಮಲ್ಲಮ್ಮ ನುಡಿ ವಾರ್ತೆಬಾಗಲಕೋಟೆ

ಕರ್ನಾಟಕ ರಾಜ್ಯ ಅಂಬಿಗ, ಕೋಲಿ, ಕಬ್ಬಲಿಗ ಸಮುದಾಯದ ಮುಖಂಡರಿಗೆ ಮುಂಬರುವ ವಿಧಾನ ಪರಿಷತ್ ಚುನಾವಣೆಯಲ್ಲಿ ಪೂರ್ಣ ಪ್ರಮಾಣದ ಆರು ವರ್ಷಗಳ ಅವಧಿಗೆ ಅವಕಾಶ ನೀಡಬೇಕು ಎಂದು ಸಮುದಾಯದ ಮುಖಂಡರು ಕಾಂಗ್ರೆಸ್ ಹೈಕಮಾಂಡ್ ಹಾಗೂ ರಾಜ್ಯ ನಾಯಕರನ್ನು ಒತ್ತಾಯಿಸಿದ್ದಾರೆ. ಸೋಮವಾರ ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅಖಿಲ ಕರ್ನಾಟಕ ಬೆಸ್ತರ, ಕೋಲಿ, ಅಂಬಿಗರ ಜಾತಿ ಮೀಸಲಾತಿ ಹೋರಾಟ ಸಮಿತಿಯ ರಾಜ್ಯಾಧ್ಯಕ್ಷ ಯಮನಪ್ಪ ಮಡಿಕೇರ, ನಮ್ಮ ಸಮುದಾಯದ ನಾಯಕರಿಗೆ ಕೇವಲ ಎರಡು ವರ್ಷ ಅಥವಾ ಅತ್ಯಂತ ಅಲ್ಪಾವಧಿಗೆ ಮಾತ್ರ ವಿಧಾನ ಪರಿಷತ್ ಸ್ಥಾನ ನೀಡಲಾಗಿತ್ತು. ಇದರಿಂದಾಗಿ ನಮ್ಮ ಸಮುದಾಯಕ್ಕೆ ಸಿಗಬೇಕಾದ ನಿಜವಾದ ರಾಜಕೀಯ ಸ್ಥಾನಮಾನ ಮತ್ತು ಹಕ್ಕುಗಳು ಸಮರ್ಪಕವಾಗಿ ಸಿಕ್ಕಿಲ್ಲ. ಈ ಬಾರಿ ಅಂತಹ ತಪ್ಪು ಮರುಕಳಿಸಬಾರದು. ಆ ಹಿನ್ನೆಲೆಯಲ್ಲಿ ಪೂರ್ಣ ಪ್ರಮಾಣದ 6 ವರ್ಷಗಳ ಅವಧಿಗೆ ವಿಧಾನ ಪರಿಷತ್ ಸದಸ್ಯ ತಿಪ್ಪಣ್ಣಪ್ಪ ಕಮಕನೂರ ಅವರನ್ನು ಪೂರ್ಣ ಪ್ರಮಾಣದ 6 ವರ್ಷಗಳ ಅವಧಿಗೆ ಆಯ್ಕೆ ಮಾಡಬೇಕು ಎಂದು ಆಗ್ರಹಿಸಿದರು. ಹೈದರಾಬಾದ್ ಕರ್ನಾಟಕ (ಕಲ್ಯಾಣ ಕರ್ನಾಟಕ), ಮುಂಬೈ ಕರ್ನಾಟಕ (ಕಿತ್ತೂರು ಕರ್ನಾಟಕ), ಕರಾವಳಿ ಹಾಗೂ ಮೈಸೂರು ಭಾಗ ಸೇರಿದಂತೆ ಇಡೀ ರಾಜ್ಯಾದ್ಯಂತ ಇರುವ ಅಂಬಿಗ ಮತ್ತು




ಕೋಲಿ ಸಮಾಜವು ಸದಾ ಕಾಂಗ್ರೆಸ್ ಪಕ್ಷದೊಂದಿಗೆ ಭದ್ರವಾಗಿ ಗುರುತಿಸಿಕೊಂಡು ಬಂದಿದೆ. ಪಕ್ಷದ ಏಳಿಗೆಗಾಗಿ ನಿರಂತರವಾಗಿ ಶ್ರಮಿಸುತ್ತಿದೆ ಎಂದರು.

ಮುಖಂಡ ಮುದಕಣ್ಣ ಅಂಬಿಗೇರ ಮಾತನಾಡಿ, ನಮ್ಮ ಸಮುದಾಯವು ಆರ್ಥಿಕವಾಗಿ, ಸಾಮಾಜಿಕವಾಗಿ ಮತ್ತು ಶೈಕ್ಷಣಿಕವಾಗಿ ಅತ್ಯಂತ ಹಿಂದುಳಿದಿದೆ. ಇಂದಿಗೂ ಸಮಾಜದಲ್ಲಿ ಬಡತನ ಹೆಚ್ಚಾಗಿದೆ. ಆರ್ಥಿಕ ಪರಿಸ್ಥಿತಿ ಉತ್ತಮವಾಗಿಲ್ಲದ ಕಾರಣ ನಮ್ಮ ಸಮಾಜದ ನಾಯಕರಿಗೆ ನೇರವಾಗಿ ವಿಧಾನಸಭೆ ಚುನಾವಣೆಗೆ ಸ್ಪರ್ಧಿಸಿ, ಅಷ್ಟೊಂದು ಹಣಕಾಸು ವೆಚ್ಚ ಮಾಡಿ ಶಾಸಕರಾಗುವ ಶಕ್ತಿ ಇಲ್ಲ. ಹೀಗಾಗಿ ನಮ್ಮ ಸಮುದಾಯವನ್ನು ರಾಜಕೀಯವಾಗಿ ಮುಂಚೂಣಿಗೆ ತರಲು ಕಾಂಗ್ರೆಸ್ ಪಕ್ಷವು ವಿಧಾನ ಪರಿಷತ್ ಸ್ಥಾನ ನೀಡುವ ಮೂಲಕ ನಮಗೆ ಶಕ್ತಿ ತುಂಬಬೇಕು ಎಂದು ಹೇಳಿದರು. 2022–23ನೇ ಸಾಲಿನಲ್ಲಿ ಹಿಂದಿನ ಸರ್ಕಾರ ನಿಗಮಕ್ಕೆ ಕೇವಲ 25 ಕೋಟಿ ರೂಪಾಯಿಗಳ ಅನುದಾನವನ್ನು ಮಾತ್ರ ಬಿಡುಗಡೆ ಮಾಡಿತ್ತು. ಸಮಾಜದ ಜನಸಂಖ್ಯೆ ಹಾಗೂ ಅಗತ್ಯತೆಗಳಿಗೆ ಹೋಲಿಸಿದರೆ ಈ ಮೊತ್ತ ತೀರಾ ಕಡಿಮೆಯಾಗಿದೆ. ನಿಗಮದ ಯೋಜನೆಗಳು ಪ್ರತಿಯೊಬ್ಬ ಅರ್ಹ ಫಲಾನುಭವಿಗೆ ತಲುಪಬೇಕಾದರೆ ಅನುದಾನದ ಪ್ರಮಾಣವನ್ನು ಹೆಚ್ಚಿಸಬೇಕು ಎಂದರು.

ಸುದ್ದಿಗೋಷ್ಠಿಯಲ್ಲಿ ದೇವರಾಯಪ್ಪ ಮೂಲಿಮನಿ, ಸಂಗಮೇಶ ಕರಬಂದ, ಅಜಿತ ಗಣೇಕಲ್, ಪರಶುರಾಮ ರೋಣದ, ಮುತ್ತಣ್ಣ ಬಾರಕೇರ, ರಮೇಶ ಪಡಸಲಗಿ ಮತ್ತಿತರರು ಇದ್ದರು.

## ವಿಶ್ವ ತಂಬಾಕು ರಹಿತ ದಿನಾಚರಣೆ : ಜಾಗೃತಿ ಜಾಥಾ

• ಮಲ್ಲಮ್ಮ ನುಡಿ ವಾರ್ತೆಬಾಗಲಕೋಟೆ

ಬಾಗಲಕೋಟೆ,1–ವಿಶ್ವ ತಂಬಾಕು ರಹಿತ ದಿನಾಚರಣೆಯ ಅಂಗವಾಗಿ ಹಮ್ಮಿಕೊಂಡ ಜಾಗೃತಿ ಜಾಥಾಕ್ಕೆ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಚಂದ್ರಶೇಖರ ದಿಡ್ಡಿ ಚಾಲನೆ ನೀಡಿದರು. ಜಿಲ್ಲಾಆಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸರ್ವೇಕ್ಷಣಾ ಘಟಕ ಹಾಗೂ ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಸಹಯೋಗದಲ್ಲಿ ರವಿವಾರ ಹಮ್ಮಿಕೊಂಡ ಈ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ತಂಬಾಕು ಸೇವನೆಯಿಂದ ಆಗುವ ದುಷ್ಪರಿಣಾಮದ ಬಗ್ಗೆ ಪ್ರತಿಯೊಬ್ಬರಲ್ಲೂ ಅರಿವು ಮೂಡಿಸಬೇಕು ಎಂದರು. ಮಧ್ಯ ವಯಸ್ಕರಿಗೆ ಸೀಮಿತವಾಗಿದ್ದ ತಂಬಾಕು ಸೇವನೆಯಿಂದ ಪ್ರಸ್ತುತ ದಿನಗಳಲ್ಲಿ 13–14 ವರ್ಷದ ಮಕ್ಕಳು ಕೂಡ ಈ ಚಟಕ್ಕೆ ಒಳಗಾಗುತ್ತಿರುವುದು ಆಘಾತಕಾರಿ ವಿಷಯವಾಗಿದೆ. ಮಕ್ಕಳು ಬೇಗನೆ ದುಶ್ಚಟಗಳಿಗೆ ಒಳಗಾಗುತ್ತಿದ್ದಾರೆ. ಶಾಲಾ ಕಾಲೇಜಿನ ಮಕ್ಕಳಿಗೂ ಇದರ ಬಗ್ಗೆ ಅರಿವು ಮೂಡಿಸಬೇಕಿದೆ. ಈ ವರ್ಷದ ಘೋಷವಾಕ್ಯ 'ಆಕರ್ಷಕ ಉತ್ಪನ್ನಗಳು, ಕರಾಳ ಉದ್ದೇಶಗಳು ಎಂಬುದಾಗಿದೆ. ಸಾರ್ವಜನಕರು ದುಶ್ಚಟಗಳಿಂದ ಹೊರಬಂದು ಕುಟುಂಬದ ಪೋಷಣೆ ಕಡೆ ಗಮನಹರಿಸಿ ಉತ್ತಮ ಜೀವನ ನಡೆಸುವಂತೆ ಮಾಡುವುದೇ ಈ ಕಾರ್ಯಕ್ರಮದ ಧ್ಯೇಯವಾಗಿದೆ ಎಂದು ಅವರು ಹೇಳಿದರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ



ಡಾ.ಮಂಜುನಾಥ ಮಾತನಾಡಿ, ತಂಬಾಕಿನಲ್ಲಿರುವ ನಿಕೋಟಿನ್ ಅಂಶವು ಮತ್ತೆ ಮತ್ತೆ ತಂಬಾಕು ಬಳಸಲು ಜನರನ್ನು ಪ್ರೇರೆಪಿಸುತ್ತದೆ. ಪುರುಷರಲ್ಲಿ ತಂಬಾಕು ಸೇವನೆ ಸಾಮಾನ್ಯ. ಆದರೆ ಇತ್ತೀಚಿನ ದಿನಗಳಲ್ಲಿ ಹೆಣ್ಣುಮಕ್ಕಳು ಸಹ ತಂಬಾಕು ಸೇವನೆಯಂತಹ ದುಶ್ಚಟಗಳಿಗೆ ಬಲಿಯಾಗುತ್ತಿರುವುದು ವಿಷಾಧನೀಯ ಸಂಗತಿಯಾಗಿದೆ. ತಂಬಾಕು ಸೇವನೆಯ ದುಶ್ಚಟಗಳಿಂದಾಗುವ ನಿರಂತರ ಆರೋಗ್ಯದ ಸಮಸ್ಯೆಗಳ ಬಗ್ಗೆ ನಾಗರಿಕರಲ್ಲಿ ಅರಿವು ಮೂಡಿಸಿ ತಂಬಾಕು ಸೇವನೆಯನ್ನು ತಡೆಯುವುದೇ ಜಾಥಾದ ಉದ್ದೇಶವಾಗಿದೆ ಎಂದು ತಿಳಿಸಿದರು.

ಜಾಗೃತಿ ಜಾಥಾ ಜಿಲ್ಲಾ ಆಸ್ಪತ್ರೆಯಿಂದ ಪ್ರಾರಂಭವಾಗಿ ನಗರದ ನಾನಾ ಕಡೆ ಸಂಚರಿಸಿ ಎಲ್ಐಸಿ ವೃತ್ತಕ್ಕೆ ಮುಕ್ತಾಯಗೊಂಡಿತು. ಜಾಥಾದಲ್ಲಿ ಜಿಲ್ಲಾ ಶಸ್ತ್ರಚಿಕಿತ್ಸಕರಾದ ಡಾ.ಮಹೇಶ ಕೋಣಿ, ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.ದಯಾನಂದ ಕರೆನ್ನವರ, ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿ ಡಾ.ಸುವರ್ಣ ಕುಲಕರ್ಣಿ, ಕುಟುಂಬ ಕಲ್ಯಾಣ ಅಧಿಕಾರಿ ಡಿ.ಬಿ.ಪಟ್ಟಣಶೆಟ್ಟಿ, ಡಾ.ಕುಸುಮಾ ಮಾಗಿ, ಜಿಲ್ಲಾ ತಂಬಾಕು ಸಲಹೆಗಾರ ಶಶಿಕುಮಾರ ಕುಮಟಳ್ಳಿ ಸೇರಿದಂತೆ ಜಿಲ್ಲಾ ಸಮೀಕ್ಷಣಾಧಿಕಾರಿಗಳ ಕಾರ್ಯಾಲಯದ ಸಿಬ್ಬಂದಿ, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

## ಡೈರಿ ಉದ್ಯಮಕ್ಕೆ ಬೆಂಬಲ, ಹಾಲಿನ ಮಹತ್ವದ ಬಗ್ಗೆ ಅರಿವು 'ವಿಶ್ವ ಹಾಲು ದಿನ'ದ ಪ್ರಾಮುಖ್ಯತೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಡೈರಿ ಉದ್ಯಮಕ್ಕೆ ಸಂಬಂಧಿಸಿದ ಉಪಕ್ರಮಗಳ ಬಗ್ಗೆ ಅರಿವು ಮೂಡಿಸುವುದು ಮತ್ತು ಬೆಂಬಲಿಸುವುದು 'ವಿಶ್ವ ಹಾಲು ದಿನ'ದ ಪ್ರಾಮುಖ್ಯತೆ ಆಗಿದೆ ಎಂದು ರಾಯಚೂರು, ಬಳ್ಳಾರಿ, ಕೊಪ್ಪಳ ಮತ್ತು ವಿಜಯನಗರ ಜಿಲ್ಲಾ ಸಹಕಾರ ಹಾಲು ಒಕ್ಕೂಟದ ಉಪಾಧ್ಯಕ್ಷ ಎನ್.ಸತ್ಯನಾರಾಯಣ ಅವರು ಹೇಳಿದರು.

ನಗರದ ಬಳ್ಳಾರಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಕೇಂದ್ರದ (ಬಿ.ಎಂ.ಸಿ.ಆರ್.ಸಿ) ಬಿ.ಸಿ.ರಾಯ್ ಸಭಾಂಗಣದಲ್ಲಿ ರಾಯಚೂರು, ಬಳ್ಳಾರಿ, ಕೊಪ್ಪಳ ಮತ್ತು ವಿಜಯನಗರ ಜಿಲ್ಲಾ ಸಹಕಾರ ಹಾಲು ಒಕ್ಕೂಟದ ವತಿಯಿಂದ ಸೋಮವಾರ ಹಮ್ಮಿಕೊಳ್ಳಲಾಗಿದ್ದ 'ವಿಶ್ವ ಹಾಲು ದಿನಾಚರಣೆ' ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.



ಜಾಗತಿಕ ಆಹಾರವಾಗಿ ಹಾಲಿನ ಪ್ರಾಮುಖ್ಯತೆಯನ್ನು ಗುರುತಿಸಲು ವಿಶ್ವ ಸಂಸ್ಥೆಯ ಆಹಾರ ಮತ್ತು ಕೃಷಿ ಸಂಸ್ಥೆಯು (ಎಫ್.ಎ.ಓ) 2001 ರಿಂದ ಪ್ರತಿ ವರ್ಷ ಜೂನ್ 1 ರಂದು ವಿಶ್ವ ಹಾಲು ದಿನಾಚರಣೆಯನ್ನು ಆಚರಿಸಲು ಪ್ರಾರಂಭಿಸಿತು ಎಂದು ಅವರು ತಿಳಿಸಿದರು.

ಕೆ.ಎಂ.ಎಫ್ (ಕಹಾಮ) ಬೆಂಗಳೂರು ಉತ್ಪಾದನಾ ವಿಭಾಗದ ನಿರ್ದೇಶಕ ಬಿ.ಆರ್.ಪ್ರಭುಶಂಕರ ಅವರು ಮಾತನಾಡಿ, ಕರ್ನಾಟಕ ರಾಜ್ಯದಿಂದ ಪ್ರತಿದಿನ ಬರೋಬ್ಬರಿ ಒಂದು ಕೋಟಿ ಹನ್ನೊಂದು ಲಕ್ಷ ಲೀಟರ್ ಗುಣಮಟ್ಟದ ಹಾಲನ್ನು ಶೇಖರಿಸಿ ಗ್ರಾಹಕರಿಗೆ ಯಶಸ್ವಿಯಾಗಿ ಸರಬರಾಜು ಮಾಡಲಾಗುತ್ತಿದೆ. ಈ ಮೂಲಕ ಭಾರತದಲ್ಲಿಯೇ ಅತಿ ಹೆಚ್ಚು ಹಾಲು ಸಂಗ್ರಹಣೆ ಮಾಡುವ ಎರಡನೇ ದೊಡ್ಡ ರಾಜ್ಯವಾಗಿ ಕರ್ನಾಟಕ ಹೊರಹೊಮ್ಮಿದೆ ಎಂದು ತಿಳಿಸಿದರು.

ಒಕ್ಕೂಟದ ಪ್ರಭಾರ ವ್ಯವಸ್ಥಾಪಕ ಎಸ್.ವೆಂಕಟೇಶ ಗೌಡ ಅವರು ಮಾತನಾಡಿ, ಮಾನವನ ಜೀವನದಲ್ಲಿ ಹಾಲಿನ ಅಗತ್ಯ ಮತ್ತು ಪ್ರಾಮುಖ್ಯತೆಯ ಬಗ್ಗೆ ಮಾಹಿತಿ ನೀಡುವುದು ಹಾಗೂ ಹಾಲು ಮತ್ತು ಹಾಲಿನ ಉತ್ಪನ್ನಗಳಲ್ಲಿರುವ ಕ್ಯಾಲ್ಸಿಯಂ, ಪ್ರೋಟೀನ್, ವಿಟಮಿನ್–ಬಿ2 ನಂತಹ ಪೋಷಕಾಂಶಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವುದೇ ವಿಶ್ವ ಹಾಲು ದಿನಾಚರಣೆಯ ಮುಖ್ಯ ಉದ್ದೇಶ ಎಂದು ಹೇಳಿದರು.

ಒಕ್ಕೂಟದ ನಿರ್ದೇಶಕ ಜಿ.ಕೃಷ್ಣರೆಡ್ಡಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಗ್ರಾಮೀಣ ಮಟ್ಟದಲ್ಲಿ ರೈತರಿಂದಲೇ ಹಾಲು ಉತ್ಪಾದಕರ ಸಹಕಾರ ಸಂಘಗಳ ಮೂಲಕ ಗುಣಮಟ್ಟದ ಹಾಲನ್ನು ಶೇಖರಿಸಿ, ಬಿ.ಎಂ.ಸಿ ಕೇಂದ್ರಗಳಲ್ಲಿ ಶೈಥೀಕರಿಸಿ ಒಕ್ಕೂಟಕ್ಕೆ ಸರಬರಾಜು ಮಾಡಲಾಗುತ್ತಿದೆ ಎಂದು ವಿವರಿಸಿದರು.

ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕ ಎಸ್.ಸುದರ್ಶನ ರೆಡ್ಡಿ ಅವರು ನಂದಿನಿ ಹಾಲು ಮತ್ತು ಹಾಲಿನ ಉತ್ಪನ್ನಗಳ ಮಹತ್ವ ಹಾಗೂ ಸಮತೋಲಿತ ಆಹಾರದಲ್ಲಿರುವ ಪೋಷಕಾಂಶಗಳು ಆರೋಗ್ಯಕ್ಕೆ ಹೇಗೆ ಸಹಕಾರಿ ಎಂಬುದನ್ನು ಸವಿಸ್ತಾರವಾಗಿ ವಿವರಿಸಿದರು.

ಕಾರ್ಯಕ್ರಮದಲ್ಲಿ ಒಕ್ಕೂಟದ ಉಪ ವ್ಯವಸ್ಥಾಪಕ(ಗು.ನಿ) ಟಿ. ಮಲ್ಲಿಕಾರ್ಜುನ, ಮಾರುಕಟ್ಟೆ ಸಹಾಯಕರಾದ ಲೋಹಿತಕುಮಾರ, ಪ್ರಸನ್ನ ಕುಮಾರ, ಕೆಮಿಸ್ಟ್ ಕೆ.ಸರೋಜಾ, ಸಿ.ಎನ್.ಮಂಜುನಾಥ, ಬಾಬು, ಬಿ.ಎಂ.ಸಿ.ಆರ್.ಸಿ ಪ್ರಾಧ್ಯಾಪಕ ಡಾ.ರಮೇಶ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಸರ್ಕಾರಿ ಶುಶ್ರೂಷಕ ವಿದ್ಯಾಲಯದ ಉಪನ್ಯಾಸಕರಾದ ನಂದಿನಿ ಸ್ವಾಗತಿಸಿದರು. ಒಕ್ಕೂಟದ ಉಪ ವ್ಯವಸ್ಥಾಪಕ ಟಿ.ಮಲ್ಲಿಕಾರ್ಜುನ ವಂದನಾರ್ಪಣೆ ಮಾಡಿದರು. ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ನಂದಿನಿ ಸುವಾಸಿತ ಹಾಲು ವಿತರಿಸಲಾಯಿತು.

# ಮಳೆಗಾಲ ಪ್ರಾರಂಭವಾಗುತ್ತಿರುವುದರಿಂದ ಸೊಳ್ಳೆಗಳಿಂದ ಬರುವ ರೋಗಗಳ ವಿರುದ್ಧ ಮುನ್ನೆಚ್ಚರಿಕೆ ವಹಿಸಿ:ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ

- **ಮಲ್ಲಮ್ಮ ನುಡಿ ವಾರ್ತೆ ಬೀದರ**

ಜೂ.01: ಮಳೆಗಾಲವು ಪ್ರಾರಂಭವಾಗುತ್ತಿರುವುದರಿಂದ ಪರಿಸರದಲ್ಲಿ ನೀರು ನಿಂತು ಸೊಳ್ಳೆಗಳ ಉತ್ಪತ್ತಿ ಹೆಚ್ಚಾಗುವ ಸಾಧ್ಯತೆ ಇರುತ್ತದೆ. ಈ ಹಿನ್ನೆಲೆಯಲ್ಲಿ ಸಾರ್ವಜನಿಕರು ತಮ್ಮ ಆರೋಗ್ಯದ ಹಿತದೃಷ್ಟಿಯಿಂದ ಸೊಳ್ಳೆಗಳಿಂದ ಹರಡುವ ಮಾರಕ ರೋಗಗಳಾದ ಡೆಂಗ್ಯೂ, ಚಿಕೂನ್ ಗುನ್ಯಾ, ಮಲೇರಿಯಾ ಮತ್ತು ಆನೆಕಾಲು ರೋಗಗಳ ವಿರುದ್ಧ ತೀವ್ರ ನಿಗಾ ಹಾಗೂ ಮುನ್ನೆಚ್ಚರಿಕೆ ವಹಿಸುವುದು ಅತ್ಯಂತ ಅಗತ್ಯವಾಗಿದೆ ಎಂದು ಬೀದರ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ತಿಳಿಸಿದ್ದಾರೆ.

ಸೊಳ್ಳೆಗಳ ನಿಯಂತ್ರಣ ಮತ್ತು ರೋಗಗಳಿಂದ ದೂರವಿರಲು ಸಾರ್ವಜನಿಕರು ಈ ಕೆಳಕಂಡ ಮುನ್ನೆಚ್ಚರಿಕೆ ಕ್ರಮಗಳನ್ನು ಕಡ್ಡಾಯವಾಗಿ ಪಾಲಿಸಬೇಕೆಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಿಬ್ಬಂದಿಗಳು ಲಾರ್ವ ಸಮೀಕ್ಷೆಗಾಗಿ ಮನೆ–ಮನೆಗೆ ಭೇಟಿ ನೀಡಿದಾಗ ಅವರೊಂದಿಗೆ ಸಹಕಾರ ನೀಡಬೇಕು.

ಮನೆಯ ಸುತ್ತಮುತ್ತಲಿನ ಖಾಲಿ ಜಾಗಗಳಲ್ಲಿ ನೀರು ನಿಲ್ಲದಂತೆ ನೋಡಿಕೊಳ್ಳಿ ಟೆರೇಸ್, ಹಳೆಯ ಟೈರುಗಳು, ಪ್ಲಾಸ್ಟಿಕ್ ಕಪ್‌ಗಳು, ಎಳನೀರಿನ ಬೋಂಡಾಗಳು ಮತ್ತು ಒಡೆದ ಮಡಕೆಗಳಲ್ಲಿ ಮಳೆನೀರು ಸಂಗ್ರಹವಾಗದಂತೆ ತಕ್ಷಣ ವಿಲೇವಾರಿ ಮಾಡಿ. ನೀರಿನ ಪರಿಕರಗಳ ಸ್ವಚ್ಛತೆ ಮನೆಯಲ್ಲಿ ನೀರು ಸಂಗ್ರಹಿಸಿಡುವ ಡ್ರಮ್‌ಗಳು, ಸಿಂಟೆಕ್ಸ್ ಟ್ಯಾಂಕ್‌ಗಳು ಹಾಗೂ ಬಕೆಟ್‌ಗಳನ್ನು ವಾರಕ್ಕೊಮ್ಮೆ ಸಂಪೂರ್ಣವಾಗಿ ಖಾಲಿ ಮಾಡಿ. ತೊಳೆದು, ಒಣಗಿಸಿ ನಂತರವೇ ಹೊಸ ನೀರನ್ನು ತುಂಬಿಸಿ. ಇವುಗಳನ್ನು ಯಾವಾಗಲೂ ಮುಚ್ಚಳದಿಂದ ಮುಚ್ಚಿಡಿ ಹಾಗೆ ವಾರದಲ್ಲಿ ಒಂದು ದಿನವನ್ನು "ಡ್ರೈ ಡೇ" (ನೀರಿನ ಪರಿಕರಗಳನ್ನು ಒಣಗಿಸುವುದು)(ಉದಾಹರಣೆಗೆ ಭಾನುವಾರ) "ಡ್ರೈ ಡೇ" ದಿನ'ವನ್ನಾಗಿ ಆಚರಿಸಿ, ಮನೆಯ ಒಳಗಿನ ಮತ್ತು ಸುತ್ತಮುತ್ತಲಿನ ಎಲ್ಲಾ ನೀರಿನ ಮೂಲಗಳನ್ನು ಒಣಗಿಸಿ ಸೊಳ್ಳೆಗಳ ಲಾರ್ವಾಗಳು (ಹುಳುಗಳು) ನಾಶವಾಗುವಂತೆ ಮಾಡಬೇಕು.

ರಾತ್ರಿ ಮತ್ತು ಹಗಲು ವೇಳೆಯಲ್ಲಿ ಮಲಗುವಾಗ ಕಡ್ಡಾಯವಾಗಿ ಸೊಳ್ಳೆ ಪರದೆಗಳನ್ನು ಬಳಸಿ (ವಿಶೇಷವಾಗಿ ಮಕ್ಕಳು ಮತ್ತು ವೃದ್ಧರು) ದೇಹವನ್ನು ಪೂರ್ಣವಾಗಿ ಮುಚ್ಚುವಂತಹ ತಿಳಿ ಬಣ್ಣದ ಬಟ್ಟೆಗಳನ್ನು ಧರಿಸಿ. ಸೊಳ್ಳೆ ನಿವಾರಕ ಕ್ರೀಮ್ ಅಥವಾ ಕ್ವಾಯಿಲ್‌ಗಳನ್ನು ಬಳಸಿ ಸೊಳ್ಳೆ ಕಡಿತದಿಂದ ರಕ್ಷಣೆ ಪಡೆದುಕೊಳ್ಳಿ, ತೀವ್ರ ಜ್ವರ, ತಲೆನೋವು, ಕಣ್ಣುಗಳ ಹಿಂಭಾಗದಲ್ಲಿ ನೋವು, ಗಂಟು ಮತ್ತು ಸ್ನಾಯುಗಳ ನೋವು ಅಥವಾ ಚರ್ಮದ ಮೇಲೆ ಕೆಂಪು ಕಲೆಗಳು ಇಂತಹ ಲಕ್ಷಣಗಳು ಕಂಡು ಬಂದರೆ, ಸ್ವಯಂ ಚಿಕಿತ್ಸೆ ಮೆಡಿಕಲ್ ಶಾಪ್‌ಗಳಿಂದ ತಾವೇ ಮಾತ್ರೆ ತೆಗೆದುಕೊಳ್ಳಬೇಡಿ, ತಕ್ಷಣವೇ ಹತ್ತಿರದ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ ಉಚಿತ ತಪಾಸಣೆ ಮತ್ತು ಚಿಕಿತ್ಸೆ ಪಡೆದುಕೊಳ್ಳಬೇಕು. ಸೊಳ್ಳೆಗಳ ಉತ್ಪತ್ತಿಯನ್ನು ತಡೆಗಟ್ಟುವುದು ಸಾರ್ವಜನಿಕರು ಸಹಕಾರಿಸಬೇಕು ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯಾಗಿದೆ. ನಮ್ಮ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳುವ ಮೂಲಕ ಸಾಂಕ್ರಾಮಿಕ ರೋಗ ಮುಕ್ತ ಸಮಾಜವನ್ನು ನಿರ್ಮಿಸೋಣ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರಕಾರಿ ಶಾಲೆಗಳಿಗೆ ದಾಖಲಿಸಿ



- **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**

ತಾಲೂಕಿನ ದಾಡಗಿ ಗ್ರಾಮದ ಸರಕಾರಿ ಪ್ರೌಢ ಶಾಲೆಯಲ್ಲಿ ಸೋಮವಾರ ತರಗತಿಗಳು ಸಂಭ್ರಮದಿಂದ ಆರಂಭಗೊಂಡವು.

ಶಾಲೆಯ ಹಿರಿಯ ವಿದ್ಯಾರ್ಥಿಗಳು ಡ್ರಮ್ ಬಾರಿಸಿ ಕಿರಿಯ ವಿದ್ಯಾರ್ಥಿಗಳನ್ನು ಸ್ವಾಗತಿಸಿದರು. ಶಿಕ್ಷಕರು ಮಕ್ಕಳ ಮೇಲೆ ಪುಷ್ಪ ಸುರಿದು, ಸಿಹಿ ನೀಡಿ ತರಗತಿಗೆ ಬರಮಾಡಿಕೊಂಡರು. ಎಸ್‌ಡಿಎಂಸಿ ಅಧ್ಯಕ್ಷ ಅರವಿಂದ ಎಖ್ಖೇಳೆ ಅವರು ಮಕ್ಕಳಿಗೆ ಪಠ್ಯಪುಸ್ತಕ ವಿತರಿಸಿದರು. ನಂತರ ಮಾತನಾಡಿದ ಅವರು, ಸರಕಾರಿ ಶಾಲೆಗಳಲ್ಲಿ ಗುಣಾತ್ಮಕ ಶಿಕ್ಷಣಕ್ಕೆ ಆದ್ಯತೆ ನೀಡಲಾಗುತ್ತಿದೆ. ಪೋಷಕರು ತಮ್ಮ ಮಕ್ಕಳನ್ನು ಸರಕಾರಿ ಶಾಲೆಗೆ ಪ್ರವೇಶ ಕಲ್ಪಿಸಿ ಸರಕಾರಿ ಶಾಲೆಗಳಲ್ಲಿ ದಾಖಲಾತಿ ಹೆಚ್ಚಿಸಲು ಪ್ರಯತ್ನಿಸಬೇಕು ಎಂದರು. ಸರಕಾರಿ ಶಾಲೆಗಳಲ್ಲಿ ಶಿಕ್ಷಣದ ಜತೆಗೆ ಉಚಿತವಾಗಿ ಪಠ್ಯಪುಸ್ತಕ, ಸಮವಸ್ತ್ರ, ಸಾಕ್ಸ್, ಶೂ ಸೇರಿ ಮತ್ತಿತರ ಸವಲತ್ತು ನೀಡಲಾಗುತ್ತಿದ್ದು ಮಕ್ಕಳು ಅವುಗಳ ಸದ್ಬಳಕೆ ಮಾಡಿಕೊಂಡು ಶೈಕ್ಷಣಿಕವಾಗಿ ಪ್ರಗತಿ ಸಾಧಿಸಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಸರಕಾರಿ ಪ್ರಾಥಮಿಕ ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ದಿಲೀಪ ತಮಾಸಂಗೆ ಪ್ರೌಢ ಶಾಲೆಯ ಪ್ರಭಾರಿ ಮುಖ್ಯಗುರು ದೇವದಾಸ್, ಹಿರಿಯ ಶಿಕ್ಷಕರಾದ ಸತೀಶ ಸಿದ್ದೇಶ್ವರೆ, ರಾಮದಾಸ್ ವಾಂಜ್ರೆ, ಸಂತೋಷ ವಾಡೆ, ಜಯಂತಿ ಹೆಚ್, ರೇಖಾ, ಅರುಣಾ ಘಂಟೆ, ಪ್ರಭಾವತಿ ಸೇರಿದಂತೆ ಹಲವರು ಇದ್ದರು.

# ಬೆಳ್ಳಂಬೆಳ್ಳಗೆ ರಸ್ತೆ ಪಕ್ಕದ ಕಂದಕ್ಕೆ ಉರುಳಿದ ಮಿನಿ ಲಾರಿ

## ಸ್ಟೀರಿಂಗ್ ರಾಡ್ ಕಟ್ಟಾದ ಪರಿಣಾಮ ಅವಘಡ – ಚಾಲಕ, ಕ್ಲೀನರ್ ಪ್ರಾಣಾಪಾಯದಿಂದ ಪಾರು

- **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**



ರಾಷ್ಟ್ರೀಯ ಹೆದ್ದಾರಿ 150/ಎರ ಬೈಲೂರು ಹಾಗೂ ಸಿಂಧಿಗೇರಿ ಗ್ರಾಮಗಳ ನಡುವಿನ ರಸ್ತೆಯಲ್ಲಿ ಇಂದು ಬೆಳಗಿನ ಜಾವ ಮಿನಿ ಲಾರಿಯೊಂದು ರಸ್ತೆ ಪಕ್ಕದ ಕಂದಕ್ಕೆ ಉರುಳಿದ ಘಟನೆ ನಡೆದಿದೆ. ಮಾಹಿತಿಯ ಪ್ರಕಾರ, ಸಂಚರಿಸುತ್ತಿದ್ದ ವೇಳೆ ಮಿನಿ ಲಾರಿಯ ಸ್ಟೀರಿಂಗ್ ರಾಡ್ ಸಡನ್ನಾಗಿ ಕಟ್ಟಾಗಿದ್ದು, ವಾಹನದ ನಿಯಂತ್ರಣ ತಪ್ಪಿ ರಸ್ತೆ ಪಕ್ಕದ ಕಂದಕ್ಕೆ ಉರುಳಿದೆ. ಅದೃಷ್ಟವಶಾತ್ ಘಟನೆ ನಡೆದ ಸಮಯದಲ್ಲಿ ಲಾರಿಯ ಮುಂದೆ ಹಾಗೂ ಹಿಂದೆ ಯಾವುದೇ ವಾಹನಗಳು ಸಂಚರಿಸುತ್ತಿರಲಿಲ್ಲ. ಇದರಿಂದ ಸಂಭವಿಸಬಹುದಾಗಿದ್ದ ದೊಡ್ಡ ಅನಾಹುತ ತಪ್ಪಿದಂತಾಗಿದೆ. ಅವಘಡದಲ್ಲಿ ಮಿನಿ ಲಾರಿಯ ಚಾಲಕ ಹಾಗೂ ಕ್ಲೀನರ್ ಇಬ್ಬರೂ ಪ್ರಾಣಾಪಾಯದಿಂದ ಪಾರಾಗಿದ್ದು, ಅವರಿಗೆ ಸಣ್ಣಪುಟ್ಟ ಗಾಯಗಳಾಗಿವೆ. ಗಾಯಾಳುಗಳಿಗೆ ಸ್ಥಳದಲ್ಲೇ ಪ್ರಾಥಮಿಕ ಚಿಕಿತ್ಸೆ ನೀಡಲಾಗಿದೆ ಎಂದು ತಿಳಿದುಬಂದಿದೆ.

ಘಟನೆಯಿಂದ ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಗಿದ್ದರೂ, ಯಾವುದೇ ಪ್ರಾಣಹಾನಿ ಸಂಭವಿಸದಿರುವುದು ಸಮಾಧಾನದ ಸಂಗತಿಯಾಗಿದೆ. ಈ ಕುರಿತು ಕುರುಗೋಡು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ದಾಖಲಾಗಿದ್ದು, ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

# ನಕಲಿ ವೈದ್ಯರ ಮೇಲೆ ದಾಳಿ

- **ಮಲ್ಲಮ್ಮ ನುಡಿ ವಾರ್ತೆಮುದಗಲ್**



ಪಟ್ಟಣದ ಆದರ್ಶ ಕ್ಲೀನಿಕ್ ಹಾಗೂ ನಕಲಿ ವೈದ್ಯರ ಮೇಲೆ ಜಿಲ್ಲಾ ಆಯುಷ್ ಅಧಿಕಾರಿ ಶಂಕರಗೌಡ ಪಾಟೀಲ್ ಸೋಮವಾರ ದಾಳಿ ಮಾಡಿದರು. ನಂತರ ಸುದ್ದಿಗಾರರೊಂದಿಗೆ ಮಾತನಾಡಿ ನಾಗರಾಜ ಪಾಟೀಲ್ ಎಂಬುವರು ಆದರ್ಶ ಮತ್ತು ನಕಲಿ ವೈದ್ಯರ ಹಾವಳಿ ಹೆಚ್ಚಾಗಿದೆ ಎಂದು ಆರೋಗ್ಯ ಇಲಾಖೆಗೆ ದೂರು ನೀಡಿದ್ದರು. ದೂರನ್ನಾಧರಿಸಿ ಪಟ್ಟಣದ ಆದರ್ಶ ಕ್ಲೀನಿಕ್ ಮತ್ತು ನಾನಾ ನಕಲಿ ವೈದ್ಯರ ಕ್ಲೀನೀಕ್ ಗಳ ಮೇಲೆ ದಾಳಿ ಮಾಡಿದಾಗ ಆದರ್ಶ ಕ್ಲೀನಿಕ್‌ನಲ್ಲಿ ಅನಧಿಕೃತ ಚಿಕಿತ್ಸೆ ನೀಡುವುದು ಕಂಡುಬಂದಿರುವುದಿಲ್ಲ. ಹಾಗೂ ನಕಲಿ ವೈದ್ಯರು ಕ್ಲೀನೀಕ್ ಗಳಿಗೆ ಬೀಗ ಹಾಕಿರುವುದು ಕಂಡುಬಂತು. ಇದರಿಂದ ಜಿಲ್ಲಾ ಆಯುಷ್ ಅಧಿಕಾರಿ ಬಂದ ದಾರಿಗೆ ಸುಂಕವಿಲ್ಲದಂತೆ ತೆರಳಿದರು. ಈ ಕುರಿತು ನಕಲಿ ವೈದ್ಯರಿಗೆ ನೋಟೀಸ್ ನೀಡಲಾಗುವುದು ಎಂದರು. ಈ ವೇಳೆ ತಾಲೂಕಾ ಆರೋಗ್ಯ ಅಧಿಕಾರಿ ಅಮರೇಶ ಪಾಟೀಲ್, ವೈದ್ಯಾಧಿಕಾರಿ ದ್ಯಾಮಣ್ಣ ಹುಲ್ಲೂರು ಇದ್ದರು.

# ವಿದ್ಯಾರ್ಥಿಗಳ ಕಲಿಕೆಯಲ್ಲಿ ನಿರಂತರ ಪ್ರಯತ್ನ ಇರಲಿ: ಜಿಲ್ಲಾಧಿಕಾರಿ ಪೂವಿತಾ ಎಸ್.

- **ಮಲ್ಲಮ್ಮ ನುಡಿ ವಾರ್ತೆ ರಾಯಚೂರು**



ಜೂ.01: ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಉತ್ತಮವಾದ ಗುರಿಯನ್ನು ಇಟ್ಟುಕೊಳ್ಳಬೇಕು. ಹಾಗೆಯೆ ಆ ಗುರಿಯನ್ನು ತಲುಪಲು ಕಲಿಕೆಯಲ್ಲಿ ನಿರಂತರ ಪ್ರಯತ್ನ ಇದ್ದಾಗ ಮಾತ್ರ ತಾವು ಸಾಧನೆಗೈಯುವುದರೊಂದಿಗೆ ಸಮಾಜದಲ್ಲಿ ಮಹತ್ತರವಾದ ಬದಲಾವಣೆಯನ್ನು ತರಲು ಸಾಧ್ಯ ಎಂದು ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಹೇಳಿದರು. ಜೂನ್ 01ರ ಸೋಮವಾರ ದಂದು ರಾಯಚೂರು ನಗರದ ರೈಲ್ವೆ ಸ್ಟೇಷನ್ ರಸ್ತೆಯ ಬಾಲಕಿಯರ ಸರ್ಕಾರಿ ಪ್ರೌಢ ಶಾಲೆಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆಯ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಶಿಕ್ಷಣದ ಜೊತೆಗೆ ವಿದ್ಯಾರ್ಥಿಗಳು ಉತ್ತಮ ಜೀವನದ ಮೌಲ್ಯಗಳು, ಸಂಸ್ಕಾರಗಳನ್ನು ತಮ್ಮ ಜೀವನದಲ್ಲಿ ರೂಢಿಸಿಕೊಳ್ಳಬೇಕು. ಚೆನ್ನಾಗಿ ಓದಿ ಉನ್ನತ ಹುದ್ದೆಗಳಾದ ಜಿಲ್ಲಾಧಿಕಾರಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಅಧಿಕಾರಿ ಸೇರಿದಂತೆ ಇತರೆ ವಿವಿಧ ಉನ್ನತ ಹುದ್ದೆಗಳ ಕನಸು ಕಾಣಬೇಕು. ವಿದ್ಯಾರ್ಥಿಗಳು ಯಾರು ಶಾಲೆಯನ್ನು ಬಿಡದಂತೆ ನೋಡಿಕೊಳ್ಳಬೇಕು. ಶಾಲೆ ಬಿಟ್ಟಲಿ ಮರಳಿ ಶಾಲೆಗೆ ಕರೆ ತರುವ ಕೆಲಸ ಶಿಕ್ಷಕರಿಂದ ಆಗಬೇಕೆಂದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ ಅವರು ಮಾತನಾಡಿ, ಶಾಲೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಮಕ್ಕಳನ್ನು ನೋಡಿ ನನಗೆ ಸಂತೋಷವಾಗಿದೆ. ಮಕ್ಕಳನ್ನು ನೋಡಿ, ನಮ್ಮ ಬಾಲ್ಯದ ನೆನಪು ಆಗುತ್ತದೆ. ಮಕ್ಕಳು ಒಂದು ಗುರಿಯನ್ನು ಇಟ್ಟಕೊಳ್ಳಬೇಕು. ಆ ಗುರಿಯನ್ನು ಸಾಧಿಸಲು ಸತತ ಪ್ರಯತ್ನ ಮಾಡಬೇಕು. ಕಳೆದ ವರ್ಷದಂತೆ ಈ ವರ್ಷವು ವಿದ್ಯಾರ್ಥಿಗಳು ಹೆಚ್ಚಿನ ಮಟ್ಟದಲ್ಲಿ ಸಾಧ್ಯನೆ ಮಾಡಬೇಕು. ಅಲ್ಲದೆ ಶಾಲೆಯಲ್ಲಿ ಕಿಶೋರಿ ಕೇಂದ್ರವನ್ನು ಸ್ಥಾಪಿಸಲಾಗುತ್ತದೆ. ಅಲ್ಲಿಗೆ ವಿದ್ಯಾರ್ಥಿಗಳು ಭೇಟಿ ನೀಡಿ, ಮಾಹಿತಿ ಪಡೆಯಬೇಕು. ಅಲ್ಲದೆ ನಿಮ್ಮ ಗೆಳೆಯರಿಗೆ ಈ ಮಾಹಿತಿಯನ್ನು ಹಂಚಿಕೊಳ್ಳಬೇಕು ಎಂದರು. ಇದೇ ಸಂದರ್ಭದಲ್ಲಿ ಸಾಂಕೇತಿಕವಾಗಿ ಶಾಲಾ ಮಕ್ಕಳಿಗೆ ಬಟ್ಟೆ ಹಾಗೂ ಪುಸ್ತಕಗಳನ್ನು ಜಿಲ್ಲಾಧಿಕಾರಿಗಳು ಸೇರಿದಂತೆ ಇತರೆ ವಿವಿಧ ಗಣ್ಯರಿಂದ ವಿತರಣೆ ಮಾಡಲಾಯಿತು. ಕಿಶೋರಿ ಕೇಂದ್ರ ಪರಿಶೀಲನೆ: ಬಾಲಕಿಯರಿಗೆ ಆರೋಗ್ಯ ಮತ್ತು ಶುಚಿತ್ವದ ಬಗ್ಗೆ ಜಾಗೃತಿ ಮೂಡಿಸಲು ನಗರದ ರೈಲ್ವೆಸ್ಟೇಷನ್ ರಸ್ತೆಯ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನಲ್ಲಿ ಆರಂಭಿಸಿರುವ ಕಿಶೋರಿ ಕೇಂದ್ರವು ಉದ್ಘಾಟನೆಗೆ ಸಿದ್ಧವಾಗಿದ್ದು, ಜಿಲ್ಲಾಧಿಕಾರಿಗಳ ಭೇಟಿ ನೀಡಿ ಪರಿಶೀಲನೆ ನಡೆಸಿ, ಸಣ್ಣಪುಟ್ಟ ಕೆಲಸಗಳನ್ನು ಆದಷ್ಟು ಬೇಗ ಮುಗಿಸಿ ಉದ್ಘಾಟನೆ ಅನುಕೂಲ ಮಾಡಬೇಕೆಂದು ಸ್ಥಳದಲ್ಲಿದ್ದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು. ಇದೇ ಸಂದರ್ಭದಲ್ಲಿ ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಮಲ್ಲಿಕಾರ್ಜುನ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಸೋಮಶೇಖರಪ್ಪ ಹೊಕ್ರಾಣಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ. ಸುರೇಂದ್ರ ಬಾಬು, ರಾಯಚೂರು ತಾಲೂಕು ಕ್ಷೇತ್ರ ಶಿಕ್ಷಣಾಧಿಕಾರಿ ಈರಣ್ಣ ಕೋಸಗಿ, ಬಾಲಕಿಯರ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಕುಂಟೇಪ್ಪ ಸೇರಿದಂತೆ ಶಾಲೆಯ ಮುಖ್ಯಗುರು, ಶಿಕ್ಷಕರು, ವಿದ್ಯಾರ್ಥಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ವೃದ್ಧಾಶ್ರಮದಲ್ಲಿ ಜನಪದ ಕಳ್ಳು–ಬಳ್ಳಿ ಕಾರ್ಯಕ್ರಮ: ಹಿರಿಯರಲ್ಲಿ ಸಂಭ್ರಮ

- **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ**



ಆಧುನಿಕ ಜಗತ್ತಿನ ಬೆಳವಣಿಗೆಯ ನಡುವೆ ಜನಪದ ಪರಂಪರೆ ಮರೆಯಾಗುತ್ತಿರುವ ಈ ಕಾಲಘಟ್ಟದಲ್ಲಿ ಯುವ ಪೀಳಿಗೆಗೆ ಜನಪದ ಸಂಸ್ಕೃತಿಯನ್ನು ಪರಿಚಯಿಸುವುದು ಅಗತ್ಯವಾಗಿದೆ ಎಂದು ಜನಪದ ಕಲಾವಿದ ಗವಿಸಿದ್ದಯ್ಯ ಹಳ್ಳಿಕೇರಿಮಠ ಅಭಿಪ್ರಾಯಪಟ್ಟರು.

ಕೊಪ್ಪಳ ತಾಲ್ಲೂಕಿನ ಇರಕಲ್ಲಗಡದಲ್ಲಿರುವ ಮೈತ್ರಿ ವೃದ್ಧಾಶ್ರಮದಲ್ಲಿ ಜನಪದ ಕಳ್ಳು–ಬಳ್ಳಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಕಾರ್ಯಕ್ರಮವನ್ನು ಹಿರಿಯ ನಾಗರಿಕರು ಹಾಗೂ ಗಣ್ಯರು ಸಸಿಗೆ ನೀರೆರೆಯುವ ಮೂಲಕ ಉದ್ಘಾಟಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಗವಿಸಿದ್ದಯ್ಯ ಹಳ್ಳಿಕೇರಿಮಠ, ವೃದ್ಧಾಶ್ರಮಗಳಲ್ಲಿ ಆಯೋಜಿಸುವ ಜನಪದ ಕಳ್ಳು–ಬಳ್ಳಿ ಕಾರ್ಯಕ್ರಮಗಳು ಕೇವಲ ಮನರಂಜನೆಗೆ ಸೀಮಿತವಾಗದೇ, ಸಾಂಸ್ಕೃತಿಕ ಜಾಗೃತಿ ಮತ್ತು ಸಾಮಾಜಿಕ ಸೌಹಾರ್ದತೆಯನ್ನು ಬೆಳೆಸುವ ಮಹತ್ವದ ವೇದಿಕೆಯಾಗಿವೆ ಎಂದರು. ಇಂತಹ ಕಾರ್ಯಕ್ರಮಗಳು ಹಿರಿಯ ನಾಗರಿಕರಿಗೆ ಮಾನಸಿಕ ಉಲ್ಲಾಸ ನೀಡುವುದರ ಜೊತೆಗೆ ಜನಪದ ಕಲೆಯ ಸಂರಕ್ಷಣೆಗೆ ಸಹಕಾರಿಯಾಗುತ್ತವೆ ಎಂದು ತಿಳಿಸಿದರು. ಪ್ರಾಧ್ಯಾಪಕರಾದ ಡಾ. ನಿಂಗಪ್ಪ ಕಂಬಳಿ ಮಾತನಾಡಿ, ಜನಪದ ಕಲಾವಿದ ಗವಿಸಿದ್ದಯ್ಯ ಹಳ್ಳಿಕೇರಿಮಠ ಹಾಗೂ ಯುವ ಸಾಹಿತಿ ಬಿ.ಎನ್. ಹೊರಪೇಟಿ ಅವರ ಜನ್ಮದಿನಾಚರಣೆಯನ್ನು ವೃದ್ಧಾಶ್ರಮದಲ್ಲಿ ಆಚರಿಸಿರುವುದು ಶ್ಲಾಘನೀಯ ಕಾರ್ಯವಾಗಿದೆ ಎಂದರು.

ಮಹಿಳಾಪರ ಚಿಂತಕಿ ಪ್ರಿಯದರ್ಶಿನಿ ಮುಂಡರಗಿಮಠ ಮಾತನಾಡಿ, ನೊಂದವರ ಮುಖದಲ್ಲಿ ಮಂದಹಾಸ ಮೂಡಿಸುವ ಕಾರ್ಯಗಳು ಸಮಾಜದಲ್ಲಿ ಹೆಚ್ಚಾಗಬೇಕಿದೆ. ಎಲ್ಲರೂ ತಮ್ಮ ನೋವುಗಳನ್ನು ಮರೆತು ಒಂದೇ ಕುಟುಂಬದ ಸದಸ್ಯರಂತೆ ಬಾಳಬೇಕು ಎಂದು ಕರೆ ನೀಡಿದರು.

ಇದೇ ಸಂದರ್ಭದಲ್ಲಿ ಗವಿಸಿದ್ದಯ್ಯ ಹಳ್ಳಿಕೇರಿಮಠ ಹಾಗೂ ಬಸವರಾಜ ಹೂಗಾರ ಅವರಿಂದ ಜನಪದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಹಿರಿಯ ನಾಗರಿಕರೊಂದಿಗೆ ಸಿಹಿ ಹಂಚುವ ಮೂಲಕ ಜನ್ಮದಿನಾಚರಣೆಯನ್ನು ಸಂಭ್ರಮದಿಂದ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಮುತ್ತಣ್ಣ, ಪರಸಪ್ಪ, ಸಿಬ್ಬಂದಿ ವರ್ಗ ಹಾಗೂ ವೃದ್ಧಾಶ್ರಮದ ಹಿರಿಯ ನಾಗರಿಕರು ಉಪಸ್ಥಿತರಿದ್ದರು. ಬಿ.ಎನ್. ಹೊರಪೇಟಿ ಪ್ರಾಸ್ತಾವಿಕವಾಗಿ ಮಾತನಾಡಿ, ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ಮಕ್ಕಳ ಪ್ರತಿಭೆ ಅನಾವರಣಕ್ಕೆ ಬೇಸಿಗೆ ಶಿಬಿರ ಸಹಕಾರಿ:ವಿಶ್ವರಾಧ್ಯ ಇಜೇರಿ

- **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**



ಜೂ.01–ಮಕ್ಕಳಲ್ಲಿ ಅಡಗಿರುವ ಪ್ರತಿಭೆಯನ್ನು ಗುರುತಿಸಿ ಹೊರತರುವಲ್ಲಿ ಬೇಸಿಗೆ ಶಿಬಿರವು ಪ್ರಮುಖ ಪಾತ್ರವಹಿಸಲಿದ್ದು, ಬಾಲ ಭವನವು ಮಕ್ಕಳಿಗೆ ಈ ಉಚಿತ ಬೇಸಿಗೆ ಶಿಬಿರವು ಹಮ್ಮಿಕೊಂಡು ಉತ್ತಮ ಕಾರ್ಯವನ್ನು ಮಾಡುತ್ತಿದೆ ಎಂದು ಕಲಬುರಗಿ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ವಿಶ್ವರಾಧ್ಯ ಇಜೇರಿ ಅವರು ಹೇಳಿದರು. ರಾಜ್ಯ ಬಾಲ ಭವನ ಸೊಸೈಟಿ ಬೆಂಗಳೂರು, ಕಲಬುರಗಿ ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ಬಾಲ ಭವನ ಸಮಿತಿ ಹಾಗೂ ಕಲಬುರಗಿ ರಂಗಾಯಣ ಇವುಗಳ ಸಂಯುಕ್ತಾಶ್ರಯದಲ್ಲಿ ಕಲಬುರಗಿ ಕರ್ನಾಟಕ ರಂಗಾಯಣ ಸಭಾಂಗಣದಲ್ಲಿ ಶುಕ್ರವಾರ ಹಮ್ಮಿಕೊಳ್ಳಲಾದ 2026–27ನೇ ಸಾಲಿನ ಜಿಲ್ಲಾ ಮಟ್ಟದ 15 ದಿನಗಳ ಉಚಿತ ಬೇಸಿಗೆ ಶಿಬಿರದ ಸಮಾರೋಪ ಸಮಾರಂಭದಲ್ಲಿ ಮತನಾಡಿ, ಮಕ್ಕಳ ಪ್ರತಿಭೆ ಅನಾವರಣಕ್ಕೆ ಈ ಬೇಸಿಗೆ ಶಿಬಿರವು ಸಹಕಾರಿಯಾಗಿದ್ದು, ಪ್ರತಿ ವರ್ಷವು ಕೂಡಾ ಇದೆ ತೆರನಾದ ಕಾರ್ಯಕ್ರಮವನ್ನು ಆಯೋಜಿಸಬೇಕು ಎಂದು ಹೇಳಿದರು.

ಕಲಬುರಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಶಿವಶರಣಪ್ಪ ಅವರು ಮಾತನಾಡಿ, ಈ 15 ದಿನಗಳ ಬೇಸಿಗೆ ಶಿಬಿರದಲ್ಲಿ ಮಕ್ಕಳು ಚಿತ್ರಕಲೆ, ಕರಕುಶಲ ಕಲೆ, ಜೇಡಿ ಮಣ್ಣಿನಿಂದ ಮಾಡಿದಂತಹ ಆಕೃತಿಗಳನ್ನು ತುಂಬಾ ಉತ್ಸಾಹದಿಂದ ಮಾಡಿದ್ದು, ಮಕ್ಕಳಲ್ಲಿ ಅಡಗಿರುವ ಸೂಪ್ತ ಪ್ರತಿಭೆಯನ್ನು ಹೊರಹಾಕುವಲ್ಲಿ ಸಂಪನ್ಮೂಲ ವ್ಯಕ್ತಿಗಳ ಪಾತ್ರ ತುಂಬಾ ಮಹತ್ವದಾಗಿದೆ ಎಂದು ತಿಳಿಸಿದರು. ಕಲಬುರಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ರಾಜಕುಮಾರ ರಾಠೋಡ ಅವರು ಮಾತನಾಡಿ, 15 ದಿನಗಳ ಬೇಸಿಗೆ ಶಿಬಿರದಲ್ಲಿ ಮಕ್ಕಳು ವಿವಿಧ ಚಟುವಟಿಕೆಗಳಲ್ಲಿ ಭಾಗವಹಿಸಿದ್ದು, ಮಕ್ಕಳ ಪ್ರತಿಭೆಯನ್ನು ಹೊರ ಹಾಕುವಲ್ಲಿ ಬಾಲ ಭವನವು ಬುನಾದಿಯಾಗಿದೆ. ಎಲ್ಲಾ ಪೋಷಕರು ತಮ್ಮ ಮಕ್ಕಳಿಗೆ ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸಲು ಪ್ರೇರಣೆ ನೀಡಬೇಕು ಎಂದು ಹೇಳಿದರು. ಬೆಂಗಳೂರಿನ ರಾಜ್ಯ ಬಾಲ ಭವನ ಸೊಸೈಟಿಯ ಉಪಾಧ್ಯಕ್ಷರಾದ ಅನಿಲ ಕುಮಾರ ಜಮಾದಾರ ಅವರು ಮಾತನಾಡಿ, ಪಾಲಕರು ಸಹ ತುಂಬಾ ಮುತುವರ್ಜಿವಹಿಸಿ ತಮ್ಮ ಮಕ್ಕಳನ್ನು ಬೆಳಿಗ್ಗೆ ರಡಿ ಮಾಡಿ ಈ ಶಿಬಿರಕ್ಕೆ ಕರೆದುಕೊಂಡು ಬರುವುದು ನೋಡಿ ತುಂಬಾ ಸಂತೋಷವಾಗಿದೆ. ಪಾಲಕರು ತಮ್ಮ ಮಕ್ಕಳಿಗೆ ಹೆಚ್ಚಿನ ಅಂಕಗಳನ್ನು ಪಡೆದುಕೊಳ್ಳುವಲ್ಲಿ ಆದ್ಯತೆಯನ್ನು ನೀಡದೆ ಪಠ್ಯೇತರ ಹಾಗೂ ಸಾಂಸ್ಕೃತಿಕ ಚಟುಚಟಿಕೆಗಳಲ್ಲಿ ಭಾಗವಹಿಸಲು ಹೆಚ್ಚಿನ ಪ್ರೇರಣೆ ನೀಡಬೇಕು ಎಂದರು. ಈ ಬೇಸಿಗೆ ಶಿಬಿರದ ಸಮಾರೋಪ ಕಾರ್ಯಕ್ರಮದಲ್ಲಿ ರಾಜ್ಯ ಸರಕಾರದ ಪಂಚ ಗ್ಯಾರಂಟಿ ಯೋಜನೆಗಳಾದ ಗೃಹಲಕ್ಷ್ಮಿ ಯೋಜನೆ 2,000 ರೂ.ಗಳ ಬಗ್ಗೆ, ಶಕ್ತಿ ಯೋಜನೆಯಡಿ ಉಚಿತ ಬಸ್ ಪ್ರಯಾಣ ಸೇರಿದಂತೆ ನೀರು, ಗಿಡ–ಮರಗಳ ಸಂರಕ್ಷಣೆ, ಮದ್ಯಪಾನ ಆರೋಗ್ಯಕ್ಕೆ ಹಾನಿಕಾರಕ, ಇತ್ತೀಚಿನ ದಿನಗಳಲ್ಲಿ ಕುಟುಂಬದಲ್ಲಿ ವಯಸ್ಸಾದವರು ವೃದ್ಧಾಶ್ರಮ ಸೇರಿಕೊಳ್ಳುವ ಕುರಿತು ನಾಟಕದ ಮುಖಾಂತರ ಪ್ರದರ್ಶನ ಮಾಡಿದರು. ಇದರ ಜೊತೆಗೆ ಸಮೂಹ ನೃತ್ಯ, ಸಮೂಹ ಸಂಗೀತ, ಯೋಗ, ಕರಾಟೆ, ಚಿತ್ರಕಲೆ, ಜೇಡಿ ಮಣ್ಣಿನ ಕಲೆ, ಕರಕುಶಲ ಕಲೆ ಇತ್ಯಾದಿಗಳನ್ನು ಪ್ರದರ್ಶಿಸಿದರು. ಈ ಬೇಸಿಗೆ ಶಿಬಿರದಲ್ಲಿ ಒಟ್ಟು 59 ಮಕ್ಕಳು ಭಾಗವಹಿಸಿ ಪ್ರಯೋಜನ ಪಡೆದುಕೊಂಡರು. ಪ್ರಾರಂಭದಲ್ಲಿ ಶಿಬಿರಾರ್ಥಿ ಕುಮಾರಿ ಶಾಂತಾ ಅವರು ಸ್ವಾಗತಿಸಿದರು. ಬಾಲಕರ ಬಾಲ ಮಂದಿರದ ಸಲಹೆಗಾರ ವಿಠಲ ಕಾರ್ಯಕ್ರಮ ನಿರೂಪಿಸಿದರು. ಕೊನೆಯಲ್ಲಿ ಕಲಬುರಗಿ ಜಿಲ್ಲಾ ಬಾಲ ಭವನ ಕಚೇರಿಯ ಸಹಾಯಕರಾದ ಮಾನು ಎಂ ಹೂಗಾರ ವಂದಿಸಿದರು.

# ಗುರುಗಳನ್ನು ಸ್ಮರಿಸುವುದು ಶ್ಲಾಘನೀಯ

- **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**

ಹಳೇ ವಿದ್ಯಾರ್ಥಿಗಳು ತಮ್ಮ ಗುರುಗಳನ್ನು ಸ್ಮರಿಸುವುದು ಶ್ಲಾಘನೀಯ. ಇಂತಹ ಕಾರ್ಯಕ್ರಮಗಳು ಗುರು–ಶಿಷ್ಯ ಸಂಬಂಧವನ್ನು ಮತ್ತಷ್ಟು ಗಟ್ಟಿಗೊಳಿಸುತ್ತವೆ ಎಂದು ಪಿಎಸ್‌ಐ ರಾಜಕುಮಾರ ಚಾಮಗೊಂಡ ಅಭಿಪ್ರಾಯಪಟ್ಟರು. ತಾಲೂಕಿನ ಜ್ಯಾಂತಿ ಗ್ರಾಮದ ಮಲ್ಲಿಕಾರ್ಜುನ ದೇವಸ್ಥಾನದ ಸಭಾ ಭವನದಲ್ಲಿ 2004–2005ನೇ ಬ್ಯಾಚ್‌ನ ಎಸ್ಸೆಸ್ಸೆಲ್ಸಿ ವಿದ್ಯಾರ್ಥಿಗಳಿಂದ ಆಯೋಜಿಸಿದ್ದ ಶಿಕ್ಷಕರ ಸನ್ಮಾನ ಮತ್ತು ವಿದ್ಯಾರ್ಥಿಗಳ ಪುನರ್ಮಿಲನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಹಳೇ ವಿದ್ಯಾರ್ಥಿಗಳು ಶಾಲೆಯೊಂದಿಗಿನ ಬಾಂಧವ್ಯವನ್ನು ಉಳಿಸಿಕೊಂಡು ಸಮಾಜಕ್ಕೆ ಮಾದರಿಯಾಗಬೇಕು ಎಂದು ತಿಳಿಸಿದರು. ನಮ್ಮ ಕರ್ನಾಟಕ ಸೇನೆ ಜಿಲ್ಲಾ ಘಟಕದ ಅಧ್ಯಕ್ಷ ಗಣೇಶ ಪಾಟೀಲ್ ಅಧ್ಯಕ್ಷತೆ ವಹಿಸಿದ್ದರು. ಈ ಸಂದರ್ಭದಲ್ಲಿ ಪ್ರಮುಖರಾದ ರಮೇಶ ಚಾ–ಕುರೆ, ರಾಜಕುಮಾರ ಪಾಟೀಲ್, ರವೀಂದ್ರ ಪಾಟೀಲ್, ಉಮಕಾಂತ ಚಾಕುರೆ, ವಿಜಯಕುಮಾರ ಹನಮಶೆಟ್ಟಿ ಸೇರಿದಂತೆ ಹಳೇ ವಿದ್ಯಾರ್ಥಿಗಳಾದ ಸಂಗಮೇಶ ಸೀಗೆ, ಶಿವಕುಮಾರ ಚಿಂಚೋಳೆ, ರಜನಿಕಾಂತ ಕಂಬಾರ, ಸಿದ್ದಲಿಂಗ ಕಂಜೆ, ಶ್ರೀಕಾಂತ ಬಿರಾದಾರ್, ಶಿವಮಂಗಲ ಪಾಟೀಲ್, ಶ್ರೀಧರ ಚಾರಿ, ಮಹಾದೇವ ಹೊನ್ನಾ, ಮಲ್ಲು ಪೊಲೀಸ್ ಪಾಟೀಲ್, ಸಂತೋಷ ನಡುಮನೆಸೇರಿ 20042005ನೇ ಬ್ಯಾಚ್‌ನ ಎಸ್ಸೆಸ್ಸೆಲ್ಸಿ ವಿದ್ಯಾರ್ಥಿಗಳು ಹಾಜರಿದ್ದರು. ಸನ್ಮಾನ :ಇದೇವೇಳೆ 2004–2005ನೇ ಬ್ಯಾಚ್‌ನ ಎಸ್ಸೆಸ್ಸೆಲ್ಸಿ ವಿದ್ಯಾರ್ಥಿಗಳು ಸೇರಿ ನಿವೃತ್ತ ಶಿಕ್ಷಕರಾದ ಬಸಯ್ಯ ಸ್ವಾಮಿ, ಸ್ಯಾಮವೆಲ್, ರುಕ್ಮೀಣಿ, ಶೈಲಜಾ, ಮಳಶೆಟ್ಟೆಪ್ಪ ಗಾಡಗೆ, ಶಿಂಧೆ, ಕುಮಾರ, ಬಸವರಾಜ ಕಂಗನಕೋಟೆ, ಝೆಡ್ ಬಸವರಾಜ, ಸೋಮನಾಥ ಮುದ್ದಾ, ಶಿವಕುಮಾರ ಸಾಲಿ, ಮನೋಹರ, ಶಶಿಕಾಂತ ಮತ್ತು ನಾಗನ್ನಾಥ ಅವರನ್ನು ಸನ್ಮಾನಿಸಿ, ಗೌರವಿಸಿದರು.

Printed, Published & Owned by Ramesh Reddy, Printed at Metro Politan Media Company Limited, Plot No.15&16, KIADB Rayapur Industrial
Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104.
Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +919449732000.
PRGI NO. 120927
(RNINO:KARKAN/2011/ 48371)